ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 62

20–8–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 62

## ರಾಜ್ಯದಲ್ಲಿ ಬೀದಿನಾಯಿ ದಾಳಿಗೆ ಮತ್ತೊಂದು ಬಲಿ: ರೇಬಿಸ್‌ನಿಂದ 4 ವರ್ಷದ ಬಾಲಕಿ ಸಾವು



**ದಾವಣಗೆರೆ:** ರಾಜ್ಯದಲ್ಲಿ ಬೀದಿ ನಾಯಿಗಳ ದಾಳಿಗೆ ಮತ್ತೊಂದು ಬಲಿಯಾಗಿದೆ. ಬೀದಿ ನಾಯಿಗಳ ದಾಳಿಗೊಳಗಾಗಿ ರೇಬಿಸ್ ಕಾಯಿಲೆಯಿಂದ ಕಳೆದ 4 ತಿಂಗಳಿನಿಂದ ಆಸ್ಪತ್ರೆಯಲ್ಲಿ ಸಾವು ಬದುಕಿನ ನಡುವೆ ಹೋರಾಡುತ್ತಿದ್ದ 4 ವರ್ಷದ ಬಾಲಕಿ ಮೃತಪಟ್ಟಿದ್ದಾಳೆ.

ದಾವಣಗೆರೆ ನಗರದ ಶಾಸ್ತ್ರಿ ಲೇಔಟ್‌ನ ನಿವಾಸಿ ಮೊಹಮ್ಮದ್ ಶಾಕೀರ್ ಆಲಿ, ಅತೀಹಾ ಖಾನಂ ದಂಪತಿಯ ಮಗಳು ಖದೀರಾ ಬಾನು (4) ಮೃತ ಬಾಲಕಿ.

ಏಪ್ರಿಲ್ 27 ರಂದು ಮನೆಯ ಹೊರಗೆ ಆಟವಾಡುತ್ತಿದ್ದಾಗ ಬಾಲಕಿ ಮೇಲೆ ಬೀದಿ ನಾಯಿಗಳು ದಾಳಿ ಮಾಡಿ, ಗಂಭೀರವಾಗಿ ಗಾಯಗೊಳಿಸಿದ್ದವು. ಕೂಡಲೇ ಪೋಷಕರು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿದ್ದರು.

## ಇಂದು ಶ್ರೀ ಕೃಷ್ಣ ಜನ್ಮಾಷ್ಟಮಿ ಮಹಾ ಮೆರವಣಿಗೆ

**ದಾವಣಗೆರೆ:** ಶ್ರೀ ರಾಧಾಕೃಷ್ಣ ಯಾದವ (ಗೊಲ್ಲ) ಸಮಾಜ ದಾವಣಗೆರೆ ಇವರ ವತಿಯಿಂದ ಆಗಸ್ಟ್ 20ರ ಇಂದು ಶ್ರೀ ಕೃಷ್ಣ ಜನ್ಮಾಷ್ಟಮಿ ಮಹಾ ಮೆರವಣಿಗೆಯನ್ನು ನಗರದ ಮಹಾರಾಜಪೇಟೆಯಲ್ಲಿರುವ ವಿಠಲ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಗ್ಗೆ 5 ಗಂಟೆಗೆ ಶ್ರೀ ಗುರು ರಾಘವೇಂದ್ರ ಸ್ವಾಮಿ ಮಠದ ಪಂಡಿತ್ ಶ್ರೀ ಕೃಷ್ಣಚಾರ್ ಮಣ್ಣೂರು ಇವರಿಂದ ಪೂಜಾ ಕಾರ್ಯಕ್ರಮಗಳು ಪ್ರಾರಂಭವಾಗಲಿದ್ದು, 5:30ಕ್ಕೆ ಇಸ್ಕಾನ್ ಶ್ರೀಗಳಿಂದ ತೊಟ್ಟಿಲು ಕಾರ್ಯಕ್ರಮ, ಹರೇ ಕೃಷ್ಣ ಭಕ್ತರಿಂದ 54 ಬಗೆಯ ಭಕ್ಷ ?ಯ ಮೃಷ್ಟಾನ್ನ ಭೋಜನದ ನೈವೇದ್ಯವನ್ನು ಶ್ರೀಕೃಷ್ಣನಿಗೆ ಅರ್ಪಿಸಲಾಗುತ್ತದೆ. 6:30 ರಿಂದ ಮಹಿಳೆಯರಿಂದ ಭಜನಾ ಕಾರ್ಯಕ್ರಮ, ಬೆಳಗ್ಗೆ 8:30ಕ್ಕೆ, ಗೋಕಾಕ್ ಇಸ್ಕಾನ್ ವೆಂಕಟೇಶ್ ಪ್ರಭು ಇವರಿಂದ ಪ್ರವಚನ, ನವಲಗುಂದ ಮತ್ತು ಅಣ್ಣಿಗೆರೆ ಗೋವರ್ಧನಗಿರಿ ಪ್ರಭು ಇವರಿಂದ ಬೆಳಗ್ಗೆ 9ಕ್ಕೆ ಅಭಿಷೇಕ, ಬೆಳಗ್ಗೆ 10 ಕ್ಕೆ ಶ್ರೀ ಕೃಷ್ಣ ಯಾದವನಂದ ಸ್ವಾಮೀಜಿಗಳಿಂದ ಮಹಾ ಮಂಗಳಾರತಿ ನಡೆಯಲಿದೆ.

ಮಹಾ ಮೆರವಣಿಗೆ ಆರಂಭವಾಗಲಿದ್ದು, ವಿಠಲ ಮಹಾರಾಜ ಮಂದಿರದಿಂದ ಹಾಸಬಾವಿ ವೃತ್ತ, ಕೋದಂಡರಾಮ ದೇವಸ್ಥಾನ, ಗಡಿಯಾರ ಕಂಬ, ಬಿಎಸ್ ಚನ್ನಬಸಪ್ಪ ವೃತ್ತ ನಂತರ ವಿಠಲ ಮಂದಿರಕ್ಕೆ ಬಂದು ಮೆರವಣಿಗೆ ಸಮಾಪನಗೊಳ್ಳಲಿದೆ. ಮಧ್ಯಾಹ್ನ 1:30 ರಿಂದ ಅನ್ನಸಂತರ್ಪಣೆ ಕಾರ್ಯಕ್ರಮ ಜರುಗಲಿದೆ.

# ಹೊಸದಾಗಿ ಐದು ಪಾಲಿಕೆಗಳ ರಚನೆ

## ಜಿಬಿಎ ತಿದ್ದುಪಡಿ ವಿಧೇಯಕ ವಿಧಾನಸಭೆಯಲ್ಲಿ ಅಂಗೀಕಾರ

**ಬೆಂಗಳೂರು:** 2025ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ ತಿದ್ದುಪಡಿ ವಿಧೇಯಕವನ್ನು ವಿಧಾನಸಭೆ ಮಂಗಳವಾರ ಅಂಗೀಕರಿಸಿತು. ಬೆಂಗಳೂರು ನಗರಾಭಿವೃದ್ಧಿ ಸಚಿವರು ಆಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸದನದಲ್ಲಿ ವಿಧೇಯಕವನ್ನು ಮಂಡಿಸಿದರು. ವಿರೋಧ ಪಕ್ಷದ ನಾಯಕರು, ಶಾಸಕರು ಕೆಲಹೊತ್ತು ವಿಧೇಯಕ ಕುರಿತು ಚರ್ಚೆ ನಡೆಸಿದ ಬಳಿಕ ಅನುಮೋದನೆ ನೀಡಲಾಯಿತು.

ಬೆಂಗಳೂರು ಆಡಳಿತ ತಿದ್ದುಪಡಿ ಮಸೂದೆ ಅಂಗೀಕಾರಗೊಂಡಿದ್ದರೂ ಕೆಲವರು ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಹೀಗಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಐದು ಹೊಸ ಪಾಲಿಕೆಗಳ ವಿಚಾರದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂಬ ಅಂಶವನ್ನು ಈ ವಿಧೇಯಕದಲ್ಲಿ ಸ್ಪಷ್ಟಪಡಿಸಲಾಗಿದೆ ಎಂದು ಡಿಕೆ ಶಿವಕುಮಾರ್ ತಿಳಿಸಿದರು.

ಸದ್ಯದ ಕಾಯ್ದೆ ಪ್ರಕಾರ ಬೃಹತ್ ಬೆಂಗಳೂರು ಪ್ರಾಧಿಕಾರವು ಅಂತಹ ಅಧಿಕಾರವನ್ನು ಚಲಾಯಿಸುತ್ತದೆ ಮತ್ತು ಈ ಕಾಯಿದೆಯಡಿಯಲ್ಲಿ ರಚಿಸಲಾದ ನಗರ ನಿಗಮಗಳಿಗೆ ಸಂಬಂಧಿಸಿದಂತೆ ಈ ಕಾಯಿದೆಯ ನಿಬಂಧನೆಗಳ ಪ್ರಕಾರ ಅಂತಹ ಕಾರ್ಯಗಳನ್ನು ನಿರ್ವಹಿಸುತ್ತದೆ ಎಂದು ಅವರು ಹೇಳಿದರು.



ಪಾಲಿಕೆಗಳು ಸ್ವತಂತ್ರವಾಗಿ ಕಾರ್ಯನಿರ್ವಹಣೆ: ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ರಚಿಸಲಾಗಿರುವ ಪಾಲಿಕೆಗಳ ವಿಚಾರದಲ್ಲಿ ಪ್ರಾಧಿಕಾರ ಹಸ್ತಕ್ಷೇಪ ಮಾಡಲು ಅವಕಾಶವಿದೆ ಎಂದು ಯಾ–ರೋ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದಾರೆ. ಪಾಲಿಕೆಗಳನ್ನು ಸರ್ಕಾರದ ನಿಯಂತ್ರಣಕ್ಕೆ ತೆಗೆದುಕೊಳ್ಳಲಾಗುತ್ತಿದೆ ಎಂದು ಆಕ್ಷೇಪಿಸಲಾಗಿದೆ. ಹೀಗಾಗಿ ಈ ಅಂಶವನ್ನು ಪ್ರಸ್ತುತ ತಿದ್ದುಪಡಿ ವಿಧೇಯಕದಲ್ಲಿ ತೆಗೆದುಹಾಕಲಾಗಿದೆ. ಪಾಲಿಕೆಗಳನ್ನು ಸರ್ಕಾರದ ನಿಯಂತ್ರಣಕ್ಕೆ ತೆಗೆದುಕೊಳ್ಳುವುದಿಲ್ಲ. ಪಾಲಿಕೆಗಳು ಸ್ವತಂತ್ರವಾಗಿ ಕಾರ್ಯನಿರ್ವಹಿಸಲಿವೆ. ಪಾಲಿಕೆಗಳ ಕಾರ್ಯ ಚಟುವಟಿಕೆಗಳಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಹಸ್ತಕ್ಷೇಪ ಇಲ್ಲ ಎಂಬ ಸ್ಪಷ್ಟನೆ ನೀಡಲು ಈ ತಿದ್ದುಪಡಿ ತರಲಾಗಿದೆ ಎಂದು ಅವರು ಸದನಕ್ಕೆ ತಿಳಿಸಿದರು.

ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ 2024 ಅಡಿಯಲ್ಲಿ ಹೊಸದಾಗಿ ಐದು ನಗರ ಪಾಲಿಕೆಗಳನ್ನು ಸರ್ಕಾರ ನಿರ್ಧರಿಸಿದೆ. ಇವುಗಳ ಸಮನ್ವಯಕ್ಕಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಗೂ ವಿಧೇಯಕ ಅವಕಾಶ ಒದಗಿಸಿದೆ. ಮೇಯರ್ ಮತ್ತು ಉಪ ಮೇಯರ್‌ಗೆ 30 ತಿಂಗಳ ಅವಧಿಯನ್ನು ಒದಗಿಸುತ್ತದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಮುಖ್ಯಮಂತ್ರಿ ಅಧ್ಯಕ್ಷರಾಗಿದ್ದರೆ, ಬೆಂಗಳೂರಿನ ಅಭಿವೃದ್ಧಿ ಸಚಿವರು ಪದ ನಿಮಿತ್ತ ಉಪಾಧ್ಯಕ್ಷರಾಗಿರುತ್ತಾರೆ.

ಚರ್ಚೆ ವೇಳೆ ಪಾಲಿಕೆಗಳ ಆಡಳಿತದಲ್ಲಿ ಹಸ್ತಕ್ಷೇಪಕ್ಕೆ ಗ್ರೇಟರ್ ಬೆಂಗಳೂರು ಕಾಯ್ದೆ ಅವಕಾಶ ನೀಡಬಹುದು ಎಂಬ ಬಿಜೆಪಿ ಶಾಸಕರಾದ ಡಾ.ಸಿ.ಎನ್. ಅಶ್ವತ್ಥ ನಾರಾಯಣ ಹಾಗೂ ಸತೀಶ್ ರೆಡ್ಡಿ ಅವರ ಆಕ್ಷೇಪಕ್ಕೆ ಉತ್ತರಿಸಿದ ಡಿಕೆ ಶಿವಕುಮಾರ್, ಐದು ನಗರ ಪಾಲಿಕೆಗಳ ಚುನಾವಣೆ ಮುಗಿದ ನಂತರ ಹೊಸ ಪ್ರದೇಶಗಳನ್ನು ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಸೇರಿಸಲಾಗುವುದು ಎಂದು ಡಿಕೆ ಶಿವಕುಮಾರ್ ತಿಳಿಸಿದರು.

ಒಂದು ವೇಳೆ ಹಳ್ಳಿಗಳನ್ನು ಹೊಸ ಪ್ರದೇಶಗಳಾಗಿ ಗ್ರೇಟರ್ ಬೆಂಗಳೂರು ವ್ಯಾಪ್ತಿಗೆ ಸೇರಿಸಿದರೆ ಪಂಚಾಯಿತಿ ಸದಸ್ಯರು ಕಾರ್ಪೊರೇಟ್ ಸದಸ್ಯರಾಗಬಹುದು. ಚುನಾವಣೆ ಮುಗಿದ ನಂತರ ಪಂಚಾಯಿತಿ ಸದಸ್ಯರು ಕಾರ್ಪೊರೇಟರ್ ಆಗಬಹುದು ಎಂದು ಅವರು ಹೇಳಿದರು.

ಇಂಗ್ಲೀಷ್ ಪದಕ್ಕೆ ಆಕ್ಷೇಪ: 'ಗ್ರೇಟರ್ ಬೆಂಗಳೂರು' ಎಂಬ ಇಂಗ್ಲೀಷ್ ಪದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಕನ್ನಡ ಪದವನ್ನು ಯಾಕೆ ಆಯ್ಕೆ ಮಾಡಲಿಲ್ಲ? ಎಂದು ಉಪ ಮುಖ್ಯಮಂತ್ರಿ ಅವರನ್ನು ಕೇಳಿದರು. ಬೃಹತ್ ಬೆಂಗಳೂರು ಪ್ರಾಧಿಕಾರ ರಚನೆಯು "ವಿಕೇಂದ್ರೀಕರಣದ ಮೇಲಿನ ದಾಳಿಯಾಗಿದ್ದು, ಇದು ಪಾಲಿಕೆಗಳ ಸ್ವಾತಂತ್ರ್ಯವನ್ನು ಕಿತ್ತುಕೊಂಡು, ಅವುಗಳನ್ನು ಸರ್ಕಾರದ ಮೇಲೆ ಅವಲಂಬಿತವಾಗಿಸುತ್ತದೆ ಎಂದು ಆರೋಪಿಸಿದರು.

### ಧರ್ಮಸ್ಥಳದಲ್ಲಿ ಸರಣಿ ಕೊಲೆ ಆರೋಪ 'ಆಧಾರ ರಹಿತ'

# ಎಸ್‌ಟಿಐ ತನಿಖೆ ಮಾಡಿದ್ದು ಒಳ್ಳೆಯದು : ಡಾ. ವೀರೇಂದ್ರ ಹೆಗ್ಗಡೆ

**ಬೆಂಗಳೂರು:** ಸೌಜನ್ಯ ಕೊಲೆ ಪ್ರಕರಣ ಮತ್ತು ಎರಡು ದಶಕಗಳ ಅವಧಿಯಲ್ಲಿ ಧರ್ಮಸ್ಥಳದಾದ್ಯಂತ ನಡೆದಿರುವ ಸರಣಿ ಕೊಲೆಗಳು, ಅತ್ಯಾಚಾರಗಳು ಮತ್ತು ಸಮಾಧಿಗಳ ಕುರಿತ ಆರೋಪಗಳು "ಆಧಾರ ರಹಿತ ಹಾಗೂ ಸುಳ್ಳು" ಎಂದು ಧರ್ಮಸ್ಥಳ ಮಂಜುನಾಥ ಸ್ವಾಮಿ ದೇವಾಲಯದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರು ತಳ್ಳಿಹಾಕಿದ್ದಾರೆ. ಆದ–ರೆ ಸತ್ಯ ಬಹಿರಂಗಪಡಿಸಲು ಎಸ್‌ಐಟಿ ತನಿಖೆಯನ್ನು ಡಾ. ವೀರೇಂದ್ರ ಹೆಗಡೆ ಅವರು ಸ್ವಾಗತಿಸಿದ್ದಾರೆ.

ಈ ಆರೋಪಗಳ ತನಿಖೆಗಾಗಿ, ಕರ್ನಾಟಕ ಸರ್ಕಾರ ವಿಶೇಷ ತನಿಖಾ ತಂಡವನ್ನು (ಎಸ್‌ಐಟಿ) ರಚಿಸಿದೆ. ಇದು ಅಂತಿಮವಾಗಿ ಮಾನವ ಅವಶೇಷಗಳನ್ನು ಪತ್ತೆಹಚ್ಚಲು ಹಲವಾರು ಸ್ಥಳಗಳಲ್ಲಿ ಉತ್ಖನನ ನಡೆಸಿದೆ.

ಅಕ್ಟೋಬರ್ 9, 2012 ರಂದು ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜಿನ ಪಿಯುಸಿ ವಿದ್ಯಾರ್ಥಿನಿ ಸೌಜನ್ಯ(17) ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಲಾಗಿತ್ತು. ಈ ಬಾಲಕಿಯ ನ್ಯಾಯಕ್ಕಾಗಿ ಈಗಲೂ ಪ್ರತಿಭಟನೆಗಳು ನಡೆಯುತ್ತಿವೆ.

ಧರ್ಮಸ್ಥಳದಲ್ಲಿ ಸರಣಿ ಕೊಲೆ ಆರೋಪದ ಬಗ್ಗೆ ಎಸ್‌ಐಟಿ ತನಿಖೆ ಆರಂಭಿಸಿದ ನಂತರ ಮೊದಲ ಬಾರಿ ಪಿಟಿಐಗೆ ನೀಡಿದ ವಿಶೇಷ ಸಂದರ್ಶನದಲ್ಲಿ "ಈ ಆರೋಪಗಳು ಆಧಾರರಹಿತ ಮತ್ತು ಸುಳ್ಳು ಆರೋಪಗಳು. ಇದರಿಂದ ನನಗೆ ನಿಜವಾಗಿಯೂ ನೋವಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ವಿಷಯಗಳನ್ನು ಬಿಂಬಿಸುವ ರೀತಿ ನೈತಿಕವಾಗಿ ತಪ್ಪು" ಎಂದು ಹೇಳಿದ್ದಾರೆ.

ಗೃಹ ಸಚಿವ ಜಿ ಪರಮೇಶ್ವರ ಅವರು ವಿಧಾನಸಭೆಯಲ್ಲಿ ಎಸ್‌ಐಟಿ ಸಮಸ್ಯೆಯ ಆಳಕ್ಕೆ ಹೋಗುತ್ತದೆ ಎಂದು ನೀಡಿದ ಹೇಳಿಕೆಗೆ ಪ್ರತಿಕ್ರಿಯಿಸಿದ ಹೆಗ್ಗಡೆ, "ನಾವು ಅದೇ ದಿನ ಎಸ್‌ಐಟಿಯನ್ನು ಸ್ವಾಗತಿಸಿದ್ದೇವೆ. ರಾಜ್ಯ ಸರ್ಕಾರ ಎಸ್ ಐಟಿ ರಚಿಸಿರುವುದು ಒಳ್ಳೆಯದು ಮತ್ತು ಸತ್ಯ ಒಮ್ಮೆ ಹೊರಬರಬೇಕು. ಆರೋಪ ಕೇಳಿಬಂದಾಗ ತನಿಖೆ ಮಾಡುವುದು ಒಳ್ಳೆಯದು. ಇಲ್ಲದಿದ್ದರೆ ಅವು ಹಾಗೆಯೇ ಉಳಿಯುತ್ತವೆ" ಎಂದಿದ್ದಾರೆ.



"ಈ ತನಿಖೆ ಬೇಗನೆ ಮುಕ್ತಾಯಗೊಳ್ಳಬೇಕು ಮತ್ತು ಸಮಸ್ಯೆಯನ್ನು ಪರಿಹರಿಸಬೇಕೆಂದು ನಾವು ಬಯಸುತ್ತೇವೆ. ನಾವು ಎಲ್ಲದಕ್ಕೂ ಮುಕ್ತರಾಗಿದ್ದೇವೆ. ಎಸ್‌ಐಟಿ ಸಂಪೂರ್ಣವಾಗಿ ತನಿಖೆ ನಡೆಸಿ ತಪ್ಪಿತಸ್ಥರನ್ನು ಶಿಕ್ಷಿಸಬೇಕು" ಎಂದು ಹೆಗ್ಗಡೆ ಹೇಳಿದರು.

ಧರ್ಮಸ್ಥಳ ಮತ್ತು ಅದರ ಟ್ರಸ್ಟ್ ಅನ್ನು ಗುರಿಯಾಗಿಸಿಕೊಂಡು 14 ವರ್ಷಗಳಿಗೂ ಹೆಚ್ಚು ಕಾಲದಿಂದ "ಸಂಘಟಿತ ಅಭಿಯಾನ" ನಡೆಸಲಾಗುತ್ತಿದೆ ಎಂದು ಹೆಗ್ಗಡೆ ಆರೋಪಿಸಿದರು.

"ನಾವು ಮಾಡುತ್ತಿರುವ ಒಳ್ಳೆಯ ಕೆಲಸಗಳನ್ನು ಸಹಿಸಿಕೊಳ್ಳಲಾಗದ ಕೆಲವು ಶಕ್ತಿಗಳು ಸುಳ್ಳು ಪ್ರಚಾರ ನಡೆಸುತ್ತಿವೆ. ಆದರೆ ನಾವು ವಿಚಲಿತರಾಗುವುದಿಲ್ಲ" ಎಂದು ಅವರು ಹೇಳಿದರು.

ಧರ್ಮಸ್ಥಳದಲ್ಲಿ ಶವಗಳನ್ನು ಸಮಾಧಿ ಮಾಡಿರುವುದಾಗಿ ಮುಖವಾಡ ಧರಿಸಿದ ವ್ಯಕ್ತಿಯೊಬ್ಬ ಹೇಳಿಕೊಳ್ಳುವ ಇತ್ತೀಚಿನ ವಿಡಿಯೋಗಳನ್ನು ಉಲ್ಲೇಖಿಸಿದ ಅವರು, "ಇದು ಅಸಾಧ್ಯ. ಧರ್ಮಸ್ಥಳದಲ್ಲಿ ಯಾರಾದರೂ ಸತ್ತರೆ ಅವರಿಗೆ ಮೋಕ್ಷ ಸಿಗುತ್ತದೆ ಎಂಬ ಜನಪ್ರಿಯ ನಂಬಿಕೆ ಇದೆ. ಸಾವು ಸಂಭವಿಸಿದಾಗಲೆಲ್ಲಾ ನಾವು ಪಂಚಾಯತ್‌ಗೆ ತಿಳಿಸುತ್ತಿದ್ದೆವು ಮತ್ತು ಅವರು ಕಾನೂನು ಪ್ರಕಾರವೇ ಶವವನ್ನು ಹೂಳುತ್ತಾರೆ" ಎಂದರು. ಸಾಮಾಜಿಕ ಮಾಧ್ಯಮವು ಯುವ ಮನಸ್ಸುಗಳನ್ನು ಕಲುಷಿತಗೊಳಿಸಿದೆ ಎಂದು ಧರ್ಮಾಧಿಕಾರಿ ತೀವ್ರ ಕಳವಳ ವ್ಯಕ್ತಪಡಿಸಿದರು.

"ಈ ಪ್ರಕರಣವನ್ನು ಬಿಂಬಿಸಿದ ರೀತಿ ನಮಗೆ ಆಘಾತ ಮತ್ತು ಆಶ್ಚರ್ಯವನ್ನುಂಟು ಮಾಡಿದೆ. ಸಾಮಾಜಿಕ ಮಾಧ್ಯಮವು ಅತ್ಯಂತ ಶಕ್ತಿಶಾಲಿ ಮಾಧ್ಯಮವಾಗಿದೆ ಮತ್ತು ನಮ್ಮ ಅನೇಕ ಹಿತೈಷಿಗಳು ನಮ್ಮ ಒಳ್ಳೆಯ ಕೆಲಸವನ್ನು ಪ್ರಚಾರ ಮಾಡಲು ನಾವು ಸಾಮಾಜಿಕ ಮಾಧ್ಯಮವನ್ನು ಬಳಸಿಲ್ಲ ಎಂದು ಹೇಳುತ್ತಾರೆ. ನಾವು ವಿವಿಧ ಸಾಮಾಜಿಕ ಕಾರ್ಯಗಳ ಮೂಲಕ ಎಲ್ಲಾ ಹಳ್ಳಿಗಳನ್ನು ಮತ್ತು 55 ಲಕ್ಷ ಕುಟುಂಬಗಳನ್ನು ತಲುಪಿದ್ದೇವೆ" ಎಂದರು.

ಸೌಜನ್ಯ ಕೊಲೆ ಪ್ರಕರಣದಲ್ಲಿ ನ್ಯಾಯಕ್ಕಾಗಿ ಮತ್ತೆ ಕೇಳಿಬಂದ ಕೂಗಿಗೆ ಪ್ರತಿಕ್ರಿಯಿಸಿದ ಹೆಗ್ಗಡೆ, "ಅಂತಹ ಘಟನೆ ನಡೆದಿದೆ ಎಂದು ನಮಗೆ ತಿಳಿದಾಗ ನಾವು ಅದೇ ದಿನ ಸರ್ಕಾರಕ್ಕೆ ಮಾಹಿತಿ ನೀಡಿದ್ದೇವೆ. ಆದರೆ ನಮ್ಮ ಕುಟುಂಬದ ವಿರುದ್ಧದ ಆರೋಪಗಳು ಆಧಾರರಹಿತ. ನಮ್ಮ ಕುಟುಂಬ ಸದಸ್ಯರು ಶಿಕ್ಷಣ–ಕ್ಕಾಗಿ ವಿದೇಶದಲ್ಲಿ ಇದ್ದರು ಮತ್ತು ಈ ಸಂಬಂಧ ನಾವು ದಾಖಲೆಗಳನ್ನು ಸಲ್ಲಿಸಿದ್ದೇವೆ" ಎಂದರು.

# ಜೀವನದ ನೆನಪು ಮರುಕಳಿಸುವ ಛಾಯಾಚಿತ್ರಗಳು ಸಹಕಾರಿ : ಎಸ್ಪಿ

**ಚಿಕ್ಕಮಗಳೂರು:** ಉತ್ತಮವಾದ ಛಾಯಾಚಿತ್ರಗಳು ಜೀವನದ ನೆನಪು ಮರುಕಳಿಸಲು ಸಹಕಾರಿಯಾಗಲಿದ್ದು, ಛಾಯಾಗ್ರಾಹಣಕ್ಕೆ ಹೆಚ್ಚಿನ ಒತ್ತು ನೀಡಿದಾಗ ಮಹತ್ವ ಬರುತ್ತದೆ ಎಂದು ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿ ಡಾ. ವಿಕ್ರಮ ಅಮಟೆ ತಿಳಿಸಿದರು.

ಅವರು ಇಂದು ಬೋಳರಾಮೇಶ್ವರ ದೇವಸ್ಥಾನದ ಆವರಣದಲ್ಲಿ ಜಿಲ್ಲಾ ಛಾಯಾಗ್ರಾಹಕರ ಸಂಘ ಏರ್ಪಡಿಸಿದ್ದ ವಿಶ್ವ ಫೋಟೋಗ್ರಫಿ ದಿನಾಚರಣೆಯನ್ನು ಫೋಟೋ ಕ್ಲಿಕ್ಕಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಉತ್ತಮವಾದ ಪ್ರವಾಸಿ ತಾಣಗಳಿದ್ದು, ಇದಕ್ಕೆ ಪೂರಕವಾಗಿ ಅಷ್ಟೇ ಪ್ರತಿಭಾನ್ವಿತರಾದ ಛಾಯಾಗ್ರಾಹಕರು ಇದ್ದಾರೆ. ಜಗತ್ತಿನಲ್ಲಿ ನಡೆಯುವ ವಾಸ್ತವಿಕತೆಯನ್ನು ಫೋಟೋ ಮೂಲಕ ತೋರಿಸುವುದರಿಂದ ಪತ್ರಿಕೆಗಳಲ್ಲಿ ಮುದ್ರಣಗೊಂಡು ಆಕರ್ಷಕವಾಗಿರುತ್ತದೆ ಎಂದು ಅಭಿಪ್ರಾಯಿಸಿದರು.

ಫೋಟೋಗ್ರಫಿ ಇದ್ದಾಗ ಛಾಯಾಗ್ರಾಹಕರು ಇರಬೇಕು, ಈ ನಿಟ್ಟಿನಲ್ಲಿ ಛಾಯಾಗ್ರಾಹಣ ಉಳಿದಿದೆ. ಇದನ್ನು ಎಕ್ಸ್‌ಪೋ ಮಾಡದಿದ್ದರೆ



ಏನೋ ಕಳೆದುಕೊಂಡಂತೆ ಎಂಬ ಭಾವನೆ ಮೂಡುತ್ತದೆ. ಎಲ್ಲರೂ ಫೋಟೋ ಗ್ಯಾಲರಿ ಮಾಡಲು ಬೇಕಾದ ಸಲಹೆ ಸಹಕಾರವನ್ನು ಇಲಾಖೆಯಿಂದ ನೀಡುವುದಾಗಿ ಭರವಸೆ ನೀಡಿದರು.

ಮುಂದಿನ ದಿನಗಳಲ್ಲಿ ವಿಶ್ವ ಛಾಯಾಗ್ರಾಹಕರ ದಿನಾಚರಣೆ ಹಾಗೂ ಉತ್ತಮ ಫೋಟೋ ಗ್ಯಾಲರಿಗೆ ಪೊಲೀಸ್ ಭವನದಲ್ಲಿ ಅವಕಾಶ ಮಾಡಿಕೊಡುವುದಾಗಿ ವಿಶ್ವಾಸ ವ್ಯಕ್ತಪಡಿಸಿದ ಅವರು, ಇದರಿಂದ ಸಾರ್ವಜನಿಕರಲ್ಲಿ ಫೋಟೋಗ್ರಫಿ ಬಗ್ಗೆ ಮೆಚ್ಚುಗೆಗೆ ಪಾತ್ರವಾಗುತ್ತದೆ ಎಂದರು.

ನಗರಸಭಾಧ್ಯಕ್ಷೆ ಶೀಲಾದಿನೇಶ್ ಮಾತನಾಡಿ, ಸಾರ್ವಜನಿಕರಲ್ಲಿ ಫೋಟೋ ಮೂಲಕ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುತ್ತಿರುವುದು ಶ್ಲಾಘನೀಯ, ಇನ್ನಷ್ಟು ಛಾಯಾಗ್ರಾಹಕ ಪ್ರತಿಭೆಗಳು ಬೆಳೆಯಲಿ ಎಂದು ಶುಭ ಹಾರೈಸಿದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ಛಾಯಾಗ್ರಾಹಕರು ಒಗ್ಗಟ್ಟಿನಿಂದ ಸೇವೆ ಸಲ್ಲಿಸಿದಾಗ ಸಾರ್ವಜನಿಕರಿಗೆ ಬಹಳ ಉಪಯೋಗವಾಗುತ್ತದೆ. ಜೊತೆಗೆ ಫೋಟೋಗಳಿಂದ ಮನಃಪರಿವರ್ತನೆ ಮಾಡಲು ಸಾಧ್ಯ ಎಂದು ತಿಳಿಸಿದರು.

# ಜೀವನದ ಸವಾಲು ಎದುರಿಸುವ ಸ್ಥೈರ್ಯ ಸ್ಕೌಟ್ಸ್ ನೀಡುತ್ತದೆ

## ರಾಜ್ಯ ಸ್ಕೌಟ್ಸ್ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ



**ದಾವಣಗೆರೆ:** ಜೀವನ ಮತ್ತು ಬದುಕಿನ ಸವಾಲುಗಳನ್ನು ಎದುರಿಸುವ ಸ್ಥೈರ್ಯವನ್ನು ಸ್ಕೌಟ್ಸ್ ನೀಡುತ್ತದೆ. ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳು ಸರ್ಕಾರಿ ಶಾಲೆಗಳಿಗೆ ಸೀಮಿತವಾಗದೆ ಖಾಸಗಿ ಶಾಲೆಗಳತ್ತ ಹೋಗಬೇಕಿದೆ ಎಂದು ರಾಜ್ಯ ಸ್ಕೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ಕಾರ್ಯದರ್ಶಿಯೂ ಆಗಿರುವ ಮಾಜಿ ಸಚಿವ ಪಿಜಿಆರ್ ಸಿಂಧ್ಯಾ ಹೇಳಿದರು.

ನಗರದ ಡಿಆರ್‌ಎಂ ಸ್ಕೌಟ್ಸ್ ಭವನದಲ್ಲಿ ಕಳೆದ ವಾರ ಏರ್ಪಾಡಾಗಿದ್ದ ಜಿಲ್ಲಾ ಹಾಗೂ ಸ್ಥಳೀಯ ಸ್ಕೌಟ್ಸ್ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸ್ಕೌಟ್ಸ್‌ನ ರಾಷ್ಟ್ರಪತಿ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಉದ್ಯೋಗಗಳಲ್ಲಿ ಮೀಸಲಾತಿಗಳಿವೆ. ಒಂದರಿಂದ ಹತ್ತನೇ ತರಗತಿಯ ಶಾಲಾ ಪಾಠಗಳಲ್ಲಿ ವಿದ್ಯಾರ್ಥಿಗಳಿಗೆ ಸ್ಕೌಟ್ಸ್ ಮತ್ತು ಗೈಡ್ಸ್‌ನ ವಿಶೇಷತೆಯನ್ನು ಹೇಳಬೇಕು. ಮಕ್ಕಳಲ್ಲಿ ಶಿಸ್ತು ತರುವುದು ಸುಲಭದ ಕೆಲಸವಲ್ಲ ಆದರೆ ಸ್ಕೌಟ್ಸ್ ಮತ್ತು ಗೈಡ್ಸ್ ಇದನ್ನು ವ್ಯವಸ್ಥಿತವಾಗಿ ಮಾಡುತ್ತಿದೆ ಎಂದರಲ್ಲದೆ ದಾವಣಗೆರೆ ಜಿಲ್ಲೆ ಸ್ಕೌಟ್ಸ್ ಮತ್ತು ಗೈಡ್ಸ್‌ನ ಚಟುವಟಿಕೆಗಳ ಬಗ್ಗೆ ಪ್ರಶಂಸೆಯ ನುಡಿಗಳನ್ನಾಡುತ್ತಾ ಕೀರ್ತಿಶೇಷ ಕೊಂಡಜ್ಜಿ ಬಸಪ್ಪ, ಚಿಗಟೇರಿ ಜಯಣ್ಣ ಮುಂತಾದವರು ದಾವಣಗೆರೆಯನ್ನು ಸ್ಕೌಟ್ ಕಾಶಿಯನ್ನಾಗಿ ಮಾಡಿದ್ದಾರೆ ಎಂದು ಸ್ಮರಿಸಿದರು.

ಜಿಲ್ಲಾ ಸ್ಕೌಟ್ಸ್‌ನ ಉಪಾಧ್ಯಕ್ಷ ಹಿರಿಯ ಪತ್ರಕರ್ತ ಎಚ್ ಬಿ ಮಂಜುನಾಥ್ ಮಾತನಾಡಿ 1928 ನೇ ಇಸ್ವಿ ವೇಳೆಗೆ ದಾವಣಗೆರೆಯ ಸ್ಥಳೀಯ ಸ್ಕೌಟ್ಸ್ ಆರಂಭವಾಗಿದ್ದು, ಇತಿಹಾಸ ಉಳ್ಳ ಸ್ಕೌಟ್ ಭವನ ಇರುವ ಪಿಜೆ ಬಡಾವಣೆ ಮೊದಲನೇ ಮೇನ್ ರಸ್ತೆಗೆ 'ಸ್ಕೌಟ್ಸ್ ಭವನ ರಸ್ತೆ' ಎಂದು ನಾಮಕರಣ ಮಾಡಬೇಕೆಂದು ಕರೆಕೊಟ್ಟರು. ಇದು ಅಗತ್ಯವಾಗಿ ಆಗಲೇಬೇಕೆಂದು ಪಿಜಿಆರ್ ಸಿಂಧ್ಯಾ ಹೇಳಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಈ ಬಗ್ಗೆ ಎಲ್ಲಾ ಪ್ರಯತ್ನಗಳನ್ನು ಮಾಡುವುದಾಗಿ ಭರವಸೆ ನೀಡಿದರು. ಡಿಡಿಪಿಐ ಕೊಟ್ರೇಶ್, ಬಿಇಓ ಶಶಿಕಲಾ ಮುಂತಾದವರು ಮಾತನಾಡಿ ಸ್ಕೌಟ್ ಚಟುವಟಿಕೆಗಳನ್ನು ಪ್ರಶಂಸಿಸಿದರು.

ಜಿಲ್ಲಾ ಸ್ಕೌಟ್ಸ್ ಅಧ್ಯಕ್ಷ ಆರ್.ಡಿ. ಬದ್ರಿನಾಥ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಜಿಲ್ಲಾ ಸ್ಕೌಟ್ಸ್ ಮುಖ್ಯ ಆಯುಕ್ತ ಚಿಗಟೇರಿ ಮುರುಘ ರಾಜೇಂದ್ರ ಸ್ವಾಗತ ಕೋರುತ್ತಾ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಜಿಲ್ಲಾ ಕಾರ್ಯದರ್ಶಿ ರತ್ನಾರವರು 2025–26 ನೇ ಸಾಲಿನ ಚಟುವಟಿಕೆಗಳ ಬಗ್ಗೆ ವಿವರಿಸಿದರು.

ರಾಜ್ಯ ಸಂಘಟನಾ ಆಯುಕ್ತೆ ಮಂಜುಳಾ, ಉಪಾಧ್ಯಕ್ಷ ಎ. ಮಹಾಲಿಂಗಪ್ಪ, ಪದಾಧಿಕಾರಿಗಳಾದ ಶಾರದಾ ಮಾಗಾನಹಳ್ಳಿ, ಕೆ.ಪಿ. ಷಡಕ್ಷರಪ್ಪ, ಪುಟ್ಟಪ್ಪ, ಬಿ.ವಿ. ಮಂಗಳಾ, ಶಶಿಕಲಾ, ಸುಖವಾಣಿ, ಸಂತೋಷ್ ಕುಮಾರ್, ಬಿ.ಬಿ. ಹಾಲಪ್ಪ, ಬೂಸ್ನೂರು ವಿಶ್ವನಾಥ್, ಅಜ್ಜಂಪುರ ಶೆಟ್ರು ವಿಜಯಕುಮಾರ್, ಜಂಬಗಿ ರಾಧೇಶ್, ನಗರಸಭಾ ಮಾಜಿ ಉಪಾಧ್ಯಕ್ಷ ಎಸ್. ನಾಗರಾಜ್ ಮತ್ತು ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಅಶ್ವಿನಿ ಅಚ್ಚುಕಟ್ಟಾಗಿ ನಿರೂಪಿಸಿದರು.

### ಹರಿಹರದಲ್ಲಿ ನಾಗರಿಕರ ಸೌಹಾರ್ದ ಸಭೆ

# ಸೌಹಾರ್ದಯುತ ಗಣೇಶೋತ್ಸವ, ಈದ್–ಮಿಲಾದ್ ಆಚರಣೆಗೆ ಎಸ್ಪಿ ಕರೆ

**ಹರಿಹರ :** ಗಣೇಶೋತ್ಸವ ಮತ್ತು ಈದ್ ಮಿಲಾದ್ ಹಬ್ಬಗಳಲ್ಲಿ ಸಾರ್ವಜನಿಕರಿಗೆ ತೊಂದ–ರೆಯಾಗದಂತೆ ಪೊಲೀಸ್ ಇಲಾಖೆ ಹೆಚ್ಚಿನ ಮುಂಜಾಗ್ರತಾ ಕ್ರಮ ಕೈಗೊಳ್ಳುವುದು ಮತ್ತು ಜನಸ್ನೇಹಿಯಾಗಿ ಕೆಲಸ ಮಾಡುವುದರಿಂದ ಹಬ್ಬವನ್ನು ಸಡಗರ–ಸಂಭ್ರಮ ಮತ್ತು ಶ್ರದ್ಧಾ–ಭಕ್ತಿಯಿಂದ ಮತ್ತು ಸರ್ಕಾರದ ನಿರ್ದೇಶನದಂತೆ ಆಚರಿಸುವಂತಾಗಬೇಕೆಂದು ಜಿಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಉಮಾ ಪ್ರಶಾಂತ್ ಕರೆ ನೀಡಿದರು.



ನಗರದ ಕಿರ್ಲೋಸ್ಕರ ಕಿಮ್ಸ್ ಕಾಲೇಜು ಸಭಾಂಗಣದಲ್ಲಿ ದಾವಣಗೆರೆ ಗ್ರಾಮಾಂತರ ಉಪವಿಭಾಗದ ಹರಿಹರ ನಗರ ಪೊಲೀಸ್ ಠಾಣೆ ವತಿಯಿಂದ ಗಣಪತಿ ಮತ್ತು ಈದ್ ಮಿಲಾದ್ ಹಬ್ಬದ ಅಂಗವಾಗಿ ಶುಕ್ರವಾರ ನಡೆದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣೇಶೋತ್ಸವ ಮತ್ತು ಈದ್ ಮಿಲಾದ್ ಹಬ್ಬದಲ್ಲಿ ಪೊಲೀಸ್ ಇಲಾಖೆ ಮಾಡುವ ನಿಬಂಧನೆಗಳನ್ನು ಸರಿಯಾಗಿ ಪಾಲಿಸಿಕೊಂಡು ಹೋದಾಗ ಯಾವುದೇ ರೀತಿಯ ಸಮಸ್ಯೆಗಳು ಬರುವುದಿಲ್ಲ. ಪ್ಲಾಸ್ಟರ್ ಪ್ಯಾರಿಸ್ ಗಣಪತಿ ಪ್ರತಿಷ್ಠಾಪನೆ ಮಾಡದೇ ಪರಿಸರ ಸ್ನೇಹಿ ಗಣಪತಿ ಪ್ರತಿಷ್ಠಾಪನೆ ಮಾಡವಂತಾಗಬೇಕು. ಪ್ರತಿಯೊಂದು ಮಾನವ ಜೀವಿಗಳ ಹಿತದೃಷ್ಟಿಯಿಂದ ಗಣೇಶೋತ್ಸವ ಆಚರಣೆಯನ್ನು ಹದಿನೈದು ದಿನಕ್ಕೆ ಸೀಮಿತಗೊಳಿಸಿದರೆ ಎಲ್ಲಾ ರೀತಿಯ ಸಹಕಾರ ನೀಡಲಾಗುತ್ತದೆ ಎಂದು ಹೇಳಿದರು.

ಶಾಸಕ ಬಿ.ಪಿ. ಹರೀಶ್ ಮಾತನಾಡಿ, ಮೂರು ಧರ್ಮದವರ ಪ್ರಮುಖ ಹಬ್ಬ ಮತ್ತು ಜಾತ್ರೆ ಒಂದೇ ಸಮಯದಲ್ಲಿ ನಡೆಯುವುದರಿಂದ ಯಾವುದೇ ರೀತಿಯ ದಕ್ಕೆ ಆಗದಂತೆ ಶಾಂತಿ ಕಾಪಾಡಬೇಕು. ಹಬ್ಬಕ್ಕೆ ಹೆಚ್ಚು ಜನ ಸೇರುವುದರಿಂದ ಪೊಲೀಸ್ ಇಲಾಖೆಗೆ ಹೆಚ್ಚಿನ ಜವಾಬ್ದಾರಿ ಇರುತ್ತದೆ. ಇತ್ತೀಚಿನ ದಿನಗಳಲ್ಲಿ ಎಲ್ಲಾ ಜಯಂತಿಗಳಿಗೆ ಡಿ.ಜೆ. ಅವಶ್ಯಕ ಎನ್ನುವಂತಾಗಿದೆ. ಯುವಕರು ಡಿಜೆ ಇಲ್ಲದೆ ಹಬ್ಬ ಮಾಡುವುದಿಲ್ಲ ಎನ್ನುವ ಹಾಗಿದೆ. ಆದರೆ ಅಲ್ಪಸಂಖ್ಯಾತರು ಸ್ವಯಂ ಪ್ರೇರಿತರಾಗಿ ಡಿಜೆ ನಿಷೇಧಿಸಿರುವುದು ಶ್ಲಾ ್ಯಘನೀಯ ಕಾರ್ಯವಾಗಿದೆ ಎಂದರು.

ನಗರಸಭೆ ಅಧ್ಯಕ್ಷೆ ಕವಿತಾ ಮಾರುತಿ ಬೇಡರ್ ಮಾತನಾಡಿ, ಡಿಜೆಗೆ ಖರ್ಚು ಮಾಡುವ ಹಣವನ್ನು ಬಡವರ ಮಕ್ಕಳ ವಿದ್ಯಾಭ್ಯಾಸ ಅಥವಾ ಕ್ರೀಡಾಪಟುಗಳಿಗೆ ಸಹಕಾರ ಮಾಡಿದರೆ ಅವರು ಜೀವನ ಪೂರ್ತಿ ನಿಮಗೆ ಹಾರೈಸುತ್ತಾರೆ. ಜೊತೆಗೆ ಮಕ್ಕಳ ಮತ್ತು ವೃದ್ಧರ ಆರೋಗ್ಯ ರಕ್ಷಣೆ ಆಗುತ್ತದೆ ಮತ್ತು ಸಮಾಜದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಹಬ್ಬದ ಆಚರಣೆ ಮಾಡಿದಾಗ ಏಕತೆ ಮತ್ತು ಭ್ರಾತೃತ್ವ ಉಂಟಾಗುತ್ತದೆ ಎಂದು ಹೇಳಿದರು.

ದಾವಣಗೆರೆ ಗ್ರಾಮಾಂತರ ಡಿವೈಎಸ್ಪಿ ಜಿ.ಎಸ್. ಬಸವರಾಜ್ ಪ್ರಾಸ್ತಾವಿಕವಾಗಿ ಮಾತನಾಡಿ, ಡಿಜೆ ಬಳಸಲು ಅವಕಾಶ ಇಲ್ಲದೆ ಇರುವುದರಿಂದ, ಡೊಳ್ಳು ಕುಣಿತದಂತಹ ಜಾನಪದ ಕಲೆಗಳಿಗೆ ಹೆಚ್ಚಿನ ಆದ್ಯತೆ ಕೊಡುವಂತಾಗಬೇಕು ಎಂದರು.

ಸಾರ್ವಜನಿಕ ವಿನಾಯಕ ಸಂಘದ ಅಧ್ಯಕ್ಷ ಎಂ.ಬಿ. ಅಣ್ಣಪ್ಪ ಮಾತನಾಡಿ, ಈ ಬಾರಿ ಡಿಜೆ ಬಳಸದೇ ಸಾಂಸ್ಕೃತಿಕ ಕಲಾ ಮೇಳಗಳೊಂದಿಗೆ ಮೆರವಣಿಗೆ ಮಾಡಿ ವಿಸರ್ಜನೆ ಮಾಡಲಾಗವುದು ಎಂದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ. ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ

### ವೃಷಭ ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ-ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಇಂದು, ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು.

### ಮಿಥುನ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

### ಕರ್ಕ ರಾಶಿ

ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೆಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ನಿಮ್ಮ ಕುಟುಂಬದೊಂದಿಗೆ ಸಾಮಾಜಿಕ ಚಟುವಟಿಕೆ ಎಲ್ಲರನ್ನೂ ಆರಾಮವಾಗಿ ಮತ್ತು ಆಹ್ಲಾದಕರ ಮನಸ್ಥಿತಿಯಲ್ಲಿಡುತ್ತದೆ. ನೀವು ನಿಮ್ಮ ಪ್ರೀತಿಪಾತ್ರರನ್ನು ನಿಮ್ಮ ಜೀವನ ಸಂಗಾತಿಯನ್ನಾಗಿ ಮಾಡಲು ಬಯಸುತ್ತಿದ್ದರೆ, ಇಂದು ನೀವು ಅವರೊಂದಿಗೆ ಮಾತನಾಡಬಹುದು.

### ಸಿಂಹ ರಾಶಿ

ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ನೀವು ಹಂಚಿಕೊಂಡ ಉತ್ತಮ ಸಮಯವನ್ನು ನೆನಪಿಸಲು ನಿಮ್ಮ ಸ್ನೇಹವನ್ನು ನೆನಪು ಮಾಡಿಕೊಳ್ಳುವ ಸಮಯ. ನಿಮ್ಮ ಕನಸುಗಳು ಹಾಗೂ ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಇಂದು ಸೇರಿಹೋಗುತ್ತವೆ. ಇಂದು ಸಮಯದ ಸೌಂದರ್ಯವನ್ನು ನೋಡುತ್ತಾ, ನೀವು ನಿಮಗಾಗಿ ಸಮಯವನ್ನು ತೆಗೆಯಬಹುದು

### ಕನ್ಯಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಹಠಮಾರಿ ವರ್ತನೆ ನಿಮ್ಮ ಹತ್ತಿರದ ಸ್ನೇಹಿತರು ಹಾಗೂ ಮನೆಯಲ್ಲಿರುವವರಿಗೂ ನೋವುಂಟುಮಾಡುತ್ತದೆ.

### ತುಲಾ ರಾಶಿ

ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ. ನೀವು ಕುಟುಂಬದ ಸದಸ್ಯರು ಮತ್ತು ಸ್ನೇಹಿತರ ಜೊತೆ ಕಳೆಯಲು ಸಾಕಷ್ಟು ಸಮಯ ಸಿಗುತ್ತದೆ.

### ವೃಶ್ಚಿಕ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಇಂದು ಪ್ರೀತಿಪಾತ್ರರಿಗೆ ನಿಮ್ಮ ವಿಚಿತ್ರ ವರ್ತನೆಯ ಜೊತೆ ಏಗಲು ಅತ್ಯಂತ ಕಷ್ಟವಾಗುತ್ತದೆ. ನುರಿತ ಜನರೊಡನೆ ಒಡನಾಟ ಹೊಂದಿ ಮತ್ತು ಅವರು ನಿಮಗೆ ಭವಿಷ್ಯದ ಪ್ರವೃತ್ತಿಗಳ ಬಗ್ಗೆ ಒಳನೋಟ ನೀಡಬಲ್ಲರು.

### ಧನು ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊಂದರೆಗೊಳಗಾಗಬಹುದು. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ.

### ಮಕರ ರಾಶಿ

ನಿಮ್ಮ ಕಾಯಿಲೆ ಅತೃಪ್ತಿಯ ಕಾರಣವಾಗಿಬಹುದು. ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ನಿರೀಕ್ಷೆಗಳಿಗೆ ತಕ್ಕಂತೆ ಬದುಕಲು ನಿಮ್ಮ ಮಗುವನ್ನು ಪ್ರೇರೇಪಿಸಿ. ಆದರೆ ಅವನ ಪ್ರಯತ್ನದಿಂದ ಪವಾಡಗಳನ್ನು ನಿರೀಕ್ಷಿಸಬೇಡಿ.

### ಕುಂಭ ರಾಶಿ

ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ನೀವು ವಿಧ್ಯಾರ್ಥಿಯಾಗಿದ್ದರೆ ಮತ್ತು ವಿದೇಶಕ್ಕೆ ಹೋಗಿ ಅಧ್ಯಯನ ಮಾಡಲು ಬಯಸುತ್ತಿದ್ದರೆ ಆರ್ಥಿಕ ಬಿಕ್ಕಟ್ಟು ಇಂದು ನಿಮ್ಮ ಹಣೆಯ ಮೇಲೆ ಸುಕ್ಕು ತರಬಹುದು. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ. ಪ್ರಣಯ ನಿಮ್ಮ ಹೃದಯವನ್ನು ಆಳುತ್ತದೆ. ನಿಮ್ಮ ಯೋಜನೆಗಳ ಬಗ್ಗೆ ತುಂಬಾ ಮುಕ್ತತೆ ಹೊಂದಿದ್ದಲ್ಲಿ ನೀವು ಅವುಗಳನ್ನು ಹಾಳುಮಾಡಬಹುದು.

### ಮೀನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

# ಶ್ರೀಮತಿ ಗೌರಮ್ಮ ನರಹರಿಶೇಟ್ ಕಲ್ಯಾಣ ಮಂಟಪದ ಬೆಳ್ಳಿಹಬ್ಬದ ಸಮಾರಂಭ



**ದಾವಣಗೆರೆ:** ದಾವಣಗೆರೆಯ ಶ್ರೀಮತಿ ಗೌರಮ್ಮ ನರಹರಿಶೇಟ್ ಪ್ರತಿಷ್ಠಾನದ ಆಶ್ರಯದಲ್ಲಿ ನಗರದ ವಿನೋಬಾನಗರದ ಮೊದಲನೇ ಮುಖ್ಯ ರಸ್ತೆಯಲ್ಲಿರುವ ಶ್ರೀಮತಿ ಗೌರಮ್ಮ ನರಹರಿಶೇಟ್ ಕಲ್ಯಾಣ ಮಂಟಪದ ಬೆಳ್ಳಿ ಹಬ್ಬದ ಸಂಭ್ರಮದ ಸಮಾರಂಭವನ್ನು ಆಗಸ್ಟ್ 23 ರಂದು ಶನಿವಾರ ಅಪರಾಹ್ನ 2.30ಕ್ಕೆ ಉದ್ಘಾಟನೆಯಾಗಲಿದೆ ಎಂದು ಪ್ರತಿಷ್ಠಾನದ ಮುಖ್ಯಸ್ಥರಾದ ನಲ್ಲೂರು ಲಕ್ಷ್ಮಣ್‌ರಾವ್ ತಿಳಿಸಿದ್ದಾರೆ.

ಸಮಾರಂಭದ ದಿವ್ಯ ಸಾನಿಧ್ಯದಲ್ಲಿ ದಾವಣಗೆರೆಯ ಆವರಗೊಳ್ಳ ಶ್ರೀಕ್ಷೇತ್ರದ ಪುರವರ್ಗ ಮಠದ ಮಹಾಸ್ವಾಮಿಗಳಾದ ಶ್ರೀ ಷ॥ ಬ್ರ॥ ಓಂಕಾರ ಶಿವಾಚಾರ್ಯರವರು ಉಪಸ್ಥಿತರಿರುತ್ತಾರೆ. ಸಮಾರಂಭದ ಅಧ್ಯಕ್ಷತೆಯನ್ನು ಶ್ರೀಮತಿ ಗೌರಮ್ಮ ನರಹರಿಶೇಟ್ ಪ್ರತಿಷ್ಠಾನದ ಅಧ್ಯಕ್ಷರಾದ ನಲ್ಲೂರು ಬಿ.ಎನ್.ನಾಗರಾಜ್ ರೇವಣಕರ್ ವಹಿಸಿಕೊಳ್ಳಲಿದ್ದಾರೆ. ಮುಖ್ಯ ಅತಿಥಿಗಳಾಗಿ ದೈವಜ್ಞ ಸಮಾಜದ ಅಧ್ಯಕ್ಷರಾದ ಪ್ರಶಾಂತ್ ವಿಶ್ವನಾಥ್ ವೆರ್ಣೇಕರ್, ಶ್ರೀಮತಿ ಪ್ರೇಮಾ ಅರುಣಾಚಲ ಎನ್. ರೇವಣಕರ್ ಪ್ರತಿಷ್ಠಾನದ ಸಂಸ್ಥಾಪಕರಾದ ಡಾ. ನಲ್ಲೂರು ಅರುಣಾಚಲ ಎನ್.ರೇವಣಕರ್ ಆಗಮಿಸಲಿದ್ದಾರೆ.

ಶ್ರೀಮತಿ ಗೌರಮ್ಮ ನರಹರಿಶೇಟ್ ಕಲ್ಯಾಣ ಮಂಟಪದ ಆಡಳಿತ ಮಂಡಳಿಯ ಎನ್.ಶಿವಾನಂದ ರೇವಣಕರ್, ನಲ್ಲೂರು ಎಸ್.ರಾಜಕುಮಾರ್ ಗೌರವ ಉಪಸ್ಥಿತರಿರುತ್ತಾರೆ. ಶ್ರೀಮತಿ ಗೌರಮ್ಮ ನರಹರಿಶೇಟ್ ಕಲ್ಯಾಣ ಮಂಟಪದಲ್ಲಿ ನಡೆಯುವ ಈ ಬೆಳ್ಳಿಹಬ್ಬದ ಸಂಭ್ರಮದ ಸಮಾರಂಭಕ್ಕೆ ನಲ್ಲೂರು ಕುಟುಂಬ ಸರ್ವ ಸದಸ್ಯರೂ ಆಗಮಿಸಿ ಯಶಸ್ವಿಗೊಳಿಸಬೇಕಾಗಿ ಮಂಡಳಿಯ ಗೌರವ ಸಲಹೆಗಾರರಾದ ಸಾಲಿಗ್ರಾಮ ಗಣೇಶ್‌ಶೆಣೈ ವಿನಂತಿಸಿದ್ದಾರೆ.




ತೀರ್ಥಹಳ್ಳಿಯ: ಶ್ರೀ ರಾಮೇಶ್ವರ ದೇವಸ್ಥಾನದ ಬಳಿ ತುಂಗಾ ನದಿಗೆ ಸೋಮವಾರ ಸಂಜೆ ಬಾಗಿನ ಸಮರ್ಪಿಸಲಾಯಿತು. ಜಿಲ್ಲಾ ಧಾರ್ಮಿಕ ಪರಿಷತ್ ಸದಸ್ಯರುಗಳಾದ ಬಿ. ವರಲಕ್ಷ್ಮಿ ಪ್ರಕಾಶ್, ನಾಗಭೂಷಣ್, ಶ್ರೀ ರಾಮೇಶ್ವರ ದೇವಸ್ಥಾನ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಡಿ.ಎಸ್. ವಿಶ್ವನಾಥ ಶೆಟ್ಟಿ, ಸದಸ್ಯರುಗಳಾದ ಹೆಚ್.ಆರ್. ಮಹಾಬಲ, ಪ್ರದೀಪ್, ಪೂರ್ಣೇಶ್, ತ್ರಿವೇಣಿ ಸುರೇಶ್, ಜ್ಯೋತಿ, ಪ್ರಧಾನ ಅರ್ಚಕ ರಾಜಶೇಖರ್ ಭಟ್ ಮತ್ತಿತರರು ಉಪಸ್ಥಿತರಿದ್ದರು.

# ಆಶಾ ಕಾರ್ಯಕರ್ತೆಯರ ವಿವಿಧ ಬೇಡಿಕೆ ಈಡೇರಿಸಲು ಆಗ್ರಹಿಸಿ ಆರೋಗ್ಯ ಸಚಿವರಿಗೆ ಮನವಿ



**ಚಿಕ್ಕಮಗಳೂರು:** ರಾಜ್ಯದ ಆಶಾ ಕಾರ್ಯಕರ್ತೆಯರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕರಾಜ್ಯ ಆಶಾ ಕಾರ್ಯಕರ್ತೆಯರ ಮಜ್ದೂರು ಸಂಘ ಇಂದು ಬೆಂಗಳೂರಿನಲ್ಲಿ ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್‌ಅವರಿಗೆ ಮನವಿ ಸಲ್ಲಿಸಿದರು.

ಚಿಕ್ಕಮಗಳೂರು ಬಿ.ಎಂ.ಎಸ್‌ಸಂಘದಜಿಲ್ಲಾಧ್ಯಕ್ಷೆಕ್ಯಾತನಬೀಡುಗಾಯಿತ್ರಿ, ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್‌ಅವರಿಗೆ ಮನವಿ ಸಲ್ಲಿಸಿ ಮಾತನಾಡಿಸಂಘವು ಕಳೆದ 15 ವರ್ಷಗಳಿಂದ ಆಶಾ ಕಾರ್ಯಕರ್ತೆಯರಅಭಿವೃದ್ಧಿಗೆ ಮತ್ತು ಸಮಸ್ಯೆಗಳ ಬಗ್ಗೆ ಹೋರಾಟ ಮಾಡುತ್ತಿದ್ದು, ದೇಶದಅತಿದೊಡ್ಡಕಾರ್ಮಿಕ ಸಂಘಟನೆಯಾದ ಭಾರತೀಯ ಮಜ್ದೂರ್ ಸಂಘಕ್ಕೆ ಸಂಯೋಜನೆಗೊಂಡಿದೆ. ಸಂಘಟನೆಯು ಆಶಾ ಕಾರ್ಯಕರ್ತೆಯರ ಸಮಸ್ಯೆಗಳಿಗೆ ಸ್ಪಂದಿಸುವುದರಜೊತೆಗೆಅವರಲ್ಲಿದೇಶಪ್ರೇಮ, ರಾಷ್ಟ್ರಭಕ್ತಿ, ಸಾಮಾಜಿಕ ಕಳಕಳಿಯನ್ನು ಮೂಡಿಸುತ್ತಿದೆ.

ನಮ್ಮ ಬೇಡಿಕೆಗಳಾದಪ್ರತಿ ತಿಂಗಳು ಗೌರವಧನವನ್ನು ನಿಗಧಿತ ದಿನಾಂಕದಂದು ನೀಡಬೇಕು, ತಿಂಗಳಿಗೆ 20 ಸಾವಿರ ರೂಗಳಿಗೆ ಗೌರವಧನವನ್ನು ಹೆಚ್ಚಿಸಬೇಕು. ಇಎಸ್‌ಐ, ಪಿಎಫ್, ಫಿಕ್ಸೆಡ್‌ಇನ್ಸೆಂಟಿವ್ ಸೇರಿಸಿ ಕೊಡಬೇಕು, ನಿವೃತ್ತಿ ವೇಳೆಯಲ್ಲಿ ಸಿಗುವ ಭತ್ಯೆಯನ್ನುತಕ್ಷಣ ನೀಡಬೇಕು. ಆಶಾ ಕಾರ್ಯಕರ್ತೆಯರಿಗೆಜೀವವಿಮಾ ಸೌಲಭ್ಯವನ್ನು ನೀಡುವಜೊತೆಗೆ ಪಿಂಚಣಿಯೋಜನೆಯನ್ನು ಜಾರಿಗೊಳಿಸಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಆಶಾ ಕಾರ್ಯಕರ್ತೆಯರಕುಟುಂಬದವರಿಗೆಆರೋಗ್ಯ ವಿಮಾ ಸೌಲಭ್ಯವನ್ನುಕಲ್ಪಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಕೂಡಲೇ ಈ ನಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದ್ದರೂ ರಾಜ್ಯಸರ್ಕಾರ ಸ್ಪಂದಿಸದೆ ಮುಂದೂಡುತ್ತಿರುವುದು ವಿಷಾಧನೀಯಎಂದು ಬೇಡಿಕೆಗಳನ್ನು ಬಗೆಹರಿಸಿ ಪರಿಹರಿಸಿ ನ್ಯಾಯಒದಗಿಸಬೇಕೆಂದು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿಜಿಲ್ಲಾ ಕಾರ್ಯದರ್ಶಿ ವಿಕ್ಟೋರಿರಾಣಿ, ಮಂಗಳೂರು ಜಿಲ್ಲಾ ಸಂಘದಅಧ್ಯಕ್ಷೆರೇವತಿ ಸೇರಿದಂತೆರಾಜ್ಯದಎಲ್ಲಾ ಜಿಲ್ಲೆಗಳ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

# ಪಿಓಪಿ ಗಣೇಶ ವಿಗ್ರಹಗಳ ನಿಷೇಧ

**ಹಾಸನ :** ಕರ್ನಾಟಕರಾಜ್ಯ ಪರಿಸರ ಮಾಲೀನ್ಯ ನಿಯಂತ್ರಣ ಮಂಡಳಿ,ಸದಸ್ಯ ಕಾರ್ಯದರ್ಶಿಗಳು ಇವರ ಸುತ್ತೋಲೆ ಪತ್ರದನ್ವಯಹಾಸನ ಜಿಲ್ಲೆಯಾದ್ಯಂತ ಪ್ಲಾಸ್ಟರ್‌ಆಫ್ ಪ್ಯಾರೀಸ್‌ನಿಂದ ತಯಾರಿಸಿದ ವಿಗ್ರಹಗಳು ಹಾಗೂ ಅದೇ ಬಾರ ಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದಅಲಂಕೃತಗೊಂಡಂತಹಯಾವುದೇರೀತಿಯಗಣೇಶ ವಿಗ್ರಹಗಳ ತಯಾರಿಕೆ, ದಾಸ್ತಾನು, ಮಾರಾಟ ಮತ್ತು ವಿಸರ್ಜಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆಎಂದುಜಿಲ್ಲಾಧಿಕಾರಿಅವರು ತಿಳಿಸಿದ್ದಾರೆ.

ಪರಿಸರ ಸ್ನೇಹಿ ಗೌರಿ-ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಪೂಜಿಸಿದ ನಂತರ ಸ್ಥಳೀಯ ಸಂಸ್ಥೆಯ ವತಿಯಿಂದ ನಿಗಧಿಪಡಿಸಿರುವ ನಿಗಧಿತ ಹಾಗೂ ಗುರುತಿಸಿರುವ ಸ್ಥಳಗಳಲ್ಲಿ ಗಣೇಶ ವಿಗ್ರಹಗಳನ್ನು ವಿಸರ್ಜನೆ ಮಾಡುವುದು.

ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ವಿಸರ್ಜನೆ ಸಂದರ್ಭದಲ್ಲಿ ಮೊಬೈಲ್

ಟ್ಯಾಂಕ್‌ಗಳಲ್ಲಿ/ ಕಲ್ಯಾಣಿಗಳ ಪಕ್ಕದಲ್ಲಿ ಹಸಿ ಕಸ (ಹೂವು, ಹಣ್ಣು, ಬಾಳೆಕಂಬ, ಮಾವಿನ ತೋರಣ, ಪ್ಲಾಸ್ಟಿಕ್ ಬಾಟಲ್, ಬಟ್ಟೆಗಳನ್ನು ಹಾಗೂ ಇತ್ಯಾದಿ ನಿಷೇಧಿತ ವಸ್ತುಗಳು) ಪ್ರತ್ಯೇಕಿಸಿ, ಮೂರ್ತಿಗಳೊಂದಿಗೆ ನೀರಿಗೆ ವಿಸರ್ಜಿಸದೆ ಪ್ರತ್ಯೇಕವಾಗಿ ವಿಲೇವಾರಿ ಮಾಡಲುಕ್ರಮವಹಿಸುವುದು.

ಜಿಲ್ಲಾ ವ್ಯಾಪ್ತಿಯಲ್ಲಿ ವಿವಿಧ ಸ್ಥಳಗಳಲ್ಲಿ ಅನುಮತಿ ಪಡೆದುಗಣೇಶ ವಿಗ್ರಹ ಸ್ಥಾಪನೆ ಮಾಡಿ ಪೂಜಿಸುವ ಸ್ಥಳಗಳಲ್ಲಿ ಫ್ಲಾಸ್ಟಿಕ್ಸ್, ಫ್ಲೆಕ್ಸ್ ಮತ್ತುಇತರೆ ನಿಷೇಧಿತ ವಸ್ತುಗಳ ಬಳಕೆಯನ್ನು ನಿಷೇಧಿಸಲಾಗಿದ್ದು ಹಾಗೂ ರಾತ್ರಿ 10ರಿಂದ ಬೆಳಿಗ್ಗೆ 6 ಗಂಟೆವರೆಗೆಧ್ವನಿವರ್ಧಕಗಳ ಬಳಕೆಯನ್ನು ನಿಷೇದಿಸಲಾಗಿದೆ.

ಸರ್ಕಾರದಆದೇಶಕ್ಕೆ ವಿರುದ್ಧವಾಗಿ ಪ್ಲಾಸ್ಟರ್‌ಆಫ್ ಫ್ಯಾರೀಸ್‌ಗಣೇಶ ಮೂರ್ತಿಗಳ ಮಾರಾಟ/ ಖರೀದಿ ಕಂಡುಬಂದಲ್ಲಿ, ಅಂತಹವರುಗಳ ವಿರುದ್ಧ ಜಲ (ಮಾಲಿನ್ಯ ನಿಯಂತ್ರಣ ಮತ್ತು ನಿವಾರಣಾ) ಕಾಯ್ದೆ-1974 ಮತ್ತು ಪರಿಸರ (ಸಂರಕ್ಷಣೆ) ಕಾಯ್ದೆ-1986 ರಡಿ ಕಾನೂನು ಕ್ರಮಜರುಗಿಸಲಾಗುವುದು.

# ಬಾಡಿಗೆ ಕಟ್ಟಡದ ಅವಶ್ಯಕತೆ

**ದಾವಣಗೆರೆ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಸರ್ಕಾರಿ ಪರಿಶಿಷ್ಟ ವರ್ಗದ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ, ದಾವಣಗೆರೆ-2 ವಿದ್ಯಾರ್ಥಿ ನಿಲಯಕ್ಕೆ 150 ವಿದ್ಯಾರ್ಥಿಗಳ ವಾಸ್ತವ್ಯಕ್ಕೆ ಹಾಗೂ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ, ನಿಟ್ಟುವಳ್ಳಿ ವಿದ್ಯಾರ್ಥಿನಿಲಯಕ್ಕೆ 100 ವಿದ್ಯಾರ್ಥಿಗಳ ವಾಸ್ತವ್ಯಕ್ಕೆ ಅನುಕೂಲವಾಗುವಂತಹ ಸುರಕ್ಷಿತ ಕಟ್ಟಡಗಳ ಅವಶ್ಯಕತೆ ಇರುತ್ತದೆ.

ಮೂಲಭೂತ ಸೌಲಭ್ಯ ಸೌಕರ್ಯವಿರುವ ಕಟ್ಟಡ ಮಾಲೀಕರು ಪಿ.ಡಬ್ಲ್ಯೂಡಿ ಇಲಾಖೆಯವರು ನಿಗದಿಪಡಿಸುವ ಮಾಸಿಕ ಬಾಡಿಗೆ ಆಧಾರದ ಮೇಲೆ ಖುದ್ದಾಗಿ ರಾಂ & ಕೋ ಸರ್ಕಲ್ 4ನೇ ಮೇನ್, ಪಿ.ಜೆ ಬಡಾವಣೆ, ರಾಂ & ಕೋ ಅಂಗಡಿ ಎದುರು ಇರುವ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ದಾವಣಗೆರೆ ದೂ.ಸಂ:9481064288, 9620249697 ನ್ನು ಸಂಪರ್ಕಿಸಲು ಇಲಾಖೆಯ ಅಧಿಕಾರಿ ನವೀನ್ ಮಠದ್ ತಿಳಿಸಿದ್ದಾರೆ .

# ಹಾಸನಾಂಬ ದೇವಿ ಜಾತ್ರಾಮಹೋತ್ಸವ

# ಅಗತ್ಯ ಸಿದ್ಧತೆಗೆ ಸೂಚನೆ

**ಹಾಸನ :** ಶ್ರೀ ಹಾಸನಾಂಬ ದೇವಿಯದರ್ಶನಕ್ಕೆ ಆಗಮಿಸುವ ಜನ ಸಂದಣಿಯನ್ನುಅತ್ಯಂತಅಚ್ಚುಕಟ್ಟಾಗಿ ನಿರ್ವಹಿಸುವ ಮೂಲಕ ಭಕ್ತಾದಿಗಳಿಗೆ ದೇವಿ ದರ್ಶನಕ್ಕೆ ಅವಕಾಶ ಕಲ್ಪಿಸಲುಅಗತ್ಯ ಸಿದ್ಧತೆಗೆ ಕ್ರಮವಹಿಸುವಂತೆಜಿಲ್ಲಾಧಿಕಾರಿ ಲತಾಕುಮಾರಿಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.ಜಿಲ್ಲಾಧಿಕಾರಿಕಚೇರಿ

ಸಭಾಂಗಣದಲ್ಲಿಇಂದುಶ್ರೀ ಸಿದ್ಧೇಶ್ವರ ಜಾತ್ರ ಮಹೋತ್ಸವ ಹಾಗೂ ಹಾಸನಾಂಬ ದೇವಿ ದರ್ಶನಕುರಿತುನಡೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದಅವರು ಈಗಾಗಲೇ ರಚಿಸಿರುವ ವಿವಿಧ ಸಮಿತಿಗಳು ಸಮನ್ವಯತೆಯಿಂದತಮ್ಮತಮ್ಮ ಕೆಲಸವನ್ನುಜವಾಬ್ದಾರಿಯುವಾಗಿಹಾಗೂ ಅಚ್ಚುಕಟ್ಟಾಗಿನಿರ್ವಹಿಸುವಂತೆ ತಿಳಿಸಿದರು.

ದೇವಿ ದರ್ಶನಕ್ಕೆ ಆಗಮಿಸುವ ಭಕ್ತರಜನ ಸಂದಣಿಯನ್ನುಉತ್ತಮರೀತಿಯಲ್ಲಿ ನಿರ್ವಹಣೆ ಮಾಡಲು ಪ್ರತಿನಿತ್ಯ ಬಸ್, ರೈಲುಗಳ ಮೂಲಕ ಹಾಗೂ ಟೋಲ್ ಗಳನ್ನು ಹೊರತುಪಡಿಸಿ ಇತರೆ ಮಾರ್ಗಗಳಲ್ಲಿ ನಗರಕ್ಕೆ ಪ್ರವೇಶಿಸುವ ವಾಹನಗಳ ಮಾಹಿತಿಯನ್ನು ಅಧಿಕಾರಿಗಳು ನೀಡುವಂತೆ ತಿಳಿಸಿದರು.ವಾಹನಗಳ ನಿಲುಗಡೆಗೆ ಪಾರ್ಕಿಂಗ್ ವ್ಯವಸ್ಥೆಜೊತೆಗೆ ಪಾದರಕ್ಷೆಗಳನ್ನು ಬಿಡಲು ಸ್ಟ್ಯಾಂಡ್, ಟಿಕೆಟ್‌ಕೌಂಟರ್, ಸಾಂಸ್ಕೃತಿಕಕಾರ್ಯಕ್ರಮ, ವಸ್ತುಗಳ ಮಾರಾಟಕ್ಕೆ ವ್ಯವಸ್ಥೆಕಲ್ಪಿಸಬೇಕುಎಂದಅವರುಜನರ ಸುರಕ್ಷತೆಯದೃಷ್ಠಿಯಿಂದ ಪ್ರತಿನಿತ್ಯ ಬೆಳಗ್ಗೆ ಮತ್ತು ಸಂಜೆಬ್ಯಾರಿಕೇಡ್‌ಗಳು ಸುಸ್ಥಿತಿಯಲ್ಲಿರುವುದನ್ನು

ಪರಿಶೀಲಿಸಬೇಕುಎಂದರು.ಸೌರಬ್‌ಕುಮಾರ್,ಅಪರಜಿಲ್ಲಾಧಿಕಾರಿ ಮಂಜುನಾಥ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೆಂಕಟೇಶ್ ನಾಯ್ಡು, ತಮ್ಮಯ್ಯ, ಉಪ ವಿಭಾಗಾಧಿಕಾರಿಗಳಾದ ಮಾರುತಿ, ರಾಜೇಶ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು

ದೇವಿ ದರ್ಶನಕ್ಕೆ ಆಗಮಿಸುವ ಭಕ್ತಾಧಿಗಳು ಸ್ಥಳೀಯವಾಗಿ ಪ್ರವಾಸ ಮಾಡಲುಟೂರ್ ಪ್ಯಾಕೇಜ್ ಮಾಡುವಂತೆ ಪ್ರವಾಸೋದ್ಯಮಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್‌ಕುಮಾರ್,ಅಪರಜಿಲ್ಲಾಧಿಕಾರಿ ಮಂಜುನಾಥ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೆಂಕಟೇಶ್ ನಾಯುತಮ್ಮಯ್ಯ, ಉಪ ವಿಭಾಗಾಧಿಕಾರಿಗಳಾದ ಮಾರುತಿ, ರಾಜೇಶ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.


**ಮಾನ್ಯ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಸಿ ಜೆ.ಎಮ್ ನ್ಯಾಯಾಲಯ ದಾವಣಗೆರೆ**

**ಸಿ.ಆರ್.ಮಿಸ್. ನಂ.439 /2025**

**ಅರ್ಜಿದಾರರು :** ಪೆರಿಸ್ವಾಮಿ ಬಿನ್ ಲೇಟ್ ರಾಜಪ್ಪ ವಯಸ್ಸು ಸುಮಾರು 60 ವರ್ಷ ವಾಸ: ವೆಂಕಟೇಶ್ವರ ಕ್ಯಾಂಪ್ ಗ್ರಾಮ, ಕುರ್ಕಿ ಅಂಚೆ. ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

-ವಿರುದ್ಧ-

**ಎದುರುದಾರರು :** ತಹಶೀಲ್ದಾರರವರು ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ.

**-:ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು:-**

ಈ ಮೇಲ್ಕಂಡ ಕೇಸಿನಲ್ಲಿ ಅರ್ಜಿದಾರರು ಎದುರುದಾರರ ವಿರುದ್ಧ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರ ತಾಯಿಯಾದ ವೀರಮ್ಮ ಕೋಂ ರಾಜಪ್ಪ ಇವರು ದಿನಾಂಕ: 08-09-2012 ರಂದು ದಾವಣಗೆರೆ ಜಿಲ್ಲೆ ದಾವಣಗೆರೆ ತಾಲ್ಲೂಕು, ಬುಳ್ಳಾಪುರ, ವೆಂಕಟೇಶ್ವರ ಕ್ಯಾಂಪ್ ಗ್ರಾಮದ ಸ್ವ-ಗೃಹದಲ್ಲಿ ಮರಣ ಹೊಂದಿದ್ದು, ಇವರ ಮರಣ ಪ್ರಮಾಣಪತ್ರವನ್ನು ಪಡೆಯುವ ಸಲುವಾಗಿ ಅರ್ಜಿದಾರರು ನ್ಯಾಯಾಲಯದ ಮುಂದೆ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರಿಗೆ ಸಂಬಂದಪಟ್ಟ ಯಾರದಾದರು ತಕರಾರು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವುದಿದ್ದಲ್ಲಿ ದಿನಾಂಕ :20/9/25 ರಂದು ಖುದ್ದು ಹಾಜರಾಗಿ ಆಕ್ಷೇಪಣೆಯನ್ನು ಸಲ್ಲಿಸತಕ್ಕದ್ದು.

ತಪ್ಪಿದ್ದಲ್ಲಿ ತಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು. ನ್ಯಾಯಾಲಯದ ಮುದ್ರೆ ಹಾಗೂ ಸಹಿಯೊಂದಿಗೆ ದಿನಾಂಕ: 16/8/25 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/-
ಅರ್ಜಿದಾರರ ಪರ ವಕೀಲರು
(ಬಿ.ಎಸ್. ನಾಗರಾಜ್)

ಸಹಿ/-
ಶಿರಸ್ತೇದಾರರು
ಮಾನ್ಯ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು, ಸಿ.ಜೆ.ಎಮ್ ನ್ಯಾಯಾಲಯ
ದಾವಣಗೆರೆ

**ಮಾನ್ಯ 3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ(ಕಿ.ವಿ) ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ದಾವಣಗೆರೆ**

**ಸಿ.ಆರ್.ಮಿಸ್.ನಂ: 2536/2025**

**ಎದುರುದಾರರು :** 1) ಶ್ರೀ ನಾಗರಾಜಪ್ಪ ಬಿನ್ ಲೇಟ್ ನಿಂಗೋಳ್ಳರ ಓಬಳಪ್ಪ ವಯಸ್ಸು ಸುಮಾರು 70 ವರ್ಷ 2.) ಚಂದ್ರಪ್ಪ ಬಿನ್ ನಾಗರಾಜಪ್ಪ ವಯಸ್ಸು ಸುಮಾರು 47 ವರ್ಷ 3.) ಕುಬೇರಪ್ಪ ಬಿನ್ ನಾಗರಾಜಪ್ಪ ವಯಸ್ಸು ಸುಮಾರು 45 ವರ್ಷ 4.) ಓಬಳೇಶ್ ಬಿನ್ ನಾಗರಾಜಪ್ಪ ವಯಸ್ಸು ಸುಮಾರು 40 ವರ್ಷ. 5.) ಶ್ರೀಮತಿ ಗಂಗಮ್ಮ ಕೋಂ ನಾಗರಾಜಪ್ಪ ವಯಸ್ಸು ಸುಮಾರು 40 ವರ್ಷ.
1 ರಿಂದ 5ನೇ ಅರ್ಜಿದಾರರ ವಾಸ: ಗೋಣಿವಾಡ ಗ್ರಾಮ. ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ ಎಂದು ಇರುತ್ತದೆ.
6.) ಶ್ರೀಮತಿ ಸರಸ್ವತಿ ಕೋಂ ಕೆ.ಟಿ. ತಿಮ್ಮಣ್ಣ, ವಾಸ: ಗೌಡಗೆರೆ ಗ್ರಾಮ, ಚಿತ್ರದುರ್ಗ ತಾ॥ ಮತ್ತು ಜಿ॥

-ವಿರುದ್ಧ-

**ಎದುರುದಾರರು :** ತಹಶೀಲ್ದಾರರವರು ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**-:ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು:-**

ಈ ಮೇಲ್ಕಂಡ ಕೇಸಿನಲ್ಲಿ ಅರ್ಜಿದಾರರು ಎದುರುದಾರರ ವಿರುದ್ಧ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರ ಅಜ್ಜಿಯಾದ ಹಾಲಮ್ಮ ಕೋಂ ಓಬಳಪ್ಪ ಇವರು ದಿನಾಂಕ: 12-01-2017 ರಂದು ದಾವಣಗೆರೆ ಜಿಲ್ಲೆ, ದಾವಣಗೆರೆ ತಾಲ್ಲೂಕು, ಲೋಕಿಕೆರೆ ಹೋಬಳಿ, ಗೋಣಿವಾಡ ಗ್ರಾಮದ ಸ್ವ-ಗೃಹದಲ್ಲಿ ಮರಣ ಹೊಂದಿದ್ದು, ಇವರ ಮರಣ ಪ್ರಮಾಣಪತ್ರವನ್ನು ಸಲುವಾಗಿ ಅರ್ಜಿದಾರರು ನ್ಯಾಯಾಲಯದ ಮುಂದೆ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರಿಗೆ ಸಂಬಂದಪಟ್ಟ ಯಾರದಾದರು ತಕರಾರು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವುದಿದ್ದಲ್ಲಿ ದಿನಾಂಕ: : 4/10/25 ರಂದು ಖುದ್ದು ಹಾಜರಾಗಿ ಆಕ್ಷೇಪಣೆಯನ್ನು ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ತಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು. ನ್ಯಾಯಾಲಯದ ಮುದ್ರೆ ಹಾಗೂ ಸಹಿಯೊಂದಿಗೆ ದಿನಾಂಕ: 6/8/25 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/-
ಅರ್ಜಿದಾರರ ಪರ ವಕೀಲರು
(ಬಿ.ಎಸ್. ನಾಗರಾಜ್)

ಸಹಿ/-
ಶಿರಸ್ತೇದಾರರು
ಮಾನ್ಯ 3ನೇ ಹೆಚ್ಚುವರಿ ಸಿವಿಲ್
ನ್ಯಾಯಾಧೀಶರು(ಕಿ.ವಿ) ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಲಯ ದಾವಣಗೆರೆ

**ಮಾನ್ಯ 3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ(ಕಿ.ವಿ) ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ದಾವಣಗೆರೆ**

**ಸಿ.ಆರ್.ಮಿಸ್.ನಂ: 2535/2025**

**ಎದುರುದಾರರು :** 1) ಶ್ರೀ ನಾಗರಾಜಪ್ಪ ಬಿನ್ ಲೇಟ್ ನಿಂಗೋಳ್ಳರ ಓಬಳಪ್ಪ ವಯಸ್ಸು ಸುಮಾರು 70 ವರ್ಷ 2.) ಚಂದ್ರಪ್ಪ ಬಿನ್ ನಾಗರಾಜಪ್ಪ ವಯಸ್ಸು ಸುಮಾರು 47 ವರ್ಷ 3.) ಕುಬೇರಪ್ಪ ಬಿನ್ ನಾಗರಾಜಪ್ಪ ವಯಸ್ಸು ಸುಮಾರು 45 ವರ್ಷ 4.) ಓಬಳೇಶ್ ಬಿನ್ ನಾಗರಾಜಪ್ಪ ವಯಸ್ಸು ಸುಮಾರು 40 ವರ್ಷ. 5.) ಶ್ರೀಮತಿ ಗಂಗಮ್ಮ ಕೋಂ ನಾಗರಾಜಪ್ಪ ವಯಸ್ಸು ಸುಮಾರು 40 ವರ್ಷ.
1 ರಿಂದ 5ನೇ ಅರ್ಜಿದಾರರ ವಾಸ: ಗೋಣಿವಾಡ ಗ್ರಾಮ. ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ ಎಂದು ಇರುತ್ತದೆ.
6.) ಶ್ರೀಮತಿ ಸರಸ್ವತಿ ಕೋಂ ಕೆ.ಟಿ. ತಿಮ್ಮಣ್ಣ, ವಾಸ: ಗೌಡಗೆರೆ ಗ್ರಾಮ, ಚಿತ್ರದುರ್ಗ ತಾ॥ ಮತ್ತು ಜಿ॥

-ವಿರುದ್ಧ-

**ಎದುರುದಾರರು :** ತಹಶೀಲ್ದಾರರವರು ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ

**-:ಅರ್ಜಿದಾರರ ಪರ ನೀಡಲಾದ ಪ್ರಕಟಣಾ ನೋಟೀಸು:-**

ಈ ಮೇಲ್ಕಂಡ ಕೇಸಿನಲ್ಲಿ ಅರ್ಜಿದಾರರು ಎದುರುದಾರರ ವಿರುದ್ಧ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರ ಅಜ್ಜನಾದ ನಿಂಗೊಳ್ಳರ ಓಬಳಪ್ಪ ಬಿನ್ ಹನುಮಂತಪ್ಪ ಇವರು ದಿನಾಂಕ: 03-07-1983 ರಂದು ದಾವಣಗೆರೆ ಜಿಲ್ಲೆ, ದಾವಣಗೆರೆ ತಾಲ್ಲೂಕು, ಲೋಕಿಕೆರೆ ಹೋಬಳಿ, ಗೋಣಿವಾಡ ಗ್ರಾಮದ ಸ್ವ-ಗೃಹದಲ್ಲಿ ಮರಣ ಹೊಂದಿದ್ದು, ಇವರ ಮರಣ ಪ್ರಮಾಣಪತ್ರವನ್ನು ಪಡೆಯುವ ಸಲುವಾಗಿ ಅರ್ಜಿದಾರರು ನ್ಯಾಯಾಲಯದ ಮುಂದೆ ಅರ್ಜಿಯನ್ನು ಸಲ್ಲಿಸಿದ್ದು,ಅರ್ಜಿದಾರರಿಗೆ ಸಂಬಂದಪಟ್ಟ ಯಾರದಾದರು ತಕರಾರು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವುದಿದ್ದಲ್ಲಿ ದಿನಾಂಕ: : 10/10/25 ರಂದು ಖುದ್ದು ಹಾಜರಾಗಿ ಆಕ್ಷೇಪಣೆಯನ್ನು ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ತಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು. ನ್ಯಾಯಾಲಯದ ಮುದ್ರೆ ಹಾಗೂ ಸಹಿಯೊಂದಿಗೆ ದಿನಾಂಕ: 6/8/25 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/-
ಅರ್ಜಿದಾರರ ಪರ ವಕೀಲರು
(ಬಿ.ಎಸ್. ನಾಗರಾಜ್)

ಸಹಿ/-
ಶಿರಸ್ತೇದಾರರು
ಮಾನ್ಯ 3ನೇ ಹೆಚ್ಚುವರಿ ಸಿವಿಲ್
ನ್ಯಾಯಾಧೀಶರು(ಕಿ.ವಿ) ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಲಯ ದಾವಣಗೆರೆ

# ದರ್ಶನ್ ಬಳ್ಳಾರಿ ಜೈಲಿಗೆ ವರ್ಗ: ವಿಚಾರಣೆ ಆ.23 ಕ್ಕೆ ಮುಂದೂಡಿಕೆ

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿ ನಟ ದರ್ಶನ್ ಅವರನ್ನು ಪರಪ್ಪನ ಅಗ್ರಹಾರದಿಂದ ಬಳ್ಳಾರಿ ಜೈಲಿಗೆ ವರ್ಗಾವಣೆ ಅರ್ಜಿಯ ವಿಚಾರಣೆಯನ್ನು ಆ. 23ಕ್ಕೆ ಮುಂದೂಡಿದೆ.



ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಸಿಎಚ್ 64ರಲ್ಲಿ ಇಂದು ವಿಚಾರಣೆ ನಡೆಸಿದ ನ್ಯಾಯಾಧೀಶರು, ದರ್ಶನ್ ಪರ ವಕೀಲರಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಿ ವಿಚಾರಣೆಯನ್ನು ಮುಂದೂಡಿದರು. ಸರ್ಕಾರಿ ಪರ ವಕೀಲರು ವಿಚಾರಣೆ ವೇಳೆ ಹಾಜರಾಗಿ, ಕೊಲೆ ಪ್ರಕರಣದಲ್ಲಿ ಜಾಮೀನು ಸಿಗುವ ಹಿಂದೆ ದರ್ಶನ್ ಸೇರಿದಂತೆ ಇತರೆ ಆರೋಪಿಗಳು ಯಾವ ಯಾವ ಜೈಲಿನಲ್ಲಿದ್ದರು ಅಲ್ಲಿಗೆ ವರ್ಗಾವಣೆ ಮಾಡಬೇಕು ಕೋರಿ ಅರ್ಜಿ ಸಲ್ಲಿಸಿದ್ದರು.

ಆದರೆ ಜಾಮೀನು ರದ್ದಾದ ದಿನವೇ ದರ್ಶನ್ ಪರ ವಕೀಲರು ಒಂದು ವೇಳೆ ಬಳ್ಳಾರಿಗೆ ಶಿಫ್ಟ್ ಮಾಡುವುದಾದರೆ ನಮ್ಮ ವಾದವನ್ನು ಅಲಿಸಬೇಕು ಎಂದು ಮನವಿ ಮಾಡಿಕೊಂಡಿದ್ದರು.

ಈ ಹಿನ್ನೆಲೆಯಲ್ಲಿ ದರ್ಶನ್ ಪರ ವಕೀಲರಿಗೆ ಅವಕಾಶ ನೀಡಲಾಗಿದೆ. ಮುಂದಿನ ವಿಚಾರಣೆ ವೇಳೆ ದರ್ಶನ್ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಾ ಅಥವಾ ಬಳ್ಳಾರಿ

# ಅಪಾಯ ಮಟ್ಟದಲ್ಲಿ ಮಲೆನಾಡಿನ ನದಿಗಳು; ಇಂದು ಲಿಂಗನಮಕ್ಕಿ ಕ್ರಸ್ಟ್‌ಗೇಟ್ ತೆರೆಯುವ ಸಾಧ್ಯತೆ

**ಶಿವಮೊಗ್ಗ :** ಜಿಲ್ಲೆಯ ಮಲೆನಾಡು ಪ್ರದೇಶದಲ್ಲಿ ಜೋರು ಮಳೆ ಮುಂದುವರಿದಿದ್ದು ನದಿಗಳು ಅಪಾಯ ಮಟ್ಟ ತಲುಪಿವೆ. ಜಲಾಶಯಗಳಿಗೆ ಭಾರಿ ಪ್ರಮಾಣದ ನೀರು ಹರಿದು ಬರುತ್ತಿದೆ.ತುಂಗಾ, ಭದ್ರಾ, ಶರಾವತಿ, ವರದಾ, ಕುಮದ್ವತಿ, ಮಾಲತಿ ನದಿಗಳು ಅಪಾಯ ಮಟ್ಟದಲ್ಲಿ ಹರಿಯುತ್ತಿವೆ. ಭದ್ರಾ ಜಲಾಶಯದಿಂದ ಕ್ರಸ್ಟ್‌ಗೇಟ್‌ಗಳ ಮೂಲಕ 40 ಸಾವಿರ ಕ್ಯುಸೆಕ್ ನೀರನ್ನು ಹೊರ ಹರಿಸಲಾಗುತ್ತಿದೆ. ಭದ್ರಾವತಿ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಹಿಂಭಾಗದ ಭದ್ರಾನದಿಯ ಸೇತುವೆ ನೀರಿನಲ್ಲಿ ಮುಳುಗಿದೆ. ತುಂಗಾ ಜಲಾಶಯದಿಂದ 75 ಸಾವಿರ ಕ್ಯುಸೆಕ್‌ಗೂ ಅಧಿಕ ನೀರನ್ನು ಹೊರ ಹರಿಸಲಾಗುತ್ತಿದ್ದು, ಶಿವಮೊಗ್ಗ ನಗರದಲ್ಲಿ ಕೋರ್ಪಲಯ್ಯನ ಛತ್ರದ ಮಂಟಪ 3 ನೇ ಬಾರಿ ನೀರಿನಲ್ಲಿ ಮುಳುಗಿದೆ.



ರಾಜ್ಯದ ಅತಿದೊಡ್ಡ ಜಲಾಶಯ ಲಿಂಗನಮಕ್ಕಿ ಭರ್ತಿಗೆ ಕೇವಲ ಮೂರೂವರೆ ಅಡಿ ಬಾಕಿ ಇದೆ. ಜಲಾಶಯಕ್ಕೆ 60 ಸಾವಿರ ಕ್ಯುಸೆಕ್ ನೀರು ಬರುತ್ತಿದ್ದು ಮಂಗಳವಾರ ಬೆಳಗ್ಗೆ ಕ್ರಸ್ಟ್‌ಗೇಟ್‌ಗಳನ್ನು ತೆರೆದು ನದಿಗೆ ಹೆಚ್ಚುವರಿ ನೀರು ಹರಿಸುವ ಸಾಧ್ಯತೆ ಇದೆ. ಮಳೆ ಮತ್ತಷ್ಟು ಹೆಚ್ಚಾಗಿ ಭಾರಿ ಪ್ರಮಾಣದ ನೀರನ್ನು ಹೊರಬಿಟ್ಟಲ್ಲಿ ಜೋಗದಲ್ಲಿ ಶರಾವತಿಯ ವೈಭವ ಹೆಚ್ಚಲಿದೆ.ಜಿಲ್ಲೆಯ ಹಲವೆಡೆ ವಿದ್ಯುತ್ ಕಂಬಗಳು ಮುರಿದುಬಿದ್ದರೆ, ಕೆಲವೆಡೆ ವಿದ್ಯುತ್ ಮಾರ್ಗಗಳ ಮೇಲೆ ಮರಗಳು ಬಿದ್ದು ಬಹಳಷ್ಟು ಹಳ್ಳಿಗಳು ವಿದ್ಯುತ್ ಸಂಪರ್ಕ ಕಳೆದುಕೊಂಡಿವೆ. ಹೊಸನಗರ ತಾಲೂಕು ಮಾಸ್ತಿಕಟ್ಟೆಯಲ್ಲಿ ಧರೆ ಕುಸಿದು ಮೂರು ಮನೆಗಳಿಗೆ ಅಪಾಯ ಎದುರಾಗಿದೆ. ಅಂಡಗದೋದೂರಿನಲ್ಲಿ ತಗ್ಗಿನ ಗದ್ದೆಗಳು ಜಲಾವೃತಗೊಂಡರೆ ನಿಲ್ಸ್‌ಕಲ್ ಮತ್ತು ಚಕ್ರ ಸಂಪರ್ಕ ರಸ್ತೆಯಲ್ಲಿ ಧರೆ ಕುಸಿತು ಅಪಾಯ ಎದುರಾಗಿದೆ. ಸೊರಬ ತಾಲೂಕಿನಲ್ಲಿ 5 ಕ್ಕೂ ಹೆಚ್ಚು ಕಂಬಗಳು ಧರೆಗುರುಳಿವೆ.

ಹವಾಮಾನ ಇಲಾಖೆಯಿಂದ ಭಾರಿ ಮಳೆಯ ಮುನ್ಸೂಚನೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಶಾಲೆ ಕಾಲೇಜುಗಳಿಗೆ ಸೋಮವಾರ ರಜೆ ಘೋಷಿಸಿತ್ತು. ಆದರೆ, ತೀರ್ಥಹಳ್ಳಿ, ಹೊಸನಗರ ಮತ್ತು ಸಾಗರದಲ್ಲಿ ನಿರಂತರ ಸುರಿದರೂ ಧಾರಾಕಾರ ಇರಲಿಲ್ಲ. ಇನ್ನು ಅರೆಮಲೆನಾಡಿನ ತಾಲೂಕುಗಳಾದ ಸೊರಬ, ಶಿವಮೊಗ್ಗ, ಶಿಕಾರಿಪುರ ಮತ್ತು ಭದ್ರಾವತಿಗಳಲ್ಲಿ ಬಿಟ್ಟು ಬಿಟ್ಟು ಮಳೆ ಸುರಿಯಿತು. ಮಧ್ಯಾಹ್ನ 12ಗಂಟೆ ಬಳಿಕ ಮಳೆ ಕಡಿಮೆ ಆಯಿತು.

ಸೋಮವಾರ ಬೆಳಗ್ಗೆ 8 ಗಂಟೆಗೆ ಅಂತ್ಯವಾದಂತೆ ಕಳೆದ 24 ಗಂಟೆಗಳಲ್ಲಿ ಜಿಲ್ಲೆಯಲ್ಲಿ ಸರಾಸರಿ 42ಮಿ.ಮೀ. ಮಳೆಯಾಗಿದೆ. ತಾಲೂಕುವಾರು ಸರಾಸರಿಯಂತೆ ಹೊಸನಗರದಲ್ಲಿ 72ಮಿ.ಮೀ., ಸಾಗರ 65, ತೀರ್ಥಹಳ್ಳಿ 64, ಸೊರಬ 36, ಶಿವಮೊಗ್ಗ 22, ಶಿಕಾರಿಪುರ 19 ಮತ್ತು ಭದ್ರಾವತಿಯಲ್ಲಿ 13 ಮಿ.ಮೀ. ಮಳೆಯಾಗಿದೆ. ಹೊಸನಗರ ತಾಲೂಕು ಮಾಣಿಯಲ್ಲಿಅ ತಿಹೆಚ್ಚು 238 ಮಿ.ಮೀ., ಹುಲಿಕಲ್‌ನಲ್ಲಿ220, ಆಗುಂಬೆಯಲ್ಲಿ 206 ಮಿ.ಮೀ. ಮಳೆಯಾಗಿದೆ.

# ಅತ್ಯಾಚಾರ, ಯುಪಿ ಮಾಜಿ ಶಾಸಕನ ವಿರುದ್ಧ ಎಫ್‌ಐಆರ್

**ಬೆಂಗಳೂರು :** ಉತ್ತರ ಪ್ರದೇಶದ ಮಾಜಿ ಶಾಸಕ ಭಗವಾನ್ ಶರ್ಮಾ ಅವರ ವಿರುದ್ಧ ಅತ್ಯಾಚಾರ ಹಾಗೂ ಕೊಲೆ ಬೆದರಿಕೆ ಆರೋಪದಡಿ ನಗರದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ (ಕೆಐಎಎಲ್) ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಉತ್ತರ ಪ್ರದೇಶದ ಮಹಿಳಾ ರಾಜಕಾರಣಿಯೊಬ್ಬರು ಭಗವಾನ್ ಶರ್ಮಾ ವಿರುದ್ಧ ಅತ್ಯಾಚಾರ ಹಾಗೂ ಕೊಲೆ ಬೆದರಿಕೆಯ ಆರೋಪ ಮಾಡಿ ದೂರು ಕೊಟ್ಟಿದ್ದಾರೆ. ಈ ದೂರಿನ ಹಿನ್ನೆಲೆಯಲ್ಲಿ ಭಗವಾನ್ ಶರ್ಮಾ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಿಸಿದ್ದು, ವಿಚಾರಣೆಗೆ ಬರುವಂತೆ ಅವರಿಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಭಗವಾನ್ ಶರ್ಮಾ ಅವರು ತನ್ನನ್ನು ಆ.14 ರಂದು ಹೊಸದಿಲ್ಲಿಯಿಂದ ಪ್ರವಾಸಕ್ಕೆಂದು ಬೆಂಗಳೂರಿಗೆ ಕರೆದು–ಕೊಂಡು ಬಂದು ಕೆಐಎಎಲ್ ಬಳಿಯ ಪ್ರತಿಷ್ಠಿತ ಹೋಟೆಲ್‌ನಲ್ಲಿ ಇರಿಸಿದ್ದರು.

ಮಗನ ಜತೆ ಬಂದಿದ್ದ ತನ್ನನ್ನು ಭಗವಾನ್ ಶರ್ಮಾ ಅವರು ಬೆಂಗಳೂರು, ಮೈಸೂರು, ಚಿತ್ರದುರ್ಗದ ಹಲವೆಡೆ ಸುತ್ತಾಡಿಸಿದ್ದರು. ಬಳಿಕ ಆ.17 ರಂದು ಕೆಐಎಎಲ್ ಬಳಿಯ ಹೋಟೆಲ್‌ಗೆ ವಾಪಸ್ ಕರೆದುಕೊಂಡು

ಬಂದು ಕಾನೂನಾತ್ಮಕವಾಗಿ ಮದುವೆಯಾಗುವುದಾಗಿ ನಂಬಿಸಿ ಅತ್ಯಾಚಾರ ಎಸಗಿದ್ದಾರೆ ಎಂದು ಸಂತ್ರಸ್ತೆಯು ದೂರಿನಲ್ಲಿ ಆರೋಪಿಸಿದ್ದಾರೆ.

ಮದುವೆಯಾಗಲು ನಿರಾಕರಿಸುತ್ತಿರುವ ಭಗವಾನ್ ಶರ್ಮಾ, "ಅತ್ಯಾಚಾರದ ಸಂಗತಿಯನ್ನು ಬಹಿರಂಗಪಡಿಸಿದರೆ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ. ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಿ," ಎಂದು ಸಂತ್ರಸ್ತೆಯು ದೂರಿನಲ್ಲಿ ಪೊಲೀಸರಿಗೆ ಮನವಿ ಮಾಡಿದ್ದಾರೆ.

**ಸಂತ್ರಸ್ತೆಯೊಂದಿಗೆ ಸಹಜೀವನ:** ಭಗವಾನ್ ಶರ್ಮಾ, ಉತ್ತರ ಪ್ರದೇಶದ ದೇಬಾಯಿ ವಿಧಾನಸಭಾ ಕ್ಷೇತ್ರದಿಂದ ಎರಡು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು. ವಿವಾಹಿತರಾಗಿರುವ ಅವರು ಮೊದಲ ಪತ್ನಿಯಿಂದ ಕಾನೂನುಬದ್ಧವಾಗಿ ವಿಚ್ಛೇದನ ಪಡೆ–ಯದೆ ದೂರುದಾರ ಸಂತ್ರಸ್ತೆಯೊಂದಿಗೆ ಹಲವು ವರ್ಷಗಳಿಂದ ಸಹಜೀವನ ನಡೆಸುತ್ತಿದ್ದರು.

ಭಗವಾನ್ ಶರ್ಮಾ ಮತ್ತು ಸಂತ್ರಸ್ತೆಯು ಆ.14 ರಂದು ಒಟ್ಟಾಗಿ ಬೆಂಗಳೂರಿಗೆ ಪ್ರವಾಸ ಬಂದಿದ್ದರು. ನಂತರ ಅವರ ಮಧ್ಯೆ ಜಗಳವಾಗಿ ಸಂತ್ರಸ್ತೆಯು ಭಗವಾನ್ ಶರ್ಮಾ ವಿರುದ್ಧ ಅತ್ಯಾಚಾರದ ದೂರು ಕೊಟ್ಟಿದ್ದಾರೆ ಎಂದು ತನಿಖೆಯಲ್ಲಿ ಗೊತ್ತಾಗಿದೆ. ಈಗ ಸಂತ್ರಸ್ತೆಯು ದೂರು ಹಿಂಪಡೆಯುವುದಾಗಿ ಹೇಳುತ್ತಿದ್ದು, ನ್ಯಾಯಾಲಯದಲ್ಲಿ ಪ್ರಕರಣ ಇತ್ಯರ್ಥಪಡಿಸಿಕೊಳ್ಳುವಂತೆ ಅವರಿಗೆ ಸೂಚಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಖಾಸಗಿ ಬಸ್ ಪಲ್ಟಿ ಇಬ್ಬರು ಸಾವು 6 ಮಂದಿಗೆ ಗಾಯ




ಹಾವೇರಿ: ವೇಗವಾಗಿ ಹೋಗುತ್ತಿದ್ದ ಖಾಸಗಿ ಬಸ್ ಪಲ್ಟಿಯಾಗಿ ಬಾಲಕ ಸೇರಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿ 6 ಮಂದಿ ಗಂಭೀರ ಗಾಯಗೊಂಡಿರುವ ದಾರುಣ ಘಟನೆ ಬ್ಯಾಡಗಿಯ ಮೋಟೆಬೆನ್ನೂರಿನ ರಾಷ್ಟ್ರೀಯ ಹೆದ್ದಾರಿ 48 ರಲ್ಲಿ ನಡೆದಿದೆ.

ಅರ್ನವಿ(11), ಯಶ್(20) ಸ್ಥಳದಲ್ಲೇ ಮೃತಪಟ್ಟಿದ್ದು, ಗಾಯಗೊಂಡಿರುವ 6 ಮಂದಿಯನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಬಸ್ ನಲ್ಲಿದ್ದ ಉಳಿದ 29 ಮಂದಿ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.ಮಹಾರಾಷ್ಟ್ರದ ಸಾಂಗ್ಲಿಯಿಂದ ತಮಿಳುನಾಡು ಕಡೆ ಸಂಚರಿಸುತ್ತಿದ್ದಾಗ ಮಾರ್ಗ ಮಧ್ಯದ ಮೊಟೇಬೆನ್ನೂರು ಗ್ರಾಮದ ಬಳಿ ಬಸ್ ಮುಂದೆ ಕಾರು ಬಂದಿದೆ. ಕಾರಿಗೆ ಗುದ್ದುವುದನ್ನು ತಪ್ಪಿಸಲು ಹೋಗಿ ಬಸ್ ಚಾಲಕ ಬ್ರೇಕ್ ಹಾಕಿದ್ದಾನೆ.

ಪರಿಣಾಮ ಡಿವೈಡರಿಗೆ ಡಿಕ್ಕಿ ಹೊಡೆದು ಪಲ್ಟಿಯಾಗಿ ಬಸ್ ಬಿದ್ದಿದೆ. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಬ್ಯಾಡಗಿ ಪೊಲೀಸರು ಹಾಗೂ ಎಸ್‌ಪಿ ಯಶೋದಾ ವಂಟಗೋಡಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸತತ ಒಂದೂವರೆ ಗಂಟೆಗಳ ಕಾರ್ಯಚರಣೆ ನಡೆಸಿ ಬಸ್ ಮೇಲಕ್ಕೆ ಎತ್ತುವ ಕಾರ್ಯ ಮಾಡಲಾಯಿತು. ಪೊಲೀಸರು, ಅಗ್ನಿಶಾಮಕ ದಳದ ಸಿಬ್ಬಂದಿ ಗಾಯಾಳುಗಳ ರಕ್ಷಣಾ ಕಾರ್ಯ ಮಾಡಿದ್ದು ಜಿಲ್ಲಾಸ್ಪತ್ರೆಗೆ ರವಾನೆ ಮಾಡಿದರು.

ಹಲವು ಪುಟ್ಟ ಮಕ್ಕಳು ಗಂಭೀರವಾಗಿ

ಗಾಯಗೊಂಡಿದ್ದಾರೆ. ಬ್ಯಾಡಗಿ ಪೊಲೀಸರು ಪ್ರಕರಣ ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

# ಜಿಲ್ಲಾ ಯುವ ಕಾಂಗ್ರೆಸ್‌ನಿಂದ ಮತಕಳ್ಳತನದ ವಿರುದ್ಧ ಪೋಸ್ಟರ್ ಅಭಿಯಾನ

**ಕಲಬುರಗಿ:** ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಶಕೀಲ್ ಸರಡಗಿ ನೇತೃತ್ವದಲ್ಲಿ ನಗರದ ಪ್ರಮುಖ ಸ್ಥಳಗಳಲ್ಲಿ ಸಾರ್ವಜನಿಕ ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿರುವ ಮತ ಕಳ್ಳತನದ ವಿರುದ್ಧ ಪೋಸ್ಟರ್ ಅಭಿಯಾನವನ್ನು ಪ್ರಾರಂಭಿಸಿತು.




ಈ ಸಂದರ್ಭದಲ್ಲಿ ಮಾತನಾಡಿದ ಯುವ ಕಾಂಗ್ರೆಸ್ ನಾಯಕರು, ಕೇಂದ್ರ ಚುನಾವಣಾ ಆಯೋಗವನ್ನು ತೀವ್ರವಾಗಿ ಟೀಕಿಸಿದರು, ಅದು ಬಿಜೆಪಿಯ ಕೈಗೊಂಬೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಆರೋಪಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಹಿರಿಯ ನಾಯಕ ರಾಹುಲ್ ಗಾಂಧಿ ಅವರು ಎತ್ತಿರುವ ಪ್ರಶ್ನೆಗಳಿಗೆ ಉತ್ತರಿಸುವ ಬದಲು, ಆಯೋಗವು ವಿರೋಧ ಪಕ್ಷಗಳ ಭಯವನ್ನು ತೋರಿಸುತ್ತಾ ಮೌನವನ್ನು ಆರಿಸಿಕೊಂಡಿದೆ ಎಂದು ಅವರು ಹೇಳಿದರು.

ನಮ್ಮ ಆಂದೋಲನ ಸ್ಪಷ್ಟವಾಗಿದೆ.ಒಬ್ಬ ವ್ಯಕ್ತಿ, ಒಂದು ಮತವನ್ನು ಅದರ ನಿಜವಾದ ಉತ್ಸಾಹದಲ್ಲಿ ಜಾರಿಗೆ ತರಲಾಗಿದೆ ಎಂದು ನಾವು ಖಚಿತಪಡಿಸಿಕೊಳ್ಳುತ್ತೇವೆ ಮತ್ತು ಪ್ರತಿಯೊಬ್ಬ ನಾಗರಿಕನು ಕುಶಲತೆ ಅಥವಾ ವಂಚನೆಯಿಲ್ಲದೆ ಮತ ಚಲಾಯಿಸಲು ತಮ್ಮ ಹಕ್ಕಿನ ಅವಕಾಶವನ್ನು ಪಡೆಯುತ್ತಾನೆ ಎಂದು ಶಕೀಲ್ ಸರಡಗಿ ಹೇಳಿದರು.

ಈರಣ್ಣ ಪಾಟೀಲ ಝಳಕಿ.ಅಮರ ಶಿರವಾಳ,ಪರಶುರಾಮ ನಾಟೀಕಾರ,ಉಮರ್ ಜುನ್ಯೆದಿ, ರಾಜು ಮಾಳಗಿ,ಇಜಾಜ್ ನಿಂಬಾಳಕರ್,ಗಣೇಶ ನಾಗನಹಳ್ಳಿ,ಸಂಘಪಾಲ್ ಕಾಂಬಳೆ,ಮಿಸ್ತ್ರೀ ಶರ್ಫುದ್ದೀನ್,ಅಸ್ಲಂ ಸಿಂದಗಿ,ಕಾರ್ತಿಕ ಹೊಸಮನಿ ಸೇರಿದಂತೆ ಹಲವರು ಪಾಲ್ಗೊಂಡರು.

# ಇನ್ಮುಂದೆ ಹಳದಿ ಮೆಟ್ರೋದಲ್ಲಿ 15 ನಿಮಿಷಕ್ಕೊಂದು ರೈಲು



**ಬೆಂಗಳೂರು:** ಹಳದಿ ಮೆಟ್ರೊ ಪ್ರಯಾಣಿಕರಿಗೆ ಬಿಎಂಆರ್ ಸಿಎಲ್ ಸಿಹಿ ಸುದ್ದಿ ನೀಡಿದೆ. ಈ ಮಾರ್ಗದಲ್ಲಿ 15 ನಿಮಿಷಕ್ಕೊಂದು ಸಂಚರಿಸಲಿದೆ.ಇದ–ರಿಂದಾಗಿ ಪ್ರಯಾಣಿಕರ ಸಮಸ್ಯೆಗೆ ಪರಿಹಾರ ದೊರೆಯಲಿದೆ.

ಕಳೆದೊಂದು ವಾರದ ಹಿಂದಷ್ಟೇ ಬಹುನಿರೀಕ್ಷಿತ ಹಳದಿ ಮೆಟ್ರೋ ಮಾರ್ಗ ಆರಂಭವಾಗಿತ್ತು. ಆದರೆ ಪೂರ್ಣ ಪ್ರಮಾಣದ ರೈಲುಗಳು ಬರದಿರುವ ಕಾರಣ ಅರ್ಧ ಗಂಟೆಗೊಮ್ಮೆ ಸಿಗುವ ರೈಲಿನಲ್ಲೇ ಸವಾರರು ಹೈರಾಣಾಗಿ ಓಡಾಟ ಮಾಡುತ್ತಿದ್ದಾರೆ.

ಹೀಗಾಗಿ ಈ ಮಾರ್ಗದ ಪ್ರಯಾಣಿಕರಿಗೆ ಬಿಎಂಆರ್‌ಸಿಎಲ್ ಗುಡ್‌ನ್ಯೂಸ್ ನೀಡಿದ್ದು, ಶೀಘ್ರದಲ್ಲೇ ಹೆಚ್ಚುವರಿ ರೈಲಿನ ಟೆಸ್ಟಿಂಗ್ ಆರಂಭಿಸಲಿದೆ.

ಸದ್ಯ ಈ ಮಾರ್ಗದಲ್ಲಿ ಮೂರು ಸೆಟ್ ರೈಲು ಮಾತ್ರ ಓಡಾಟ ಮಾಡುತ್ತಿರುವ ಕಾರಣ ಪ್ರತಿ 25 ನಿಮಿಷಕ್ಕೊಂದು ರೈಲು ಸಂಚರಿಸುತ್ತಿವೆ. ಇದರಿಂದಲೇ ಈ ಮಾರ್ಗದಲ್ಲಿ ಅತಿ ಹೆಚ್ಚು ಜನಸಂದಣಿ ಉಂಟಾಗುತ್ತಿದೆ. ಸದ್ಯ ನಾಲ್ಕನೇ ರೈಲಿನ ಆರು ಬೋಗಿಗಳು ಹೆಬ್ಬಗೋಡಿ ಡಿಪೋ ತಲುಪಿವೆ. ರೈಲನ್ನು ಸ್ಥಿರ ಪರೀಕ್ಷೆಗಳಿಗಾಗಿ ಕೊಂಡೊಯ್ಯಲಾಗಿದೆ.

ಇದೇ ವಾರ ಡೈನಾಮಿಕ್ ಪರೀಕ್ಷೆಗಾಗಿ ಇದನ್ನು ಹಳದಿ ಮಾರ್ಗದ ಹಳಿಗಳಲ್ಲಿ ಓಡಿಸುವ ಸಾಧ್ಯತೆ ಇದೆ. ಕನಿಷ್ಠ ಎರಡು ವಾರಗಳ ಕಾಲ ಹೊಸ ರೈಲಿನ ಪರೀ–ಕ್ಷೆಗೆ ಸಮಯ ಬೇಕಿದೆ. ಟ್ರ್ಯಾಕ್ ಪರೀಕ್ಷೆ ಸಂಪೂರ್ಣವಾಗಿ ಯಶಸ್ಸು ಕಂಡರೆ ಮುಂದಿನ ವಾರಾಂತ್ಯಕ್ಕೆ ಹೊಸ ರೈಲು ಕೂಡ ಮಾರ್ಗಕ್ಕೆ ಇಳಿಯುವ ನಿರೀಕ್ಷೆಯಿದೆ.

ಪ್ರತಿ 15 ನಿಮಿಷಕ್ಕೊಂದು ರೈಲು ಸಂಚರಿಸಲಿದ್ದು, ರೈಲಿಗೆ ಕಾಯುವ ಪ್ರಯಾಣಿಕರ ಸಮಸ್ಯೆಗೆ ಬ್ರೇಕ್ ಬೀಳಲಿದೆ. ಸಮಯ ಕಡಿತವಾದರೆ ಪ್ರಯಾಣಿಕರ ಸಂಖ್ಯೆ ಕೂಡ ಏರಿಕೆಯಾಗಲಿದೆ.

# ಬಿಬಿಎಂಪಿಗೆ ಶೀಘ್ರ ಚುನಾವಣೆ

**ಬೆಂಗಳೂರು:** ಗ್ರೇಟರ್ ಬೆಂಗಳೂರು ಪ್ರದೇಶದ ವ್ಯಾಪ್ತಿಯಲ್ಲಿ ಐದು ನಗರ ಪಾಲಿಕೆಗಳನ್ನು ರಚಿಸಿ ಗಡಿ ಗುರುತಿಸಿರುವ ರಾಜ್ಯ ಸರ್ಕಾರವು, ಶೀಘ್ರವಾಗಿಯೇ ಯಾವುದೇ ಅಡೆತಡೆ ಇಲ್ಲದೆ, ಚುನಾವಣೆ ನಡೆಸಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.



ವಿಧಾನಸಭೆಯಲ್ಲಿಂದು ಶಾಸನ ರಚನೆ ಕಲಾಪದಲ್ಲಿ 2025ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ವಿಧೇಯಕವನ್ನು ಮಂಡಿಸಿದರು.

ಬಳಿಕ ಅವರು ವಿವರಣೆ ನೀಡಿದ ಅವರು, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪ್ರಕಾರ್ಯಗಳ ಕುರಿತು ಸ್ಪಷ್ಟತೆಯನ್ನು ನೀಡಲು ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2025–ಕರ್ನಾಟಕ ಅಧಿನಿಯಮ 36ಅನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ ಎಂದರು.

ಅದರಲ್ಲೂ, ನಗರ ಪಾಲಿಕೆಗಳ ಆಡಳಿತಾತ್ಮಕ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು ಮತ್ತು ಅಧಿಕಾರಗಳನ್ನು ಚಲಾಯಿಸತಕ್ಕದ್ದು? ಎಂಬ ಪದಗಳಿಗೆ ಬದಲಾಗಿ ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು. ಇದರ ಅರ್ಥ ಜಿಬಿಎ ಹೊರತುಪಡಿಸಿ ಬೇರೆ ಪಾಲಿಕೆ, ನಗರಸಭೆಗಳ ಮೇಲೆ ಹಿಡಿತ ಸಾಧಿಸುವುದಿಲ್ಲ ಎಂದು ಉಲ್ಲೇಖಿಸಿದರು.

ಈ ವೇಳೆ ಮಧ್ಯಪ್ರವೇಶಿಸಿದ ಬಿಜೆಪಿಯ ಅಶ್ವಥ್ ನಾರಾಯಣ್, ಸಿಟಿ ಕಾರ್ಪೋರೇಷನ್ ಗಳನ್ನು ಹೇಗೆ ಸೇರಿಸ್ತಿದ್ದೀರಾ.ಇದನ್ನು ಸರಿಯಾಗಿ ವಿವರಿಸಿ ಎಂದರು.

ಇದಕ್ಕೆ ಡಿ.ಕೆ.ಶಿವಕುಮಾರ್, ಸದಸ್ಯತ್ವ ವಿಚಾರದಲ್ಲಿ ಗೊಂದಲ ಬೇಡ. ಈ ಕಾರಣ–ಕ್ಕೆ ನಾವೇ ಗೊಂದಲ ಸರಿಪಡಿಸುವ ಕೆಲಸ ಮಾಡಿದ್ದೇವೆ. ಅದನ್ನು ತಿದ್ದುಪಡಿ ಮಾಡಿದ್ದೇವೆ. ಅದರಲ್ಲಿ 74 ರಡಿಗೆ ಯಾವುದೇ ಧಕ್ಕೆ ಆಗುವುದಿಲ್ಲ ಎಂದು ಭರವಸೆ ನೀಡಿದರು.

ಬಳಿಕ ಅಶ್ವಥ್ ನಾರಾಯಣ್, ಸಂವಿಧಾನ ವಿರೋಧಿಯಾಗಿ ಜಿಬಿಎ ರಚನೆ ಮಾಡಲಾಯಿತು. ಉದ್ದೇಶ ಪೂರ್ವಕವಾಗಿ ಮುಖ್ಯಮಂತ್ರಿ ಅವರಿಗೆ ಅಧಿಕಾರ ನೀಡಲಾಗಿದೆ ಎಂದು ಹೇಳಿದರು.

ಒಟ್ಟಾರೆ, ಇಲ್ಲಿ ಹಸ್ತಕ್ಷೇಪ ಮಾಡಲಾಗಿದೆ. ಸ್ಥಳೀಯ ಸಂಸ್ಥೆ ಆಡಳಿತ ಸರ್ಕಾರವೇ ತೆಗೆದುಕೊಂಡಿದೆ. ಕಾರ್ಪೋರೇಟರ್ ಕೆಲಸ ಸರ್ಕಾರ ಪಡೆದಿದೆ ಇಲ್ಲಿ ಪೂರ್ಣ ಸ್ವರಾಜ್ಯದ ಕಲ್ಪನೆ ಮಾಯ ಆಗಿದ್ದು, ಎಲ್ಲವೂ ಸರ್ಕಾರವೇ ಮಾಡುತ್ತೆ ಅಂದಿದೆ.

ಇದು ಸ್ವಾಯತ್ತ ಸಂಸ್ಥೆಗಳ ಅವನತಿಗೆ ಕಾರಣ ಎಂದು ಟೀಕಿಸಿದರು.

ಇದಕ್ಕೆ ದನಿಗೂಡಿಸಿದ ವಿಪಕ್ಷ ನಾಯಕ ಆರ್.ಅಶೋಕ್, ಗ್ರೇಟರ್ ಬೆಂಗಳೂರು ಎನ್ನುವುದು ಸರಿಯಲ್ಲ.

ಸರ್ಕಾರಕ್ಕೆ ಕನ್ನಡದ ಹೆಸರೇ ಸಿಗಲಿಲ್ವೇ. ಗ್ರೇಟರ್ ಬಿಡಿ ವಾಟರ್ ಬೆಂಗಳೂರು ಆಗಿದೆ ಎಂದು ವ್ಯಂಗ್ಯವಾಡಿದರು.

ಬಳಿಕ ಸದಸ್ಯರಾದ ರಿಜ್ವಾನ್ ಆರ್ಷದ್, ಸೋಮಶೇಖರ್, ಸತೀಶ್, ಮುನಿರಾಜು, ರಾಮಮೂರ್ತಿ ಸೇರಿದಂತೆ ಪ್ರಮುಖರು, ಜಿಬಿಎ ವಿಧೇಯಕ ಕುರಿತು ಮಾತನಾಡಿದರು.

ಆನಂತರ, ಬಳಿಕ ಸಭಾಧ್ಯಕ್ಷ ಯು ಟಿ ಖಾದರ್ ಅವರು, ಧ್ವನಿಮತದ ಮೂಲಕ ಈ ವಿಧೇಯಕ ಅಂಗೀಕರಿಸಲಾಗಿದೆ ಎಂದು ಪ್ರಕಟಿಸಿದರು.

# ಮುಂಬೈ ವರುಣನ ಅಬ್ಬರ ವಿಮಾನ ಹಾರಾಟಕ್ಕೆ ಅಡ್ಡಿ

ಮುಂಬೈ: ಸತತ ಮಳೆಯಿಂದ ಹೈರಾಣರಾಗಿರುವ ಮುಂಬೈ ಬಿಟ್ಟುಬಿಡದೆ ವರುಣಾರ್ಭಟವಾಗುತ್ತಿರುವ ಹಿನ್ನೆಲೆಯಲ್ಲಿ ನಗರದ ಅನೇಕ ಭಾಗಗಳು ಸಂಪೂರ್ಣ ಜಲಾವೃತವಾಗಿದ್ದು 250 ಕ್ಕೂ ಹೆಚ್ಚು ವಿಮಾನಗಳ ಸಂಚಾರ–ಕ್ಕೆ ಅಡ್ಡಿಯಾಗಿದೆ.

ವಿಮಾನಗಳ ಜೊತೆಗೆ ರೈಲು, ಬಸ್ ಸಂಚಾರಕ್ಕೂ ಅಡ್ಡಿಯಾಗಿದ್ದು ಜನರು ಸಮಸ್ಯೆಗೆ ಸಿಲುಕುವಂತಾಗಿದೆ, ಮುಂಬೈ ವಿಮಾನ ನಿಲ್ದಾಣದಲ್ಲಿ 155 ಹೊರಹೋಗುವ ಮತ್ತು 102 ಒಳಬರುವ ವಿಮಾನಗಳು ವಿಳಂಬವಾದರೆ, ಸೆಂಟ್ರಲ್ ರೈಲ್ವೆ ರೈಲುಗಳು 20 ರಿಂದ 30 ನಿಮಿಷ ತಡವಾಗಿ ಸಂಚಾರ ಆರಂಭಿಸಿವೆ.

ಮುಂಬೈನಲ್ಲಿ ಭಾರೀ ಮಳೆ ಮುಂದುವರಿದಿದ್ದು, ನಗರದಾದ್ಯಂತ ವ್ಯಾಪಕ ನೀರು ತುಂಬಿದೆ. ಆರ್ಥಿಕ ರಾಜಧಾನಿಯಲ್ಲಿ ನಿರಂತರ ಮತ್ತು ತೀವ್ರವಾದ ಮಳೆ ಮುಂದುವರಿದಿರುವುದರಿಂದ ಮುಂಬೈ ನಗರ ಮತ್ತು ಉಪನಗರಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ರೆಡ್ ಅಲರ್ಟ್ ನೀಡಿದೆ.

ಬೃಹನ್ ಮುಂಬೈ ಮುನ್ಸಿಪಲ್ ಕಾರ್ಪೊರೇಷನ್ ಅಗತ್ಯ ಸೇವೆಗಳಲ್ಲಿ ತೊಡಗಿರುವವರನ್ನು ಹೊರತುಪಡಿಸಿ, ಎಲ್ಲಾ ಸರ್ಕಾರಿ, ಅರೆ–ಸರ್ಕಾರಿ ಮತ್ತು ಬಿಎಂಸಿ ಕಚೇರಿಗಳಿಗೆ ರಜೆ ಘೋಷಿಸಿದೆ.

ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು, ಮುಂಬೈ ಮಹಾನಗರ ಪ್ರದೇಶದ ಎಲ್ಲಾ ಖಾಸಗಿ ಕಚೇರಿಗಳು ಮತ್ತು ಸಂಸ್ಥೆಗಳು

ತಮ್ಮ ಉದ್ಯೋಗಿಗಳನ್ನು ಸಾಧ್ಯವಾದಲ್ಲೆಲ್ಲಾ ಮನೆಯಿಂದಲೇ ಕೆಲಸ ಮಾಡಲು ನಿರ್ದೇಶಿಸಬೇಕು. ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಅನಗತ್ಯ ಪ್ರಯಾಣವನ್ನು ತಪ್ಪಿಸಬೇಕು ಎಂದು ಸಲಹೆ ನೀಡಿದೆ

ಮುಂಬೈ ನಗರ ಮತ್ತು ಉಪನಗರಗಳಲ್ಲಿ ಭಾರೀ ಮಳೆಗೆ ರೆಡ್ ಅಲರ್ಟ್ ನೀಡಲಾಗಿರುವುದರಿಂದ, ಎಲ್ಲಾ ಸರ್ಕಾರಿ, ಅರೆ–ಸರ್ಕಾರಿ ಮತ್ತು ಅರೆ ಸರ್ಕಾರಿ ಕಚೇರಿಗಳಿಗೆ ರಜೆ ನೀಡಲಾಗಿದೆ

ಕಳೆದ ಹಲವು ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆ ಮತ್ತು ಪ್ರವಾಹದಿಂದ ಮುಂಬೈ ಜನರು ಪರದಾಡುವಂತಾಗಿದೆ, ಮನೆಯಿಂದ ಹೊರ ಬರಲಾರದ ಸ್ಥಿತಿ ನಿರ್ಮಾಣವಾಗಿದೆ,

# ಉಪ ರಾಷ್ಟ್ರಪತಿ ಚುನಾವಣೆ: ಸುದರ್ಶನ್ ರೆಡ್ಡಿ ಆಯ್ಕೆ

**ನವದೆಹಲಿ:** ಮುಂದಿನ ತಿಂಗಳು 9 ರಂದು ನಡೆಯಲಿರುವ ಉಪರಾಷ್ಟ್ರಪತಿ ಚುನಾವಣೆಗೆ ಇಂಡಿಯಾ ಮೈತ್ರಿಕೂಟ ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಧೀಶ ಮತ್ತು ಗೋವಾದ ಮೊದಲ ಲೋಕಾಯುಕ್ತ ನ್ಯಾಯಮೂರ್ತಿ ಬಿ ಸುದರ್ಶನ್ ರೆಡ್ಡಿ ಅವರನ್ನು ಅಭ್ಯರ್ಥಿಯಾಗಿ ಆಯ್ಕೆ ಮಾಡಿದೆ.

ದೇಶದ ಎರಡನೇ ಅತ್ಯುನ್ನತ ಸಾಂವಿಧಾನಿಕ ಹುದ್ದೆಗೆ ನಡೆಯುವ ಸ್ಪರ್ಧೆಯಲ್ಲಿ ನಿವೃತ್ತ ನ್ಯಾಯಮೂರ್ತಿ ಸುದರ್ಶನ ರೆಡ್ಡಿ ಅವರು ಎನ್‌ಡಿಎ ಅಭ್ಯರ್ಥಿ ಮಹಾರಾಷ್ಟ್ರ ರಾಜ್ಯಪಾಲ ಮತ್ತು ಬಿಜೆಪಿಯ ಹಿರಿಯ ನಾಯಕ ಸಿಪಿ ರಾಧಾಕೃಷ್ಣನ್ ಅವರನ್ನು ಚುನಾವಣೆಯಲ್ಲಿ ಎದುರಿಸಲಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಹಾಗು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದಲ್ಲಿ ನಡೆದ ಇಂಡಿ–ಯಾ ಮೈತ್ರಿಕೂಟದ ನಾಯಕರ ಸಭೆಯಲ್ಲಿ ನಿವೃತ್ತ ನ್ಯಾಯಮೂರ್ತಿ ಸುದರ್ಶನ ರೆಡ್ಡಿ ಅವರನ್ನು ಉಪರಾಷ್ಟ್ರಪತಿ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ

ಸಭೆಯ ಬಳಿಕ ಮಲ್ಲಿಕಾರ್ಜುನ ಖರ್ಗೆ ಈ ವಿಷಯ ಪ್ರಕಟಿಸಿದ್ದಾರೆ.

ಇಂಡಿಯಾ ಮೈತ್ರಿಕೂಟದ ಪರ ಸಂಭ್ಯಾವ್ಯ ಅಭ್ಯರ್ಥಿಗಳ ಪೈಕಿ ಚಂದ್ರಯಾನ–1 ಯೋಜನೆಯ ಮೇಲ್ವಿಚಾರಣೆ ವಹಿಸಿದ್ದ ಮಾಜಿ ಇಸ್ರೋ ವಿಜ್ಞಾನಿ ಮೈಲ್ಸಾಮಿ ಅಣ್ಣಾದೊರೈ, ಮಹಾತ್ಮ ಗಾಂಧಿಯವರ ಮರಿಮೊಮ್ಮಗ ತುಷಾರ್ ಗಾಂಧಿ ಜೊತೆಗೆ ಮಹಾರಾಷ್ಟ್ರದ ದಲಿತ ನಾಯಕರೊಬ್ಬರು ಇಂಡಿಯಾ ಮೈತ್ರಿಕೂಟದ ಬಣ ಅಭ್ಯರ್ಥಿಯನ್ನಾಗಿ ಪರಿಗಣಿಸಿದ್ದು ಒಬ್ಬರನ್ನು ಅಭ್ಯರ್ಥಿ ಆಯ್ಕೆ ಮಾಡುವ ಸಾಧ್ಯತೆ ಇದೆ ಎನ್ನಲಾಗಿತ್ತು .

ಅಂತಿಮವಾಗಿ ನ್ಯಾಯಮೂರ್ತಿ ಸುದರ್ಶನ್ ರೆಡ್ಡಿ ಅವರನ್ನು ಇಂಡಿಯಾ ಬಣ ಆಯ್ಕೆ ಮಾಡಿದೆ.

ರಾಜಕೀಯೇತರ ವ್ಯಕ್ತಿಯನ್ನು ಬೆಂಬಲಿಸುವ ಈ ಕ್ರಮ ಪಕ್ಷಾತೀತವಾಗಿ ವ್ಯಾಪಕ ಬೆಂಬಲ ಗಳಿಸಬಹುದು ಎನ್ನುವುದು ಇಂಡಿಯಾ



ಮೈತ್ರಿಕೂಟದ ನಿರ್ಧಾರವಾಗಿದೆ.

ಉಪರಾಪತಿ ಹುದ್ದೆಗೆ ನಾಮಪತ್ರ ಸಲ್ಲಿಸಲು ನಾಡಿದ್ದು ಗುರುವಾರ ಕಡೆಯ ದಿನವಾಗಿದೆ. ನಾಳೆ ಎನ್ ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರು ಎನ್ ಡಿಎ ನಾಯಕರೊಂದಿಗೆ ನಾಮಪತ್ರ ಸಲ್ಲಿಸಲಿದ್ದಾರೆ

ಉಪರಾಷ್ಟ್ರಪತಿ ಸ್ಥಾನಕ್ಕಾಗಿ ಸೆಪ್ಟಂಬರ್ 9 ರಂದು ನಡೆಯಲಿರುವ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರನ್ನು ಬೆಂಬಲಿಸುವಂತೆ ಪ್ರಧಾನಿ ನರೇಂದ್ರ ಮೋದಿ ವಿರೋಧ ಪಕ್ಷಗಳ ನಾಯಕರಿಗೆ ಮನವಿ ಮಾಡಿದ್ದಾರೆ

ಎನ್‌ಡಿಎ ಅಭ್ಯರ್ಥಿಯನ್ನು ಉಪರಾಷ್ಟ್ರಪತಿ ಚುನಾವಣೆಯಲ್ಲಿ ಬೆಂಬಲಿಸುವ ಮೂಲಕ ಸರ್ವಾನುಮತದಿಂದ ಆಯ್ಕೆ ಮಾಡಬೇಕು. ಸಿಪಿ ರಾಧಾಕೃಷ್ಣನ್ ಉಪರಾಷ್ಟ್ರಪತಿ ಹುದ್ದೆ ಅತ್ಯುತ್ತಮ ಆಯ್ಕೆ ಎಂದಿದ್ದಾರೆ.

ಉಪರಾಷ್ಟ್ರಪತಿ ಸ್ಥಾನಕ್ಕೆ ನಡೆಯಲಿರುವ ಚುನಾವಣೆಯಲ್ಲಿ ಎನ್ ಡಿಎ ಅಭ್ಯರ್ಥಿಯನ್ನು ಸರ್ವಾನುಮತದಿಂದ ಆಯ್ಕೆ ಮಾಡುವ ಮೂಲಕ ಹೊಸ ರಾಜ್ಯಸಭಾ ಅಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲು ಸಹಕರಿಸಿ ಎಂದು ವಿರೋಧ ಪಕ್ಷಗಳ ನಾಯಕರಿಗೆ ಮನವಿ ಮಾಡಿದ್ದಾರೆ

ಈ ನಿಟ್ಟಿನಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರೂ ಕೂಡ ಎಲ್ಲಾ ವಿರೋಧ ಪಕ್ಷದ ನಾಯಕರೊಂದಿಗೆ ಚರ್ಚೆ ನಡೆಸಿದ್ದು ವಿರೋಧ ಪಕ್ಷಗಳ ನಾಯಕರು ಎನ್ ಡಿಎ ಉಪರಾಷ್ಟ್ರಪತಿ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರಿಗೆ ಬೆಂಬಲ ನೀಡಿ ಎಂದಿದ್ದರು. ಈ ನಡುವೆ ಇಂಡಿಯಾ ಮೈತ್ರಿಕೂಟ ತನ್ನ ಅಭ್ಯರ್ಥಿಯನ್ನು ಕಣಕ್ಕಿಳಿಸಲು ನಿರ್ಧರಿಸಿದ್ದು ಸೆಪ್ಟೆಂಬರ್ 9 ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯ ತನಕ ಮತದಾನ ನಡೆಯಲಿದ್ದು ಅಂದೇ ಫಲಿತಾಂಶ ಪ್ರಕಟವಾಗಲಿದೆ

ಯಾರು ನ್ಯಾಯಮೂರ್ತಿ ಸುದರ್ಶನ ರೆಡ್ಡಿ ಆಂಧ್ರಪ್ರದೇಶದ ರಂಗಾರೆಡ್ಡಿ ಜಿಲ್ಲೆಯಲ್ಲಿ ಜನಿಸಿದ ನ್ಯಾಯಮೂರ್ತಿ ಸುದರ್ಶನ ರೆಡ್ಡಿ ಅವರು 1971 ರಲ್ಲಿ ವಕೀಲರಾಗಿ ತಮ್ಮ ವೃತ್ತಿಜೀವನ ಪ್ರಾರಂಭಿಸಿದರು ಮತ್ತು ಆಂಧ್ರಪ್ರದೇಶ ಹೈಕೋರ್ಟ್‌ನಲ್ಲಿ ವಕೀಲರಾಗಿ ಅಭ್ಯಾಸ ಮಾಡಿ 1995 ರಲ್ಲಿ ಹೈಕೋರ್ಟ್ ನ್ಯಾಯಾಧೀಶರಾಗಿ ನೇಮಕಗೊಂಡರು

2005 ರಲ್ಲಿ ಗುವಾಹಟಿ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಬಳಿಕ ಜನವರಿ 2007 ರಲ್ಲಿ ಸುಪ್ರೀಂ ಕೋರ್ಟ್ ನ್ಯಾಯಾಧೀಶರಾಗಿ ನೇಮಕಗೊಂಡರು ಮತ್ತು ಜುಲೈ 2011 ರಲ್ಲಿ ನಿವೃತ್ತರಾದರು. ನಂತರ ಗೋವಾದ ಮೊದಲ ಲೋಕಾಯುಕ್ತರಾಗಿಯೂ ಸೇವೆ ಸಲ್ಲಿಸಿದ್ದರು

ಎನ್ ಡಿಎ ಅಭ್ಯರ್ಥಿಗೆ ಅವಕಾಶ ಹೆಚ್ಚು

ಲೋಸಸಭೆ ಮತ್ತು ರಾಜ್ಯಸಭೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಸದಸ್ಯರು ಹೆಚ್ಚಿರುವ ಹಿನ್ನೆಲೆಯಲ್ಲಿ ಎನ್ ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರ ಗೆಲುವು ಖಚಿತ ಎಂದು ಹೇಳಲಾಗಿದೆ.

.ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರನ್ನು ಒಳಗೊಂಡ ಚುನಾವಣಾ ಕಾಲೇಜಿನಿಂದ ಉಪರಾಷ್ಟ್ರಪತಿ ಅವರನ್ನು ಆಯ್ಕೆ ಮಾಡಲಾಗುತ್ತದೆ.

ಖಾಲಿ ಹುದ್ದೆಗಳನ್ನು ಹೊರತುಪಡಿಸಿ, ಪ್ರಸ್ತುತ ಚುನಾವಣಾ ಕಾಲೇಜಿನಲ್ಲಿ 782 ಸದಸ್ಯರಿದ್ದಾರೆ.

ಇದರರ್ಥ ಗೆಲ್ಲುವ ಪಕ್ಷವ ಕನಿಷ್ಠ

392 ಮತಗಳನ್ನು ಹೊಂದಿರಬೇಕು. ಬಿಜೆಪಿ ನೇತೃತ್ವದ ಎನ್ ಡಿಎ ಸರ್ಕಾರ ಅಗತ್ಯ ಬಹುಮತ ಹೊಂದಿದೆ.

# ಪ್ರಜಾಪಿತ ಬ್ರಹ್ಮಾಕುಮಾರೀಸ್‌ನಲ್ಲಿ ನಡೆದ "ಯೋಗ ವಿಜ್ಞಾನ ತರಬೇತಿ ಕಾರ್ಯಾಗಾರ"

**ಚಿಕ್ಕಮಗಳೂರು:** ನಗರದ ಬಸವನಹಳ್ಳಿಯಲ್ಲಿರುವ ಪ್ರಜಾಪಿತ ಬ್ರಹ್ಮಾಕುಮಾರೀಸ್ ಈಶ್ವರೀಯ ವಿಶ್ವ ವಿದ್ಯಾಲಯ, ಜ್ಞಾನಪ್ರಕಾಶ ಭವನದಲ್ಲಿ ಜೂ.17 ರಂದು ಮಂಗಳವಾರ ಬೆಳಗ್ಗೆ 6 ರಿಂದ ಸಂಜೆ 7 30ರವರೆಗೆ "ಯೋಗ ವಿಜ್ಞಾನ ತರಬೇತಿ ಕಾರ್ಯಾಗಾರ" (Master Trainer programme and Science of Yoga Work-shop) ದಲ್ಲಿ ವಿಶೇಷ ಆರಕ್ಷಕ ಸಿಬ್ಬಂದಿಗಳಿಗೆ ತರಬೇತಿ ನೀಡಲಾಯಿತು. ಮಾನ್ಯ ಪೊಲೀಸ್ ವರಿಷ್ಠಾಧಿಕಾರಿಗಳು ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಆರಕ್ಷಕ ಠಾಣೆಯಿಂದ 40 ಪೊಲೀಸರನ್ನು ಆದೇಶ ನೀಡಿ ಬ್ರಹ್ಮಾಕುಮಾರೀಸ್ ಸಂಸ್ಥೆಗೆ ಕಳುಹಿಸಿದ್ದರು. ರಾಜಯೋಗಿನಿ ಬ್ರಹ್ಮಾಕುಮಾರಿ ಭಾಗ್ಯಕ್ಕರವರು ಪೊಲೀಸ್ ವೃತ್ತಿಯಲ್ಲಿ ಒತ್ತಡ ಮುಕ್ತರಾಗಲು ರಾಜಯೋಗದ ಮಹತ್ವದ ಬಗ್ಗೆ ಮಾಹಿತಿ ನೀಡಿದರು.

ಆಧ್ಯಾತ್ಮಿಕ ಜ್ಞಾನ ಹಾಗೂ



ರಾಜಯೋಗದಿಂದ ಜೀವನ ಸುಖ–ಶಾಂತಮಯವಾಗುವುದು ಎಂದು ತಿಳಿಸಿದರು. ಶಿಬಿರಾರ್ಥಿಗಳಿಗೆ ಡಾ. ಭಾಸ್ಕರ್‌ರವರು ನುರಿತ ಚಿಕಿತ್ಸಕರು ಜಲತ್ರಾಟಕ, ವಾಟರ್‌ಥೆರಪಿ, ಐಸ್‌ಥೆರಪಿ, ಡೆಂಟಲ್ ಥೆರಪಿ ಹಾಗೂ ವಿವಿಧ ಥೆರಪಿ ಚಿಕಿತ್ಸೆಗಳ ಮೂಲಕ ಶಾರೀರಿಕ–ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳುವ ವಿಧಾನವನ್ನು ತಿಳಿಸುವುದರ ಜೊತೆ ಚಿಕಿತ್ಸೆ ನೀಡಿದರು.

ಎಲ್ಲಾ ಶಿಬಿರಾರ್ಥಿಗಳು ಇದೊಂದು ಸಮರ್ಥ ಹಾಗೂ ಬಹಳ ಉಪಯುಕ್ತವಾದ ಶಿಬಿರ, ಅನೇಕ ವಿಚಾರಗಳ ಅನುಭವವನ್ನು ಪಡೆದೆವು ಎಂದು ಅಭಿಪ್ರಾಯ ತಿಳಿಸಿದ್ದಾರೆ.

ಹಾಗೇ ಮುಂದಿನ ದಿನಗಳಲ್ಲಿ ಇಂತಹ ಶಿಬಿರಗಳನ್ನು ಒಂದು ವಾರ ಅಥವಾ 21 ದಿನಗಳು ಮಾಡಬೇಕೆಂದು ವಿನಂತಿಸಿಕೊಂಡಿದ್ದಾರೆ. ಬ್ರಹ್ಮಾಕುಮಾರೀಸ್ ಸಂಸ್ಥೆಯಿಂದ 36 ಶಿಬಿರಾರ್ಥಿಗಳಿಗೆ ಪ್ರಶಸ್ತಿಪತ್ರ ನೀಡಲಾಯಿತು.

## ಸುಹಾಸ್ ಶೆಟ್ಟಿ ಕೊಲೆ ಪ್ರಕರಣ: ರಾಜ್ಯದ 18 ಸ್ಥಳಗಳಲ್ಲಿ NIA ದಾಳಿ

**ನವದೆಹಲಿ:** ಬಜರಂಗದಳ ಸದಸ್ಯ ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ(ಎನ್ಐಎ) ಶನಿವಾರ ಕರ್ನಾಟಕದ ವಿವಿಧ ಜಿಲ್ಲೆಗಳ 18 ಸ್ಥಳಗಳಲ್ಲಿ ವ್ಯಾಪಕ ಶೋಧ ನಡೆಸಿದೆ.

ಈ ವರ್ಷದ ಮೇ ತಿಂಗಳಲ್ಲಿ ಮಂಗಳೂರು ನಗರದ ಬಜ್ಪೆ ಪ್ರದೇಶದಲ್ಲಿ ಆರೋಪಿಗಳಾದ ಅಬ್ದುಲ್ ಸಫ್ವಾನ್ ಮತ್ತು ಇತರರು ಸುಹಾಸ್ ಶೆಟ್ಟಿ ಅವರನ್ನು ಸಾರ್ವಜನಿಕವಾಗಿ ಬರ್ಬರವಾಗಿ ಹತ್ಯೆ ಮಾಡಿದ್ದರು.

ಈ ಕೊಲೆ ಸಮಾಜದಲ್ಲಿ ಭಯೋತ್ಪಾದನೆಯನ್ನು ಹರಡುವ ಉದ್ದೇಶ ಹೊಂದಿತ್ತು ಎಂದು ಎನ್ಐಎ ಪ್ರಕಟಣೆಯಲ್ಲಿ ತಿಳಿಸಿದೆ. ಜೂನ್‌ನಲ್ಲಿ ಸ್ಥಳೀಯ ಪೊಲೀಸರಿಂದ ಪ್ರಕರಣದ ತನಿಖೆ ತನ್ನ ಹೆಗಲಿಗೆ ವಹಿಸಿಕೊಂಡ ಎನ್ಐಎ, ಶನಿವಾರ ಬಂಧಿತ 12 ವ್ಯಕ್ತಿಗಳು ಮತ್ತು ಪ್ರಕರಣದ ವಿವಿಧ ಶಂಕಿತರ ನಿವಾಸಗಳ ಮೇಲೆ ದಾಳಿ ನಡೆಸಿ, ಶೋಧಿಸಿದೆ.

ಮಂಗಳೂರು, ಚಿಕ್ಕಮಗಳೂರು ಮತ್ತು ಹಾಸನ ಜಿಲ್ಲೆಗಳಲ್ಲಿ ನಡೆಸಿದ ಶೋಧದಲ್ಲಿ 11 ಮೊಬೈಲ್ ಫೋನ್‌ಗಳು, 13 ಸಿಮ್ ಕಾರ್ಡ್‌ಗಳು ಮತ್ತು ಎಂಟು ಮೆಮೊರಿ ಕಾರ್ಡ್‌ಗಳು ಹಾಗೂ ಇತರ ಅಪರಾಧ ದಾಖಲೆಗಳು ಸೇರಿದಂತೆ ವಿವಿಧ ಡಿಜಿಟಲ್ ಸಾಧನಗಳನ್ನು ವಶಪಡಿಸಿಕೊಳ್ಳಲಾಗಿದೆ.

# ನಿನ್ನೆಯ ಪಾಠದಿಂದ ಇಂದು ಯಶಸ್ಸು ಗಳಿಕೆ ಅಸಾಧ್ಯ



**ದಾವಣಗೆರೆ:** ನಿನ್ನೆಯ ಪಾಠದಿಂದ ಇಂದು ಯಶಸ್ಸು ಗಳಿಸುವುದು ಅಸಾಧ್ಯ. ಪ್ರಗತಿಗೆ ಬದಲಾವಣೆಗಳನ್ನು ಒಪ್ಪಿಕೊಳ್ಳುವುದು ಮುಖ್ಯ ಎಂದು ಹೈದರಾಬಾದ್‌ನ ಪಾಣಿನೀಯ ಇನ್‌ಸ್ಟಿಟ್ಯೂಟ್ ಆಫ್ ಡೆಂಟಲ್ ಸೈನ್ಸಸ್‌ನ ದಂತವೈದ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಪಿ. ಕರುಣಾಕರ್ ಹೇಳಿದರು.

ನಗರದ ಬಾಪೂಜಿ ಸಭಾಂಗಣದಲ್ಲಿ ಕಾಲೇಜ್ ಆಫ್ ಡೆಂಟಲ್ ಸೈನ್ಸಸ್ ಮತ್ತು ಬಾಪೂಜಿ ಡೆಂಟಲ್ ಕಾಲೇಜಿನ ಸಹಯೋಗದಲ್ಲಿ ಆಯೋಜಿಸಲಾಗಿದ್ದ 4ನೇ ಎಂಡೋಡಾಂಟಿಕ್ಸ್ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ದಂತ ವೈದ್ಯಕೀಯ ವೃತ್ತಿಯಲ್ಲಿ ಕೃತಕ ಬುದ್ಧಿಮತ್ತೆ (ಎಐ) ಮತ್ತು ಡಿಜಿಟಲ್ ತಂತ್ರಜ್ಞಾನಗಳ ಅಳವಡಿಕೆ ಅನಿವಾರ್ಯವಾಗಿದೆ. ವಿದ್ಯಾರ್ಥಿಗಳು ಮುಂದುವರಿದ ತಂತ್ರಜ್ಞಾನಕ್ಕೆ ತೆರೆದುಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು.

'ಹದ್ದುಗಳೊಂದಿಗೆ ಹಾರಬೇಕೆಂದರೆ ಬಾತುಕೋಳಿಗಳ ಜೊತೆ ಈಜುವುದನ್ನು ನಿಲ್ಲಿಸಬೇಕು' ಎಂಬ ನಾಣ್ಣುಡಿಯಂತೆ ಉನ್ನತ ಸ್ಥಾನದಲ್ಲಿರುವವರ ಜೊತೆ ಸಹವಾಸ ಮಾಡಬೇಕು. ಅವರಿಂದ ಕಲಿಯಬೇಕು. ಅದು ವೃತ್ತಿಯಲ್ಲಿ ಯಶಸ್ಸು ಸಾಧಿಸಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

'ಜಗತ್ತಿನಲ್ಲಿ ಯಾರನ್ನೂ ಹೆಚ್ಚು ಅವಲಂಬಿಸಬೇಡಿ, ಏಕೆಂದರೆ ಕತ್ತಲಲ್ಲಿ ನಿಮ್ಮ ನೆರಳೂ ನಿಮ್ಮನ್ನು ಬಿಟ್ಟುಹೋಗುತ್ತದೆ' ಎಂಬ ಅಬ್ರಹಾಂ ಲಿಂಕನ್ ಅವರ ಮಾತುಗಳನ್ನು ಉಲ್ಲೇಖಿಸಿದ ಕರುಣಾಕರ್, ನಿಮ್ಮ ಆತ್ಮವಿಶ್ವಾಸದ ಬಗ್ಗೆ ನಂಬಿಕೆ ಇರಬೇಕು. ನೂರು ಜನ ನೂರು ಮಾತುಗಳನ್ನು ಹೇಳುತ್ತಾರೆ. ಆದರೆ ನಿಮಗೆ ಸರಿ ಎಂದು ಅನಿಸಿದ್ದನ್ನು ಮಾಡಲು ಹಿಂಜರಿಯಬಾರದು ಎಂದು ತಿಳಿಸಿದರು.

1991–92 ರಲ್ಲಿ ಕೇವಲ 10 ವಿದ್ಯಾರ್ಥಿಗಳೊಂದಿಗೆ ಸ್ಥಾಪನೆಗೊಂಡ ಕಾಲೇಜ್ ಆಫ್ ಡೆಂಟಲ್ ಸೈನ್ಸಸ್, ಇಂದು ಅದ್ಭುತವಾಗಿ ಬೆಳೆದು ನಿಂತಿದೆ. ಸಂಸ್ಥೆಯ ಸಮರ್ಪಣೆ ಮತ್ತು ಗುಣಮಟ್ಟಕ್ಕೆ ಇದು ಸಾಕ್ಷಿಯಾಗಿದೆ. ದಾವಣಗೆರೆಯ ಈ ಸಂಸ್ಥೆಯಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಪಡೆದ ವಿದ್ಯಾರ್ಥಿಗಳು ಜಗತ್ತಿನ ನಾನಾ ಕಡೆ ಇದ್ದರೂ, ಅವರಲ್ಲಿ ಈ ಸಂಸ್ಥೆಯ ಬಗ್ಗೆ ಗೌರವ ಮತ್ತು ಅಭಿಮಾನ ಕಂಡುಬರುತ್ತದೆ ಎಂದರು.

ಕಾಲೇಜ್ ಆಫ್ ಡೆಂಟಲ್ ಸೈನ್ಸಸ್ ನಿರ್ದೇಶಕಿ ಡಾ. ವಸುಂಧರಾ ಶಿವಣ್ಣ ಮಾತನಾಡುತ್ತಾ, ತಜ್ಞರ ಸಹಯೋಗ ಮತ್ತು ತಂಡದ ಕೆಲಸವು ರೋಗಿಗಳ ಸಮಗ್ರ ಚಿಕಿತ್ಸೆಗೆ ಅತ್ಯಗತ್ಯ ಎಂದು ಪ್ರತಿಪಾದಿಸಿದರು.

ಈ ಸಮ್ಮೇಳನವು ವಿದ್ಯಾರ್ಥಿಗಳಲ್ಲಿ ಹೊಸ ಜ್ಞಾನ, ತಂತ್ರಜ್ಞಾನ ಹಾಗೂ ಉತ್ತಮ ಸಂಶೋಧನಾ ಮನೋಭಾವವನ್ನು ಬೆಳೆಸಲು ನೆರವಾಗಲಿದೆ. ಇಂತಹ ಸಮ್ಮೇಳನಗಳು ದಂತ ವೈದ್ಯಕೀಯ ಕ್ಷೇತ್ರದಲ್ಲಿ ನಡೆಯುತ್ತಿರುವ ಪ್ರಗತಿಯನ್ನು ಪ್ರತಿಬಿಂಬಿಸುತ್ತವೆ ಹಾಗೂ ರೋಗಿಗಳ ಆರೈಕೆಯನ್ನು ಸುಧಾರಿಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಸಂಘಟನಾ ಕಾರ್ಯದರ್ಶಿ ಡಾ. ಎನ್.ಎಂ. ಧನ್ಯಕುಮಾರ್, ಸಮಿತಿಯ ಅಧ್ಯಕ್ಷ ಡಾ. ಬಸವಣ್ಣ ಆರ್. ಎಸ್., ಕಾಲೇಜ್ ಆಫ್ ಡೆಂಟಲ್ ಸೈನ್ಸಸ್ ಪ್ರಾಂಶುಪಾಲರಾದ ಡಾ. ಐ.ಎಂ. ಅಲಿ, ಬಾಪೂಜಿ ಡೆಂಟಲ್ ಕಾಲೇಜು ಪ್ರಾಂಶುಪಾಲ ಡಾ. ಡಿ.ಬಿ. ನಂದೀಶ್ವರ್, ಎ.ಸಿ.ಇ ಅಧ್ಯಕ್ಷೆ ಡಾ. ರಮ್ಯಾ ರಘು ಕಾರ್ಯದರ್ಶಿ ಡಾ. ಮಿಥ್ರಾ ಎನ್. ಹೆಗ್ಡೆ, ಉಪಾಧ್ಯಕ್ಷ ಡಾ. ಮೋಹನ್ ಥಾಮಸ್ ನಾನಿನನ್ ಇತರರು ಉಪಸ್ಥಿತರಿದ್ದರು. ಡಾ. ಮಲ್ಲಿಕಾರ್ಜುನ್ ಗೌಡ ಕೆ ಸ್ವಾಗತಿಸಿದರು. ಪ್ರತೀಕ್ಷಾ ಪ್ರಾರ್ಥಿಸಿದರೆ, ಸಿಂಧು ಕೆ. ಅತಿಥಿಗಳನ್ನು ಪರಿಚಯಿಸಿದರು.

# ಮನೆ ಮನೆಗೆ ಪೊಲೀಸ್' ಕಾರ್ಯಕ್ರಮ ; ಮಕ್ಕಳಲ್ಲಿ ಜಾಗೃತಿ ಮೂಡಿಸಿದ ಗುತ್ತೂರು ಪೊಲೀಸ್ ಠಾಣೆ



**ಹರಿಹರ :** ಸಾರ್ವಜನಿಕರೊಂದಿಗೆ ನಿಕಟ ಸಂಬಂಧ ಹೊಂದುವ ಉದ್ದೇಶದಿಂದ ರಾಜ್ಯ ಪೊಲೀಸ್ ಇಲಾಖೆ ಜಾರಿಗೆ ತಂದಿರುವ 'ಮನೆ ಮನೆಗೆ ಪೊಲೀಸ್' ಮತ್ತು 'ಜನಸ್ನೇಹಿ ಪೊಲೀಸ್' ಎಂಬ ನೂತನ ಕಾರ್ಯಕ್ರಮದ ಭಾಗವಾಗಿ, ಹರಿಹರ ತಾಲೂಕಿನ ಗುತ್ತೂರು ಪೊಲೀಸ್ ಠಾಣೆ ವತಿಯಿಂದ ಶಾಲಾ ಮಕ್ಕಳಿಗೆ ಜಾಗೃತಿ ಮೂಡಿಸುವ ಕಾರ್ಯ ನಡೆಯಿತು.

ಈ ನಿಟ್ಟಿನಲ್ಲಿ ಗುತ್ತೂರು ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಶ್ರೀಯುತ ಯುವರಾಜ್ ಕಂಬಳಿ ಅವರ ನೇತೃತ್ವದಲ್ಲಿ, ಪೊಲೀಸ್ ಸಿಬ್ಬಂದಿ ವರ್ಗದೊಂದಿಗೆ ಅವರು ಹರಿಹರ ತಾಲೂಕಿನ ಸರ್ಕಾರಿ ಪ್ರೌಢಶಾಲೆ ಆವರಣಕ್ಕೆ ಭೇಟಿ ನೀಡಿದರು. ಈ ಸಂದರ್ಭ ಶಾಲಾ ವಿದ್ಯಾರ್ಥಿಗಳಿಗೆ ಈ ವಿಶೇಷ ಕಾರ್ಯಕ್ರಮದ ಉದ್ದೇಶ ಹಾಗೂ ಮಹತ್ವವನ್ನು ವಿವರಿಸುವ ಕುರಿತು ಉಪನ್ಯಾಸ ನೀಡಲಾಯಿತು.

**ವಿದ್ಯಾರ್ಥಿಗಳೊಂದಿಗೆ ಸಂವಾದ:** ಕಾರ್ಯಕ್ರಮದಲ್ಲಿ ಮಾತನಾಡಿದ ಎಸ್ಐ ಯುವರಾಜ್ ಕಂಬಳಿ ಅವರು, ಈ ಯೋಜನೆಯು ಪ್ರತಿ ಗ್ರಾಮದಲ್ಲಿ 40 ರಿಂದ 50 ಮನೆಗಳಿಗೆ ಒಬ್ಬ 'ಮುಖ್ಯಸ್ಥ'ರನ್ನು ನೇಮಿಸುವ ಮೂಲಕ ಸಾರ್ವಜನಿಕ ಸಮಸ್ಯೆಗಳನ್ನು ಓಲೈಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತದೆ ಎಂದು ತಿಳಿಸಿದರು. ಈ ನೇಮಕಗೊಂಡ ವ್ಯಕ್ತಿಗಳು ತಮ್ಮ ಪಕ್ಕದ ಮನೆಗಳಲ್ಲಿ ಉಂಟಾಗುವ ಸಮಸ್ಯೆಗಳ ಬಗ್ಗೆ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡುವ ಮೂಲಕ, ತ್ವರಿತ ಪರಿಹಾರ ಕ್ರಮ ಕೈಗೊಳ್ಳಬಹುದಾಗಿದೆ ಎಂದು ತಿಳಿಸಿದರು.

ಅಲ್ಲದೆ, ವಿದ್ಯಾರ್ಥಿಗಳ ಮೂಲಕ ಈ ಮಾಹಿತಿ ಅವರನ್ನು ಪೋಷಕರಿಗೆ ತಿಳಿಸಲು ಮನವಿ ಮಾಡುವ ಮೂಲಕ, ಸಮಗ್ರ ಜಾಗೃತಿಯನ್ನು ಹರಡುವ ನಿಟ್ಟಿನಲ್ಲಿ ತಮ್ಮ ಸಂದೇಶವನ್ನು ಪಸರಿಸಿದರು. "ನಿಮ್ಮ ಕುಟುಂಬಗಳು ಈ ಮಾಹಿತಿ ತಿಳಿದುಕೊಳ್ಳುವುದು ಬಹಳ ಅಗತ್ಯ. ನೀವು ನಿಮ್ಮ ಮನೆಗೆ ಹಿಂತಿರುಗಿದಾಗ ಈ ಯೋಜನೆಯ ಬಗ್ಗೆ ನಿಮ್ಮ ಪೋಷಕರಿಗೆ ತಿಳಿಸಿ," ಎಂದು ಅವರು ಮಕ್ಕಳಿಗೆ ಕಿವಿಮಾತು ಹೇಳಿದರು.

ಪಾಲ್ಗೊಂಡ ಗಣ್ಯರು: ಈ ಕಾರ್ಯಕ್ರಮದಲ್ಲಿ ಶಾಲೆಯ ಹಿರಿಯ ಶಿಕ್ಷಕರಾದ ಶ್ರೀಯುತ ಇಸ್ಮಾಯಿಲ್, ಶಿಕ್ಷಕ ಮಿತ್ರರು, ಗ್ರಾಮ ಪಂಚಾಯಿತಿ ಸದಸ್ಯರಾದ ದೊಡ್ಡ ಹನುಮಂತಪ್ಪ ಹಾಗೂ ಎಸ್‌ಡಿಎಂಸಿ ಅಧ್ಯಕ್ಷರಾದ ಡಿ.ಡಿ. ಹನುಮಂತಪ್ಪ ಉಪಸ್ಥಿತರಿದ್ದರು. ಜೊತೆಗೆ ಪೊಲೀಸ್ ಠಾಣೆಯ ಸಿಬ್ಬಂದಿಗಳಾದ ಗಂಗಾಧರ್ ಮತ್ತು ಇತರರು ಸಹ ಭಾಗವಹಿಸಿ, ಮಕ್ಕಳಿಗೆ ಮಾಹಿತಿ ನೀಡುವಲ್ಲಿ ತೊಡಗಿದ್ದರು.

**ಸಾಮಾಜಿಕ ಜವಾಬ್ದಾರಿ ಹಾಗೂ ಜಾಗೃತಿ ಉದ್ದೇಶ:** ಈ ಕಾರ್ಯಕ್ರಮವು ಮಕ್ಕಳಲ್ಲಿ ಪೊಲೀಸ್ ಇಲಾಖೆಯ ಮೇಲೆ ನಂಬಿಕೆಯನ್ನು ಬೆಳೆಸುವುದರ ಜೊತೆಗೆ, ಗ್ರಾಮೀಣ ಮಟ್ಟದಲ್ಲಿಯೇ ಜವಾಬ್ದಾರಿಯುತ ಸಮಾಜ ನಿರ್ಮಾಣದ ನಿಟ್ಟಿನಲ್ಲಿ ಹೆಜ್ಜೆ ಇಡುವ ಮಹತ್ವದ ಯೋಜನೆಯಾಗಿದೆ ಎಂಬ ಅಭಿಪ್ರಾಯ ಎಲ್ಲರಿಂದಲೂ ವ್ಯಕ್ತವಾಯಿತು.

# ಮೂರು ದಿನಗಳ ವೈದ್ಯಕೀಯ ವಿಜ್ಞಾನ ವಸ್ತು ಪ್ರದರ್ಶನಕ್ಕೆ ಸಚಿವ ಎಚ್. ಕೆ ಪಾಟೀಲ ಚಾಲನೆ



**ಗದಗ:** ನಗರದ ಕೆ. ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ದಶಮಾನೋತ್ಸವದ ಸಂಭ್ರಮಾಚರಣೆ ಅಂಗವಾಗಿ ಮೆಡಿವಿಜನ್ ಎಂಬ ಮೂರು ದಿನಗಳ ವೈದ್ಯಕೀಯ ವಿಜ್ಞಾನ ವಸ್ತು ಪ್ರದರ್ಶನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅವರು ಸೋಮವಾರ ಚಾಲನೆ ನೀಡಿದರು.

'ಮೆಡಿವಿಜನ್ 2025'ವೈದ್ಯಕೀಯ ವಿಜ್ಞಾನ ವಸ್ತುಪ್ರದರ್ಶನ' ವಿದ್ಯಾರ್ಥಿಗಳಿಗೆ ಭರಪೂರ ಮಾಹಿತಿ ಒದಗಿಸುವಲ್ಲಿ ಯಶಸ್ವಿಯಾಯಿತು. ಮೂರು ದಿನ ನಡೆಯುವ ವಸ್ತುಪ್ರದರ್ಶನದಲ್ಲಿ ಸೋಮವಾರ 8200 ಮಕ್ಕಳು ಭಾಗವಹಿಸಿದ್ದರು.

ಜಿಲ್ಲೆಯ ವಿವಿಧ ಭಾಗಗಳಿಂದ ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ವಿದ್ಯಾರ್ಥಿಗಳನ್ನು ಶಿಕ್ಷಕರು ಕರೆತಂದಿದ್ದರು. ಕಣ್ಣು, ಮೂಗು, ಬಾಯಿ, ಕಿವಿ ಸೇರಿದಂತೆ ಇಡೀ ದೇಹದ ಸಂಕೀರ್ಣ ರಚನೆಗಳನ್ನು ಯುವ ವೈದ್ಯರು ವಿದ್ಯಾರ್ಥಿಗಳಿಗೆ ಸರಳವಾಗಿ ತಿಳಿಸಿಕೊಟ್ಟರು. ವೈದ್ಯರ ವಿವರಣೆಯನ್ನು ಮಕ್ಕಳು ಆಸಕ್ತಿಯಿಂದ ಕೇಳಿ, ತಿಳಿದುಕೊಂಡರು. ಕೆ. ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗನ ಘೋಷ ವಾಕ್ಯ 'ಸರ್ವಜನೋ ಆರೋಗ್ಯಂ ಭವತು' ಎಂಬುದಾಗಿದ್ದು, ಸರ್ವರೂ ಆರೋಗ್ಯದ ಬಗ್ಗೆ ಕಾಳಜಿ ಹೊಂದಲು ತಿಳುವಳಿಕೆ ಮೂಡಿಸುವಲ್ಲಿ ಪ್ರದರ್ಶನ ಯಶಸ್ವಿಯಾಯಿತು. ಜನರಲ್ ಮೆಡಿಸನ್, ಮನೋವೈದ್ಯಕೀಯ, ಸರ್ಜರಿ, ಇಎನ್‌ಟಿ, ರಕ್ತ, ಕರಳು, ಕಿಡ್ನಿ, ಮೂಳೆ ಮತ್ತು ಎಲುಬು, ಅನಾಟಮಿ, ಪ್ರಸೂತಿ ಮತ್ತು ಹೆರಿಗೆ ಸೇರಿದಂತೆ ವೈದ್ಯಕೀಯ ವಿಜ್ಞಾನದಲ್ಲಿರುವ ಅಷ್ಟು ಶಾಖೆಗಳ ವಿವರಣೆ ನೀಡಲು ಪ್ರತ್ಯೇಕ ಸ್ಟಾಲ್‌ಗಳನ್ನು ನಿರ್ಮಿಸಲಾಗಿತ್ತು.

ಅದಕ್ಕೆ ಸಂಬಂಧಿಸಿದ ಮಾದರಿಗಳನ್ನು ಇರಿಸಲಾಗಿತ್ತು. ವಿದ್ಯಾರ್ಥಿಗಳಿಗೆ ಜ್ಞಾನ ಹಂಚುವುದರ ಜತೆಗೆ ವೈದ್ಯಕೀಯ ಅಭ್ಯಾಸ ಮಾಡುತ್ತಿರುವ ಯುವ ವೈದ್ಯರ ಕಲಿಕೆಗೂ ಪೂರಕವಾಗಿತ್ತು.

ಮಾದರಿ ತೋರಿಸಿ ವಿವರಣೆ ನೀಡಿದ್ದರಿಂದಾಗಿ ಮಕ್ಕಳ ಆಸಕ್ತಿಯೂ ಹಿಗ್ಗಿತ್ತು. ಮೆಡಿವಿಜನ್ ನಲ್ಲಿ ಮಾನವ ಶರೀರ ರಚನೆ, ನೈಜ ಅಂಗಾಗಗಳ ಪ್ರದರ್ಶನ, ಶರೀರ ಕ್ರೀಯೆ–ತಿಳುವಳಿಕೆ, ಆರೋಗ್ಯದ ಬಗ್ಗೆ ಮಾಹಿತಿ, ಕ್ಯಾನ್ಸರ್, ಸಕ್ಕರೆ ಕಾಯಿಲೆ, ರಕ್ತದೊತ್ತಡ, ಹೃದಯ ಕಾಯಿಲೆ, ಥೈರಾಯ್ಡ್ ಇನ್ನಿತರೆ ಕಾಯಿಲೆಗಳ ಬಗ್ಗೆ ತಿಳುವಳಿಕೆ, ಆಧುನಿಕ ವೈದ್ಯಕೀಯ ಉಪಕರಣಗಳ ಪ್ರದರ್ಶನ, ಆಹಾರ ಬಗ್ಗೆ ಅರಿವು ಮೂಡಿಸುವ ವೈಶಿಷ್ಟ್ಯಗಳು ಕಂಡು ಬಂದವು. ಮಕ್ಕಳಿಗೆ ವೈದ್ಯಕೀಯ ವಿಜ್ಞಾನಗಳ ಬಗ್ಗೆ ಆಸಕ್ತಿ ಮೂಡಿಸುವುದು. ಸದೃಢ ಆರೋಗ್ಯವಂತ ಭಾರತ ನಿರ್ಮಾಣಕ್ಕಾಗಿ ಮಕ್ಕಳಿಗೆ ಆರೋಗ್ಯದ ಬಗ್ಗೆ ತಿಳುವಳಿಕೆ.

ಭವಿಷ್ಯದಲ್ಲಿ ವೈದ್ಯರಾಗುವ ಕನಸುಗಳಿಗೆ ಪ್ರೇರಣೆ ನೀಡುವುದು ಈ ಕಾರ್ಯಕ್ರಮದ ಉದ್ದೇಶವಾಗಿತ್ತು.

ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಶಿರಹಟ್ಟಿ ಶಾಸಕರಾದ ಡಾ. ಚಂದ್ರು ಲಮಾಣಿ, ವಿಧಾನಪರಿಷತ್ ಶಾಸಕ ಎಸ್ ವಿ ಸಂಕನೂರ, ಗದಗ್ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಾಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿಬಿ ಅಸೂಟಿ, ತಾಲೂಕ ಅಧ್ಯಕ್ಷ ಅಶೋಕ್ ಮಂದಾಲಿ, ಸೇರಿದಂತೆ ಸಿದ್ದು ಪಾಟೀಲ, ವಾಸಣ್ಣ ಕೂರಡಗಿ, ಎಸ್ ಎನ್ ಬಳ್ಳಾರಿ, ಕೆ.ಎಸ್. ಪಾಟೀಲ್ ಮತ್ತಿತರರಿದ್ದರು.

## ಅಜ್ಜಂಪುರದಿಂದ ಇಬ್ಬರು ನಾಪತ್ತೆ

**ಚಿಕ್ಕಮಗಳೂರು, ಆ.2:** ಅಜ್ಜಂಪುರದ ಕಲ್ಲೇಶಪ್ಪ (68) ಎಂಬುವವರು ಮಾರ್ಚ್ 16 ರಿಂದ ಹಾಗೂ ಎ.ಸಿ.ತಿಪ್ಪೇಶಪ್ಪ ಎಂಬುವವರ ಪುತ್ರ ಮಲ್ಲಿಕಾರ್ಜುನ ಎಂಬುವವರು ಕಳೆದ ಫೆಬ್ರವರಿ 5 ರಿಂದ ನಾಪತ್ತೆಯಾಗಿರುವುದಾಗಿ ಅಜ್ಜಂಪುರ ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ.

ಕಲ್ಲೇಶಪ್ಪ ಸುಮಾರು 162 ಅಡಿ ಎತ್ತರವಿರುವ ಅವರು ಕನ್ನಡ, ಮಾತನಾಡುತ್ತಾರೆ. ಎಣ್ಣೆಗೆಂಪು ಮೈಬಣ್ಣ ಸಾಧಾರಣ ಮೈಕಟ್ಟು ಹೊಂದಿದ್ದಾರೆ. ಕಪ್ಪು ಬಿಳಿ ಕೂದಲು, ಬಿಳಿ ಅಂಗಿ, ಕಪ್ಪು ಪ್ಯಾಂಟ್ ಧರಿಸಿರುತ್ತಾರೆ. ಮಲ್ಲಿಕಾರ್ಜುನ ಅವರಿಗೆ 8 ವರ್ಷದ ಹಿಂದೆ ಮದುವೆ ಮಾಡಿದ್ದು, ಪತ್ನಿ ನೇತ್ರಾವತಿ ನಿಧನರಾಗಿದ್ದು, ಆ ನಂತರ ಆಗಿಂದಾಗ್ಗೆ ಮನೆ ಬಿಟ್ಟು ತೆರಳುತ್ತಿದ್ದರು. ಆದರೆ ಕಳೆದ ಫೆಬ್ರವರಿಯಲ್ಲಿ ತೆರಳಿದವರು ಮರಳಿ ಮನೆಗೆ ಬಂದಿಲ್ಲವೆಂದು ದೂರಿನಲ್ಲಿ ತಿಳಿಸಲಾಗಿದೆ.

ಇವರಿಬ್ಬರ ಬಗ್ಗೆ ಮಾಹಿತಿ ದೊರೆತಲ್ಲಿ ಅಜ್ಜಂಪುರ ಪೊಲೀಸ್ ಠಾಣೆ (08262–245133, 8242220501)ಗೆ ಅಥವಾ ಪೊಲೀಸ್ ನಿಯಂತ್ರಣ ಕೊಠಡಿಗೆ ಮಾಹಿತಿ ನೀಡುವಂತೆ ಕೋರಲಾಗಿದೆ.

## ವ್ಯಕ್ತಿ ನಾಪತ್ತೆ

**ಚಿಕ್ಕಮಗಳೂರು, ಆ.2:** ನಗರದ ಮೆಸ್ಕಾಂನ ನೌಕರರ ಸಹಕಾರ ಸಂಘದಲ್ಲಿ ಗುಮಾಸ್ತರಾಗಿ ಕಾರ್ಯ ನಿರ್ವಹಿಸುತ್ತಿದ್ದ ಅರುಣ್‌ಕುಮಾರ್(41) ಎಂಬುವವರು ಜುಲೈ 29 ರಿಂದ ನಾಪತ್ತೆಯಾಗಿರುವುದಾಗಿ ಅವರ ತಂದೆ ರಂಗಸ್ವಾಮಿ ಎಂಬುವವರು ನಗರದ ಬಸವನಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸುಮಾರು 5.3 ಅಡಿ ಎತ್ತರವಿರುವ ಅರುಣ್‌ಕುಮಾರ್ ಕನ್ನಡ, ಇಂಗ್ಲಿಷ್ ಮಾತನಾಡುತ್ತಾರೆ. ಸಾಧಾರಣ ಮೈಕಟ್ಟು, ದುಂಡು ಮುಖ, ಎಣ್ಣೆಗೆಂಪು ಬಣ್ಣ ಹೊಂದಿರುವ ಇವರ ಬಗ್ಗೆ ಮಾಹಿತಿ ದೊರೆತಲ್ಲಿ ಬಸವನಹಳ್ಳಿ ಪೊಲೀಸ್ ಠಾಣೆ (08262–222102) ಅಥವಾ ಪೊಲೀಸ್ ನಿಯಂತ್ರಣ ಕೊಠಡಿಗೆ ಮಾಹಿತಿ ನೀಡುವಂತೆ ಕೋರಲಾಗಿದೆ.

# ಎಲ್ಲಾ ರೀತಿಯ ಜೂಜಾಟ ನಿಷೇಧಿಸಲು ಆಗ್ರಹ

## ದಾವಣಗೆರೆಯಲ್ಲಿ ಎಐಡಿವೈಓ ಪ್ರತಿಭಟನೆ




**ದಾವಣಗೆರೆ:** ಎಲ್ಲಾ ರೀತಿಯ ಜೂಜಾಟವನ್ನು ನಿಷೇಧಿಸುವಂತೆ ಆಗ್ರಹಿಸಿ ಎಐಡಿವೈಓ ಕಾರ್ಯಕರ್ತರು ನಗರದ ಉಪ ವಿಭಾಗಾಧಿಕಾರಿಗಳ ಕಛೇರಿ ಮುಂಭಾಗ ಪ್ರತಿಭಟನೆ ನಡೆಸಿ, ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜಿಲ್ಲಾ ಸಂಚಾಲಕ ಪರಶುರಾಮ್ ಮಾತನಾಡಿ, ಇತ್ತೀಚೆಗೆ ನಗರದ ಯುವಕನೊಬ್ಬ ಆನ್‌ಲೈನ್ ಬೆಟ್ಟಿಂಗ್‌ನಲ್ಲಿ ಲಕ್ಷಾಂತರ ರೂಪಾಯಿ ಕಳೆದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು, ಜನರನ್ನು ದಿಗ್ಭ್ರಮೆಗೊಳಿಸಿದೆ. ಹಲವು ವರ್ಷಗಳಿಂದ ನೂರಾರು ಯುವಕರು ಇದೇ ರೀತಿ ಆತ್ಮಹತ್ಯೆಗೆ ಶರಣಾಗಿದ್ದಾರೆ, ಇದರಿಂದ ಕುಟುಂಬಗಳು ಬೀದಿಗೆ ಬಿದ್ದಿವೆ ಮತ್ತು ಸಮಾಜದಲ್ಲಿ ಅಪರಾಧಗಳು ಹೆಚ್ಚಿವೆ. ಜೂಜಾಟ ಮತ್ತು ಆನ್‌ಲೈನ್ ಬೆಟ್ಟಿಂಗ್ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ವ್ಯಾಪಿಸಿದೆ. ರಾಜ್ಯ ಸರ್ಕಾರ ಆನ್‌ಲೈನ್ ಬೆಟ್ಟಿಂಗ್ ನಿಷೇಧಕ್ಕೆ ಕಾನೂನು ರೂಪಿಸುವುದಾಗಿ ಹೇಳಿದೆ, ಆದರೆ ಕೇವಲ ಅನಧಿಕೃತ ಬೆಟ್ಟಿಂಗ್‌ಗೆ ಮಾತ್ರ ಶಿಕ್ಷೆ ವಿಧಿಸುವ ಕಾನೂನು ರೂಪಿಸುವುದು ಹಾಸ್ಯಾಸ್ಪದವಾಗಿದೆ. ಸರ್ಕಾರವೇ ಬೆಟ್ಟಿಂಗ್ ಆಪ್‌ಗಳ ನೋಂದಣಿಗೆ ಅವಕಾಶ ನೀಡುತ್ತಿದ್ದು, ಇದರ ಮೂಲಕ ಜೂಜಾಟವನ್ನು ಹಿಂಬಾಗಿಲಿನಿಂದ ಅಧಿಕೃತಗೊಳಿಸುತ್ತಿದೆ ಎಂದು ಆರೋಪಿಸಿದರು.

ಜಿಲ್ಲಾ ಸಹ ಸಂಚಾಲಕ ಅನಿಲ್ ಕುಮಾರ್ ಮಾತನಾಡಿ, ಎಐಡಿವೈಓ ಕಳೆದ ಎರಡು ದಶಕಗಳಿಂದ ಎಲ್ಲಾ ರೀತಿಯ ಜೂಜಾಟವನ್ನು ನಿಷೇಧಿಸಲು ಆಗ್ರಹಿಸುತ್ತಿದೆ. ಧರ್ಮಸಿಂಗ್ ಸರ್ಕಾರದ ಅವಧಿಯಲ್ಲಿ ಒಂದಂಕಿ ಲಾಟರಿಯನ್ನು ನಿಷೇಧಿಸಲು ರಾಜ್ಯವ್ಯಾಪಿ ಹೋರಾಟ ನಡೆಸಿತ್ತು. ಜೂನ್ 26ರಂದು ಕೂಡ ರಾಜ್ಯ ಮಟ್ಟದಲ್ಲಿ ಪ್ರತಿಭಟನೆ ನಡೆಸಿ ಮನವಿ ಸಮರ್ಪಿಸಿತ್ತು. ಸರ್ಕಾರಕ್ಕೆ ಜನರ ಬಗ್ಗೆ ಕಾಳಜಿ ಇದ್ದರೆ ಸಂಪೂರ್ಣವಾಗಿ ನಿಷೇಧಿಸುವ ಕಾನೂನು ರೂಪಿಸಬೇಕು. ಇದಕ್ಕಾಗಿ ರಾಜ್ಯಾದ್ಯಂತ ಬೃಹತ್ ಹೋರಾಟಗಳನ್ನು ಮುಂದುವರೆ ಸಲಾಗುವುದು ಎಂದು ಎಚ್ಚರಿಕೆ ನೀಡಿದರು.

## ಆರ್‌ಪಿಎಲ್ ಕಿಟ್ ವಿತರಣೆ



**ಚಿತ್ರದುರ್ಗ:** ಚಿತ್ರದುರ್ಗ ತಾಲ್ಲೂಕಿನಲ್ಲಿ ಆರ್‌ಪಿಎಲ್ (Recognition of Prior Learning) ತರಬೇತಿ ಪಡೆದ ಕಾರ್ಮಿಕರಿಗೆ ನಗರದ ಪ್ರವಾಸಿ ಮಂದಿರದಲ್ಲಿ ಸೋಮವಾರ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಆರ್‌ಪಿಎಲ್ ಕಿಟ್ ವಿತರಿಸಿದರು.

ಕಾರ್ಮಿಕ ಇಲಾಖೆಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿವತಿಯಿಂದ ಸರಬರಾಜು ಆದ ಆರ್.ಪಿ.ಎಲ್ ಕಿಟ್‌ಗಳನ್ನು ಚಿತ್ರದುರ್ಗ ತಾಲ್ಲೂಕಿನಲ್ಲಿ ಆರ್.ಪಿ.ಎಲ್. ತರಬೇತಿ ಪಡೆದ ಕಾರ್ಮಿಕರಿಗೆ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಚಿತ್ರದುರ್ಗ ಕಾರ್ಮಿಕ ನಿರೀಕ್ಷಕ ಪಿ.ಭೀಮೇಶ್, ತಾಲ್ಲೂಕು ಕೆಡಿಪಿ ಸದಸ್ಯ ನಾಗರಾಜ್ ಹಾಗೂ ನೊಂದಾಯಿತ ಫಲಾನುಭವಿಗಳು ಉಪಸ್ಥಿತರಿದ್ದರು.

ಫೋಟೋ ವಿವರ: ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಸರಬರಾಜು ಆದ ಆರ್‌ಪಿಎಲ್ ಕಿಟ್‌ಗಳನ್ನು ಚಿತ್ರದುರ್ಗ ತಾಲ್ಲೂಕಿನಲ್ಲಿ ಆರ್‌ಪಿಎಲ್ ತರಬೇತಿ ಪಡೆದ ಕಾರ್ಮಿಕರಿಗೆ ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಆರ್‌ಪಿಎಲ್ ಕಿಟ್ ವಿತರಿಸಿದರು.

## ತೋಟಗಾರಿಕೆ ಸಸಿಗಳು ಲಭ್ಯ

ಚಿಕ್ಕಮಗಳೂರು, ಆ.2: 2025–26ನೇ ಸಾಲಿನ ತೋಟಗಾರಿಕೆ ಇಲಾಖೆಯ ಅಧೀನದ ಕಡೂರು ಹಾಗೂ ತರೀಕೆರೆ ತಾಲ್ಲೂಕಿನ ವಿವಿಧ ತೋಟಗಾರಿಕೆ ಕ್ಷೇತ್ರಗಳಲ್ಲಿ ತೆಂಗು (ರೂ.75), ಅಡಿಕೆ (ರೂ.25), ನುಗ್ಗೆ (ರೂ.10), ಪಪ್ಪಾಯ (ರೂ.11), ಹಾಗೂ ಕರಿಬೇವು (ರೂ. 15) ಸಸಿಗಳು ಲಭ್ಯವಿದ್ದು, ಆಸಕ್ತರು ತೋಟಗಾರಿಕೆ ಸಹಾಯಕರಾದ ಕಡೂರು ತಾಲ್ಲೂಕಿನ ಹರುವನಹಳ್ಳಿ ತೋಟಗಾರಿಕೆ ಕ್ಷೇತ್ರದ ಕೆ.ಟಿ.ರೇಖಾ (8277061764), ಬ್ಯಾಗಡೇಹಳ್ಳಿ ತೋಟಗಾರಿಕೆ ಕ್ಷೇತ್ರದ ಕೆ.ಎಂ.ಮಾಲತೇಶ್ (8073647791) ಹಾಗೂ ತರೀಕೆರೆ ತಾಲ್ಲೂಕಿನ ಬೇಲೇನಹಳ್ಳಿ ತೋಟಗಾರಿಕೆ ಕ್ಷೇತ್ರದ ಎಸ್.ಆರ್.ನಂದೀಶ್‌ಕುಮಾರ್ (9483792154) ಅವರನ್ನು ಸಂಪರ್ಕಿಸಬಹುದೆಂದು ಕಡೂರು ತಾಲ್ಲೂಕಿನ ಹರುವನಹಳ್ಳಿ ತೋಟಗಾರಿಕೆ ಕ್ಷೇತ್ರದ ಸಹಾಯಕ ತೋಟಗಾರಿಕೆ ನಿರ್ದೇಶಕ ಜಿ.ಎನ್.ನಟೇಶ್ (ರಾಜ್ಯವಲಯ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಜಾಪ್ರಭುತ್ವ ವ್ಯವಸ್ಥೆ ನೆನಪಿಸುವ ಶಾಲಾ ಸಂಸತ್

## ಪೊಲೀಸ್ ಪಬ್ಲಿಕ್ ಶಾಲೆ ಕಾರ್ಯಕ್ರಮದಲ್ಲಿ ಎಸ್ಪಿ ಉಮಾ ಪ್ರಶಾಂತ್ ಶ್ಲಾಘನೆ



**ದಾವಣಗೆರೆ :** ವಿದ್ಯಾರ್ಥಿ ನಾಯಕರ ಆಯ್ಕೆ ಪ್ರಕ್ರಿಯೆ ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ನೆನಪಿಸುತ್ತದೆ. ಇದು ಮಕ್ಕಳಿಗೆ ತಮ್ಮ ಜವಾಬ್ದಾರಿಗಳನ್ನು ಅರಿತು ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಡುತ್ತದೆ ಎಂದು ಎಸ್‌ಪಿ ಉಮಾ ಪ್ರಶಾಂತ್ ಹೇಳಿದರು.

ಕೊಂಡಜ್ಜಿಯ ಪೊಲೀಸ್ ಪಬ್ಲಿಕ್ ಶಾಲೆಯಲ್ಲಿ ನಡೆದ ಶಾಲಾ ಸಂಸತ್ತಿನ ಪದವಿ ಪ್ರದಾನ ಸಮಾರಂಭದಲ್ಲಿ ಮಾತನಾಡಿ, ಶಾಲಾ ಸಂಸತ್ತು ಕೇವಲ ಹಕ್ಕಲ್ಲ, ವಿದ್ಯಾರ್ಥಿಗಳ ಜವಾಬ್ದಾರಿಯೂ ಆಗಿದೆ. ಇದು ಚುನಾವಣಾ ಆಯೋಗದ ಕಾರ್ಯವೈಖರಿಯನ್ನು ಸರಳವಾಗಿ ಮಕ್ಕಳಿಗೆ ತಿಳಿಸುವುದಲ್ಲದೆ, ಚಿಕ್ಕ ವಯಸ್ಸಿನಿಂದಲೇ ಚುನಾವಣಾ ಮಜಲುಗಳನ್ನು ಅರಿಯಲು ನೆರವಾಗುತ್ತದೆ. ಪೊಲೀಸ್ ಪಬ್ಲಿಕ್ ಶಾಲೆಯು ಮಕ್ಕಳ ಸರ್ವಾಂಗೀಣ ಪ್ರಗತಿಗೆ ಶ್ರಮಿಸುತ್ತಿದೆ ಎಂದು ಶ್ಲಾಘಿಸಿದರು.

ಮಕ್ಕಳು ಕಲಿಕೆಯಲ್ಲಿ ತೊಡಗಿಸಿ ಕೊಂಡು ರಾಷ್ಟ್ರದ ಸಂಪತ್ತಾಗಬೇಕು. ಶಿಕ್ಷಕರು ಮಕ್ಕಳ ಮಾನಸಿಕ, ದೈಹಿಕ ಸವಾಲುಗಳನ್ನು ಅರಿತು, ಸಾಮಾಜಿಕ ಅಭಿವೃದ್ಧಿಗೆ ಪೂರಕ ವಾತಾವರಣ ಕಲ್ಪಿಸ ಬೇಕು ಎಂದು ಕಿವಿಮಾತು ಹೇಳಿದರು.

ಡಿಎಆರ್ ಡಿವೈಎಸ್‌ಪಿ ಪ್ರಕಾಶ್ ಪಿ ಬಿ, ಪ್ರಜಾಪ್ರಭುತ್ವವು ಗಾಂಧೀಜಿಯವರ, 'ನೀವು ಜಗತ್ತಿನಲ್ಲಿ ಕಾಣಲು ಬಯಸುವ ಬದಲಾವಣೆಯಾಗಿರಿ' ಎಂಬ ಮಾತನ್ನು ನೆನಪಿಸುತ್ತದೆ. ಶಾಲಾ ಸಂಸತ್ತು ಚುನಾವಣಾ ಆಯೋಗದ ನೈಜ ಕಾರ್ಯಮಾದರಿಯನ್ನು ಪ್ರತಿಬಿಂಬಿಸುತ್ತದೆ. ಮಕ್ಕಳು

ಶಿಸ್ತು ಮತ್ತು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಶಾಲಾ ವಿದ್ಯಾರ್ಥಿ ಮಂಡಳಿಯ ನಾಯಕನಾಗಿ ಸಾತ್ವಿಕ್ ಎಸ್. ಕಾಡಜ್ಜಿ, ನಾಯಕಿಯಾಗಿ ವೇದ ಎಂ, ಕ್ರೀಡಾ ನಾಯಕಿಯಾಗಿ ಯಶಸ್ವಿನಿ ಬಿ ಎಸ್, ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಸಂಘದ ನಾಯಕನಾಗಿ ಗಣೇಶ್ ಯು ಎಸ್ ಆಯ್ಕೆಯಾಗಿದ್ದು, ಇವರಿಗೆ ಪದವಿ ಪ್ರಧಾನ ಮಾಡಲಾಯಿತು. ಕಾವೇರಿ, ಶರಾವತಿ, ನೇತ್ರಾವತಿ, ಕೃಷ್ಣ ಹೌಸ್‌ಗಳ ನಾಯಕ ಮತ್ತು ಉಪನಾಯಕರನ್ನು ಆಯ್ಕೆ ಮಾಡಲಾಯಿತು.

ಸಮಾಜ ವಿಜ್ಞಾನ ಶಿಕ್ಷಕಿ ಮಂಜುಳಾ ಮಾಗೋಡ್, ದೈಹಿಕ ಶಿಕ್ಷಕರಾದ ಹಾಲೇಶ್, ಸವಿತಾ, ಹರ್ಷಿಯ, ರಾಜು ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಿದ್ದರು. ಶಾಲೆಯ ಪ್ರಭಾರ ಪ್ರಾಂಶುಪಾಲ ವಿನುತ ಆರ್ ಎನ್, ಬೋಧಕ–ಬೋಧಕೇತರ ಸಿಬ್ಬಂದಿ, ಪೋಷಕರು ಉಪಸ್ಥಿತರಿದ್ದರು.

## ಆ.28 ರಂದು 'ನಿಧಿ ಆಪ್ಕೆ ನಿಕಟ್'

**ಚಿಕ್ಕಮಗಳೂರು, ಆ. 19:** ಭವಿಷ್ಯ ನಿಧಿ ಕಚೇರಿಯಿಂದ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮವನ್ನು ಚಿಕ್ಕಮಗಳೂರು ಜಿಲ್ಲೆಗೆ ಸಂಬಂಧಿಸಿದಂತೆ ನಗರದ ಮಲ್ಲಂದೂರು ರಸ್ತೆಯ ಮೆ। ವಾಸವಿ ಶೈಕ್ಷಣಿಕ ಸಂಸ್ಥೆ ಹಾಗೂ ಹಾಸನ ಜಿಲ್ಲೆಗೆ ಸಂಬಂಧಿಸಿದಂತೆ ಬೇಲೂರಿನ ಶ್ರೀ ಚನ್ನಕೇಶವ ಸ್ವಾಮಿ ಮಂದಿರದಲ್ಲಿ ಆಗಸ್ಟ್ 28 ರಂದು ಬೆಳಿಗ್ಗೆ 9 ಗಂಟೆಯಿಂದ ಹಮ್ಮಿಕೊಳ್ಳಲಾಗಿದೆ. ಸದಸ್ಯರು, ಪಿಂಚಣಿದಾರರು ಮತ್ತು ಉದ್ಯೋಗದಾತರು ಈ ಕಾರ್ಯಕ್ರಮದ ಸದುಪಯೋಗ ಪಡೆಯುವಂತೆ ಚಿಕ್ಕಮಗಳೂರು ಪ್ರಾದೇಶಿಕ ಕಚೇರಿಯ ಭವಿಷ್ಯ ನಿಧಿ ಆಯುಕ್ತರು ಕೋರಿದ್ದಾರೆ.

## ಪರಿಹಾರದ ಹಣ ಬಿಡುಗಡೆಗೆ ಆಗ್ರಹಿಸಿ ಮೆಸ್ಕಾಂಗೆ ಕನ್ನಡಸೇನೆ ಮನವಿ

**ಚಿಕ್ಕಮಗಳೂರು:** ವಿದ್ಯುತ್ ಸ್ಪರ್ಶಿಸಿ ಸಾವನ್ನಪ್ಪಿರುವ ಕುಟುಂಬಕ್ಕೆ ಉಸ್ತುವಾರಿ ಸಚಿವರು ಘೋಷಿಸಿರುವ ಪರಿಹಾರದ ಹಣವನ್ನು ಬಿಡುಗಡೆ ಮಾಡಬೇಕು ಎಂದು ನೊಂದ ಕುಟುಂಬಸ್ಥರು ಕನ್ನಡ ಸೇನೆ ನೇತೃತ್ವದಲ್ಲಿ ಮೆಸ್ಕಾಂ ಇಲಾಖೆ ಅಧಿಕಾರಿ ಮಂಜುನಾಥ್‌ಗೆ ಇಂದು ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಕನ್ನಡಸೇನೆ ಜಿಲ್ಲಾಧ್ಯಕ್ಷ ಪಿ.ಸಿ.ರಾಜೇಗೌಡ ಕಳೆದ ಜನವರಿ ತಿಂಗಳಿನಲ್ಲಿ ಕೂದುವಳ್ಳಿ ಗ್ರಾಮದ ಹೂವೇಗೌಡ ಎಂಬುವವರು ಕಾಫಿ ತೋಟದಲ್ಲಿ ತೆರಳುವಾಗ ವಿದ್ಯುತ್ ಸ್ಪರ್ಶಿಸಿ ಬಿದ್ದಿದ್ದು, ಜಿಲ್ಲಾಸ್ಪತ್ರೆಗೆ ಕರೆದುಕೊಂಡು ಹೋಗುವಷ್ಟರಲ್ಲಿ ಮೃತರಾಗಿದ್ದರು ಎಂದರು.

ಅದೇ ಮರುದಿನ ಗಣರಾಜ್ಯೋತ್ಸವದಲ್ಲಿ ಉಸ್ತುವಾರಿ ಸಚಿವರು




ಈ ಬಗ್ಗೆ ವಿಷಯ ತಿಳಿಸಿಕೊಂಡು ಮಾನವೀಯ ದೃಷ್ಟಿಯಿಂದ 2 ಲಕ್ಷರೂ. ಪರಿಹಾರ ಘೋಷಿಸಿದ್ದರು. ಆದರೆ, ಇದಾದ ಬಳಿಕ ಪರಿಹಾರದ ಮೊತ್ತವನ್ನು ಪಡೆಯಲು ಅಗತ್ಯ ದಾಖಲಾತಿಗಳನ್ನು ಸಲ್ಲಿಸಿ ಆರೇಳು ತಿಂಗಳು ಕಳೆದರೂ ಅಧಿಕಾರಿಗಳು ಸಂಬಂಧವಿಲ್ಲದಂತೆ ವರ್ತಿಸಿ ಸತಾಯಿಸುತ್ತಿದ್ದಾರೆ ಎಂದು ತಿಳಿಸಿದರು.

ಈ ನಡುವೆ ಉಸ್ತುವಾರಿ ಮಂತ್ರಿಗಳು ಜಿಲ್ಲೆಗೆ ಭೇಟಿನೀಡಿದ ವೇಳೆಯಲ್ಲೂ ಪರಿಹಾರ ನೀಡಲು ಸೂಚಿಸಿದ್ದರು. ಈ ಕುರಿತು ಮೆಸ್ಕಾಂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಅಲ್ಲದೇ ಮೃತ ಕುಟುಂಬವು ತೀವ್ರ ಬಡವರಾದ ಕಾರಣ ಜೀವನಾಧಾರ ಕಷ್ಟವಾಗಿದೆ. ಅಲ್ಲದೇ ಅವರ ಮಗ ಅಪಘಾತಕ್ಕೀಡಾಗಿ ಕಾಲಿಗೆ ಗಂಭೀರವಾಗಿ ಗಾಯವಾಗಿದ್ದು, ಜೀವನ ಸುಧಾರಿಸಿಕೊಳ್ಳುವುದು ಕಷ್ಟವಾಗಿದೆ ಎಂದರು.

ಈ ಸಂದರ್ಭದಲ್ಲಿ ಕನ್ನಡಸೇನೆ ಮುಖಂಡರುಗಳಾದ ಕಳವಾಸೆ ರವಿ, ಹುಣಸೇಮಕ್ಕಿ ಲಕ್ಷ್ಮಣ್, ಸುಜಾತ, ಚೈತ್ರಗೌಡ, ನೊಂದ ಕುಟುಂಬವರಾದ ವಿನೋದ, ಚಂದ್ರಶೇಖರ್, ಜನನಿ ಮತ್ತಿತರರಿದ್ದರು.

## ಗೌರಿಕಾಲುವೆ ಶ್ರೀ ವಿದ್ಯಾಗಣಪತಿ ಪ್ರತಿಷ್ಠಾಪನೆಗೆ ಭೂಮಿಪೂಜೆ



**ಚಿಕ್ಕಮಗಳೂರು:** ನಗರದ ಗೌರಿಕಾಲುವೆಯ ಛಾಯಾಪುತ್ರ ಯುವಕರ ಸಂಘದಿಂದ ಆರು ದಿನಗಳ ಕಾಲ ಪ್ರತಿಷ್ಠಾಪಿಸಲಿರುವ ಶ್ರೀ ವಿದ್ಯಾಗಣಪತಿಗೆ ಸಂಘದ ಪದಾಧಿಕಾರಿಗಳು ಭೂಮಿ ಪೂಜೆ ನೆರವೇರಿಸುವ ಮೂಲಕ ಗಣೇಶೋತ್ಸವಕ್ಕೆ ಅಧಿಕೃತವಾಗಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳಾದ ಚೇತನ್, ಸಂತೋಷ್, ಪುನೀತ್, ಪ್ರವೀಣ್, ರವಿ, ಗಿರೀಶ್, ನಂಜೇಶ್, ನವೀನ್, ತ್ಯಾಗರಾಜ್, ಲೋಹಿತ್, ಪುನೀತ್, ಸುಜನ್, ವರುಣ್, ಅಭಿ, ಸುಜಿತ್, ಶ್ರೀಕಾಂತ್, ಸುಜಾತ, ಜಾನುಕಮ್ಮ, ದರ್ಶನ್ ಮತ್ತಿತರರು ಹಾಜರಿದ್ದರು.

## ಆ.22 ಮಂತ್ರಾಲಯದಲ್ಲಿ ಅಂತರಾಜ್ಯ ಸಾಹಿತ್ಯ ಸಮ್ಮೇಳನ: ಸೂರಿಶ್ರೀನಿವಾಸ್

**ಚಿಕ್ಕಮಗಳೂರು:** ಕನ್ನಡ ಸಾಹಿತ್ಯ ಪರಿಷತ್ತಿನ ಇತಿಹಾಸದಲ್ಲೇ ಇದೇ ಪ್ರಥಮ ಬಾರಿಗೆ ಅಂತರಾಜ್ಯ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಆ.22 ರಂದು ಮಂತ್ರಾಲಯದಲ್ಲಿ ಆಯೋಜಿಸಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ಹೇಳಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಗೋವಾ ಗಡಿನಾಡ ಜಿಲ್ಲೆಗಳು ಹಾಗೂ ಚಿಕ್ಕಮಗಳೂರು ಕಸಾಪ ಜಿಲ್ಲಾ ಘಟಕಗಳು ಒಳಗೊಂಡಂತೆ ನಾಡೋಜ ಡಾ.ಮಹೇಶ್ ಜೋಷಿ ಅವರ ನೇತೃತ್ವದಲ್ಲಿ ಈ ಸಮ್ಮೇಳನ ನಡೆಯುತ್ತಿದೆ ಎಂದು ತಿಳಿಸಿದರು.

ಸಮ್ಮೇಳನದ ಅಧ್ಯಕ್ಷರನ್ನಾಗಿ ಡಾ. ಪ್ರದೀಪ್‌ಕುಮಾರ್ ಹೆಬ್ರಿ ಅವರನ್ನು ಆಯ್ಕೆಮಾಡಲಾಗಿದೆ. ಮಂತ್ರಾಲಯ ಪೀಠದ ಶ್ರೀ ಸುಭುದೇಂದ್ರ ತೀರ್ಥರು ಸಾನಿಧ್ಯ ವಹಿಸಲಿದ್ದು, ಭುವನೇಶ್ವರಿ ಭಾವಚಿತ್ರ ಅನಾವರಣವನ್ನು ನಾಡೋಜ ಡಾ.



ಮಹೇಶ್‌ಜೋಷಿ ಅವರು ನೆರವೇರಿಸಲಿದ್ದಾರೆ. ಸಮ್ಮೇಳನದ ಅಧ್ಯಕ್ಷರ ಭಾಷಣದ ಪ್ರತಿಯನ್ನು ಡಾ. ಬಿ.ಎಂ. ಪಟೇಲ್ ಪಾಂಡು ಮತ್ತು ಮದನ್‌ಗೌಡ ಇವರು ನೆರವೇರಿಸಲಿದ್ದು, ತೆಲಂಗಾಣ ಗಡಿನಾಡು ಜಿಲ್ಲೆಯ ಘಟಕದ ಅಧ್ಯಕ್ಷ ಡಾ. ಗುಡಗುಂಟಿ ವಿಠಲ ಅವರು ಪ್ರಾಸ್ತಾವಿಕ ಮಾತನಾಡಲಿದ್ದಾರೆ. ಜಿಲ್ಲಾ ಕಸಾಪ ಅಧ್ಯಕ್ಷ ಸೂರಿ ಶ್ರೀನಿವಾಸ್ ಆದ ನಾನು ಆಶಯ ನುಡಿಗಳನ್ನಾಡಲಿದ್ದೇನೆ ಎಂದು ಹೇಳಿದರು.

ಕಸಾಪ ಕೋಶಾಧ್ಯಕ್ಷ ಡಿ. ಆರ್.ವಿಜಯ್‌ಕುಮಾರ್, ಅಂಜನ್‌ಕುಮಾರ್, ಸೋಮಶೇಖರ್ ಜಮಕಟ್ಟಿ, ಡಾ. ಸಿದ್ದಣ್ಣ ಸಂಗಪ್ಪ ಮೇಟಿ ಭಾಗವಹಿಸಲಿದ್ದಾರೆ ಎಂದರು.

ಗಡಿನಾಡು ಕನ್ನಡಿಗರ ಕೊಡುಗೆ ಎಂಬ ಗೋಷ್ಠಿ ಅಂದು ಬೆಳಗ್ಗೆ ಆರಂಭವಾಗಲಿದ್ದು, ತೆಲಂಗಾಣ ಹಿರಿಯ ಸಾಹಿತಿ ಅಮರ ದೀಕ್ಷಿತ್ ಪ್ರವೇಶ ನುಡಿಯನ್ನಾಡಲಿದ್ದಾರೆ. ಸಾಹಿತಿ ಕಿಶನ್ ರಾವ್ ಅಧ್ಯಕತೆ ವಹಿಸಲಿದ್ದಾರೆ. ಸಾಹಿತಿ ಧರ್ಮೇಂದ್ರ ಪೂಜಾರಿ ವಿಷಯ ಮಂಡನೆ ಮಾಡಲಿದ್ದಾರೆ ಎಂದು ತಿಳಿಸಿದರು.

ಕುಮಾರವ್ಯಾಸ ಕಥಾ ಪ್ರಸಂಗದ ಗಮಕ ಗೋಷ್ಠಿ ಎರಡನೆ ಅವಯಲ್ಲಿ ಆರಂಭವಾಗಲಿದ್ದು ಚಂದ್ರಕಲಾ ಕೊಪ್ಪ ಗೋಷ್ಠಿ ಉದ್ಘಾಟಿಸಲಿದ್ದಾರೆ. ತರೀಕೆರೆಯ ಸುನಿತಕಿರಣ್ ಗಮಕ ವಾಚಿಸಲಿದ್ದಾರೆ. ರಾಮಸುಬ್ರಾಯಶೇಟ್ ವ್ಯಾಖ್ಯಾನ ಮಾಡಲಿದ್ದಾರೆ ಎಂದರು.

ಮೂರನೇ ಬಹುಭಾಷಾ ಕವಿಗೋಷ್ಠಿಯ ಅಧ್ಯಕ್ಷತೆಯನ್ನು ತೆಲಂಗಾಣದ ಸಾಹಿತಿ ಚಂದಕ ಚರ್ಲಾ ರಮೇಶ್ ಬಾಬು ವಹಿಸಲಿದ್ದು, ಡಾ.ಮುನಿಸ್ವಾಮಿ ಉದ್ಘಾಟಿಸಲಿದ್ದಾರೆ. ಸಮಾರೋಪ ಸಮಾರಂಭದಲ್ಲಿ ಡಾ. ಅರುಣ್ ಯೋಗಿರಾಜ್ ಅವರನ್ನು ಸನ್ಮಾನಿಸಾಗುವುದು. ವಿವಿಧ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದ 5 ರಾಜ್ಯಗಳ ಸಾಧಕರನ್ನು ಗುರುತಿಸಿ ಕನ್ನಡ ಸಿರಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ರಮೇಶ್‌ಬೇಗಾರ್, ಗಿರಿಯಾಚಾರ್ಯ, ತಾರಾಮತಿ ಕುಲಕರ್ಣಿ ಅವರಿಗೆ ಸಾಹಿತ್ಯ ಸಿರಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕಸಾಪ ತಾಲೂಕು ಅಧ್ಯಕ್ಷ ಮಾವಿನಕೆರೆ ದಯಾನಂದ, ಮಹುಳಾ ಘಟಕದ ತಾಲ್ಲೂಕು ಅಧ್ಯಕ್ಷೆ ವಿಜಯಲಕ್ಷ್ಮಿ, ಹೋಬಳಿ ಅಧ್ಯಕ್ಷೆ ವೀಣಾ, ಸಚಿನ್‌ಸಿಂಗ್ ಸಂದೀಪ್. ಟಿ ಇದ್ದರು.

## ಇಂದು ದಿ.ದೇವರಾಜ ಅರಸು ಜನ್ಮ ದಿನಾಚರಣೆ

**ಚಿಕ್ಕಮಗಳೂರು, ಆ. 19:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಸಂಯುಕ್ತ ಆಶ್ರಯದಲ್ಲಿ ಆಗಸ್ಟ್ 20 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಪೊಲೀಸ್ ಸಮುದಾಯ ಭವನದಲ್ಲಿ ಪರಿವರ್ತನೆಯ ಹರಿಕಾರ ಮಾಜಿ ಮುಖ್ಯಮಂತ್ರಿ ದಿ. ಡಿ.ದೇವರಾಜ ಅರಸುರವರ 110ನೇ ಜನ್ಮ ದಿನಾಚರಣೆ ಸಮಾರಂಭ ನಡೆಯಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಜೆ.ಜಾರ್ಜ್ ಅವರು ಉದ್ಘಾಟಿಸುವರು. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವ ಶಿವರಾಜ್ ತಂಗಡಗಿ, ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಭಾಗವಹಿಸಲಿದ್ದಾರೆ.

## ಜಿಲ್ಲೆಯಲ್ಲಿ ಹೆಚ್ಚಿದ ಮಳೆ: ಮಲೆನಾಡಿನಲ್ಲಿ ಮರಗಳು ಧರೆಗೆ–ಜೀವಭಯದಲ್ಲಿ ಜನತೆ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಸತತವಾಗಿ ಮಳೆ ಸುರಿಯುತ್ತಿರುವುದರಿಂದ ಮಲೆನಾಡಿನಲ್ಲಿ ಮರಗಳು ಧರೆಗುರುಳುತ್ತಿವೆ. ಕಳಸ ತಾಲೂಕಿನ ಸುಂಕಸಾಲೆಯ ಮನೆಯ ಹಿಂಭಾಗದಲ್ಲಿ ಧರೆ ಕುಸಿದಿದ್ದು, ಮೂರು ಕುಟುಂಬಗಳು ಜೀವಭಯದಲ್ಲೇ ದಿನ ದೂಡುತ್ತಿವೆ.

ಲಿಂಗದಹಳ್ಳಿಯ ಕಲ್ಲತ್ತಿಗಿರಿಯಲ್ಲಿ ಭಾರಿ ಮಳೆ–ಗಾಳಿಯಿಂದ ಮರವೊಂದು ಕಾರಿನ ಮೇಲೆ ಬಿದ್ದಿದ್ದು, ವಾಹನ ಜಖಂಗೊಂಡಿದೆ. ಬೇರೆ ಯಾವುದೇ ತೊಂದರೆ ಸಂಭವಿಸಿಲ್ಲ.

ಕಾಫಿನಾಡಲ್ಲಿ ವರುಣನ ಅಬ್ಬರ ಜೋರಾಗಿದ್ದು. ಕಳೆದ ಕೆಲ ದಿನಗಳಿಂದ ಮಳೆರಾಯ ಮಲೆನಾಡನ್ನು ಬಿಟ್ಟೂ ಬಿಡದೆ ಕಾಡತೊಡಗಿದ್ದಾನೆ. ಕಳಸ ತಾಲೂಕಿನ ಸುಂಕಸಾಲೆ ಗ್ರಾಮದಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಮನೆಯ ಹಿಂದಿನ ಧರೆ ಕುಸಿತವಾಗಿದ್ದು. ಮತ್ತಷ್ಟು ಮಳೆ ಜೋರಾದರೆ ಸಂಪೂರ್ಣ ಧರೆ ಕುಸಿತವಾಗುವ ಭೀತಿ ಎದುರಾಗಿದ್ದು. 3 ಕುಟುಂಬಗಳು



ಜೀವಭಯದೊಂದಿಗೆ ಆತಂಕದಲ್ಲೇ ದಿನ ದೂಡುವಂತಾಗಿದೆ.

ಭಾರೀ ಗಾಳಿ–ಮಳೆಯಿಂದ ಬೃಹತ್ ಮರವೊಂದು ಮನೆ ಮೇಲೆ ಬಿದ್ದು, ಮನೆ ಸಂಪೂರ್ಣ ಹಾನಿಗೊಳಗಾಗಿ ಗೃಹೋಪಯೋಗಿ ವಸ್ತುಗಳು ನಾಶವಾಗಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಕಳಸ ತಾಲೂಕು ಮರಸಣಿಗೆ ಗ್ರಾಮದಲ್ಲಿ ನಡೆದಿದೆ.

ಮರ ಬೀಳುವ ಶಬ್ದ ಕೇಳುತ್ತಿದ್ದಂತೆ ಮನೆಯೊಳಗಿದ್ದವರು ತಕ್ಷಣ ಹೊರಬಂದು ಜೀವಾಪಾಯದಿಂದ ಪಾರಾಗಿದ್ದಾರೆ. ಆದರೆ ಮನೆಯಲ್ಲಿದ್ದ ಪ್ರೇಮ ಎಂಬುವರ ಮೇಲೆ ಮರದ ರೆಂಬೆ ಬಿದ್ದ ಪರಿಣಾಮ ಗಾಯಗೊಂಡಿದ್ದಾರೆ.

ಅವರನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ತಾಲೂಕು ಅಧಿಕಾರಿಗಳು ಸೇರಿದಂತೆ ಹಾಗೂ ಗ್ರಾಮ ಪಂಚಾಯಿತಿ ಸದಸ್ಯರು ಭೇಟಿನೀಡಿ ಪರಿಶೀಲನೆ ನಡೆಸಿದ್ದಾರೆ. ಹಾನಿಗೊಳಗಾದ ಕುಟುಂಬಕ್ಕೆ ನೆರವು ನೀಡುವ ಭರವಸೆಯನ್ನು ಅಧಿಕಾರಿಗಳು ನೀಡಿದ್ದಾರೆ. ಮಲೆನಾಡಿನಲ್ಲಿ ಮಳೆಯ ಅಬ್ಬರ ಮುಂದುವರಿದಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಅಗತ್ಯ ಎಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ಮಲೆನಾಡಲ್ಲಿ ಮಳೆ ಅಬ್ಬರ ಮುಂದುವರೆದಿದ್ದು, ಜಿಲ್ಲೆಯಲ್ಲಿರುವ ನದಿಗಳು ಮೈದುಂಬಿ ಹರಿಯುತ್ತಿವೆ. ಇತ್ತ ಚಿಕ್ಕಮಗಳೂರು ನಗರ ಸೇರಿದಂತೆ ಬಯಲು ಪ್ರದೇಶದಲ್ಲಿ ಮಳೆ ಸ್ವಲ್ಪ ಕ್ಷೀಣಿಸಿದ್ದು, ಘಟ್ಟ ಪ್ರದೇಶದಲ್ಲಿ ಮಳೆಅಬ್ಬರ ಮುಂದುವರೆದಿದೆ.

ಶೃಂಗೇರಿ ತಾಲೂಕಿನ ಕೆರೆಕಟ್ಟೆ, ಕಳಸ ತಾಲೂಕಿನ ಕುದುರೆಮುಖ ಘಟ್ಟ ಪ್ರದೇಶದಲ್ಲಿ ಜೋರು ಮಳೆಬೀಳುತ್ತಿದೆ. ತುಂಗಾ–ಭದ್ರಾ ನದಿಗಳಿಗೆ ಭಾರೀ ಪ್ರಮಾಣದ ನೀರು ಹರಿಯುತ್ತಿದ್ದು, ನದಿ ಪಾತ್ರದ ಜನರಿಗೆ ಎಚ್ಚರಿಕೆಯಿಂದಿರುವಂತೆ ಜಿಲ್ಲಾಡಳಿತ ಸೂಚಿಸಿದೆ. ನದಿ ಪಾತ್ರದ ಹೊಲಗದ್ದೆ, ತೋಟಗಳಿಗೆ ತೆರಳುವವರು, ದನಕರುಗಳಿಗೆ ನೀರುಣಿಸಲು, ಬಟ್ಟೆ ತೊಳೆಯಲು ಹೋಗದಂತೆ ಎಚ್ಚರಿಕೆ ನೀಡಿದ್ದು, ತಗ್ಗು ಪ್ರದೇಶದಲ್ಲಿ ವಾಸಿಸುವ ಜನರಿಗೂ ಎಚ್ಚರಿಕೆಯ ಸಂದೇಶ ರವಾನಿಸಲಾಗಿದೆ.

## ಮೊಳಕಾಲ್ಮೂರು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಖಾಯಂ ಹೆರಿಗೆ ಪ್ರಸೂತಿ ವೈದ್ಯರನ್ನು ನೇಮಿಸಲು ಆಗ್ರಹ

**ಮೊಳಕಾಲ್ಮೂರು:** ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಖಾಯಂ ಹೆರಿಗೆ ಪ್ರಸೂತಿ ವೈದ್ಯರನ್ನು ನೇಮಿಸಬೇಕೆಂದು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯೆ ಕೆ.ಜೆ. ಜಯಲಕ್ಷ್ಮಿ ಆಗ್ರಹಿಸಿದ್ದಾರೆ.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳನ್ನು ನೇಮಿಸಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಿ ಮಾತನಾಡಿದ, ಅವರು ಈ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ವೈದ್ಯರು ವರ್ಗಾವಣೆಯಾಗಿದ್ದು ಹೆರಿಗೆ ವೈದ್ಯರ ಸಮಸ್ಯೆ ಕಾಡುತ್ತಿದೆ. ಹೆಸರಿಗೆ ಮಾತ್ರ ನೂರು ಹಾಸಿಗೆಗಳ ಆಸ್ಪತ್ರೆಯಾಗಿದ್ದು, ಸಮರ್ಪಕವಾದ ಮಹಿಳಾ ಪ್ರಸೂತಿ ತಜ್ಞರು ಸೇರಿದಂತೆ ಹಲವಾರು ವೈದ್ಯರು ಮತ್ತು ಸಿಬ್ಬಂದಿಗಳಿಲ್ಲದೆ ಈ ಭಾಗದ ಗುಡ್ಡಗಾಡು ಪ್ರದೇಶದ ಬಡ ಕುಟುಂಬಗಳ ಹೆಣ್ಣು ಮಕ್ಕಳು ಆತಂಕದಲ್ಲಿದ್ದಾರೆ. ಗುಡ್ಡಗಾಡು ಪ್ರದೇಶದ ಹೆಣ್ಣು ಮಕ್ಕಳು ಆಸ್ಪತ್ರೆಗೆ ಹಾಗೂ ಇನ್ನಿತರ ಕೆಲಸ ಕಾರ್ಯಗಳಿಗಾಗಿ ಸಂಚರಿಸಲು ಬಡ ಜನತೆಗೆ ಸಾರಿಗೆ ಸೌಲಭ್ಯವಿಲ್ಲದಂತಾಗಿದ್ದರಿಂದ ಮುಖ್ಯಮಂತ್ರಿಗಳು ಸಾರಿಗೆ ಸೌಲಭ್ಯ ಕಲ್ಪಿಸಬೇಕಾಗಿದೆ. ಹಿಂದುಳಿದ ಈ ತಾಲೂಕಿನ ದೂರದ ಗುಡ್ಡಗಾಡು ಪ್ರದೇಶದಿಂದ ಸರ್ಕಾರಿ ಆಸ್ಪತ್ರೆಗೆ ಹೆರಿಗೆಗೆಂದು ಬರುವ ಬಹುತೇಕ ಬಡ ಕುಟುಂಬದ ಹೆಣ್ಣುಮಕ್ಕಳು ಹೆರಿಗೆ ವೈದ್ಯರಿಲ್ಲದೆ ಪ್ರಾಣ ಭೀತಿಯಲ್ಲಿರುವಂತಾಗಿದೆ. ಈ ಆಸ್ಪತ್ರೆಯಲ್ಲಿ ಹೆರಿಗೆ ಪ್ರಸೂತಿ ತಜ್ಞರಿಲ್ಲದ ಹಿನ್ನೆಲೆ ದೂರದ ಬಳ್ಳಾರಿ, ಚಿತ್ರದುರ್ಗ, ಬೆಂಗಳೂರು ಸೇರಿದಂತೆ ಇನ್ನಿತರ ನಗರ ಪ್ರದೇಶಗಳ ಆಸ್ಪತ್ರೆಗೆ ಕಳುಹಿಸುತ್ತಿರುವುದರಿಂದ ಬಡ ಕುಟುಂಬದ ಹೆಣ್ಣು ಮಕ್ಕಳಿಗೆ ನಗರ ಪ್ರದೇಶದ ಆಸ್ಪತ್ರೆಗಳಿಗೆ ಹೋಗಲಾಗದೆ ಗಂಭೀರ ಸಮಸ್ಯೆ ಅನುಭವಿಸುವಂತಾಗಿದೆ.

ರಾಜ್ಯದಲ್ಲಿ ಮುಖ್ಯಮಂತ್ರಿಯವರು ಸಾಕಷ್ಟು ಭಾಗ್ಯಗಳನ್ನು ನೀಡಿದಂತೆ ತಾಲೂಕಿಗೆ ಹೆರಿಗೆ



ಪ್ರಸೂತಿ ವೈದ್ಯರ ಭಾಗ್ಯ ನೀಡಬೇಕಾಗಿದೆ. ಈ ಭಾಗದವರು ಆರ್ಥಿಕವಾಗಿ ಹಿಂದುಳಿದಿರುವುದರಿಂದ ದೂರದ ನಗರ ಪ್ರದೇಶದ ಆಸ್ಪತ್ರೆಗಳಿಗೆ ಹೋಗಲಾಗದೆ ಅಶಕ್ತರಾಗುರುವುದರಿಂದ ಬಡ ಹೆಣ್ಣು ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಈ ಆಸ್ಪತ್ರೆಗೆ ಹೆರಿಗೆ ಪ್ರಸೂತಿ ತಜ್ಞರನ್ನು ನೀಡಬೇಕಾಗಿದೆ. ಹಾಗೆಯೇ ಈ ನೂರು ಹಾಸಿಗೆಗಳ ಆಸ್ಪತ್ರೆಯಲ್ಲಿ ಹೆರಿಗೆ ಪ್ರಸೂತಿ ತಜ್ಞರು ಸೇರಿದಂತೆ ಇನ್ನಿತರ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆಯಿದ್ದು, ಕೂಡಲೇ ಖಾಲಿಯಿರುವ ಹುದ್ದೆಗಳಿಗೆ ನೇಮಿಸಬೇಕಾಗಿದೆ. ನಮ್ಮ ಸರ್ಕಾರವಿದ್ದು, ಸರ್ಕಾರಕ್ಕೆ ಮುಜುಗರ ಉಂಟು ಮಾಡುವ ಉದ್ದೇಶವಿರುವುದಿಲ್ಲ. ಬಡ ಹೆಣ್ಣು ಮಕ್ಕಳ ಧ್ವನಿಯಾಗಿ ಮನವಿ ಮಾಡಿಕೊಳ್ಳಲಾಗುತ್ತಿದ್ದು, ಗಂಭೀರವಾಗಿ ಪರಿಗಣಿಸಿ ಗಡಿ ತಾಲೂಕಿಗೆ ಕೂಡಲೇ ಹೆರಿಗೆ ಪ್ರಸೂತಿ ವೈದ್ಯರ ಸೌಲಭ್ಯ ಕಲ್ಪಿಸಬೇಕೆಂದು ಒತ್ತಾಯಿಸಿದರು.

ಆಸ್ಪತ್ರೆಯ ಮಹಿಳಾ ಪ್ರಸೂತಿ ವೈದ್ಯರಿಗಾಗಿ ಮಹಿಳೆಯರೇ ಹೋರಾಟ ಮಾಡಲಾಗುತ್ತಿದ್ದು, ಮಹಿಳೆಯರ ಆರೋಗ್ಯದ ಹಿತದೃಷ್ಟಿಯಿಂದ ಕೂಡಲೇ ಹೆರಿಗೆ ಪ್ರಸೂತಿ ವೈದ್ಯರನ್ನು ನೇಮಿಸಬೇಕು. ಹೆಣ್ಣುಮಕ್ಕಳೆಂದು ನಿರ್ಲಕ್ಷವಹಿಸದೆ ಹೆಣ್ಣು ಮಕ್ಕಳ ಆರೋಗ್ಯಕ್ಕಾಗಿ ಹೆರಿಗೆ ವೈದ್ಯರನ್ನು ನೀಡಬೇಕಾಗಿದೆ. ಈ ಆಸ್ಪತ್ರೆಯಲ್ಲಿ ಹೆರಿಗೆ ಪ್ರಸೂತಿ ವೈದ್ಯರಿಲ್ಲದಿರುವುದರಿಂದ ಬೇರೆ ದೂರದ ನಗರ ಪ್ರದೇಶದ ಆಸ್ಪತ್ರೆಗೆ ಕಳುಹಿಸಲಾಗುತ್ತಿದೆ. ಬಡ ಕೂಲಿ ಕಾರ್ಮಿಕರಾಗಿರುವ ನಮಗೆ ಹೆಚ್ಚಿನ ಹಣ ಖರ್ಚ ಮಾಡಲು ಸಾಧ್ಯವಾಗದೆ ಪ್ರಾಣ ಕಳೆದುಕೊಳ್ಳುವಂತಾಗಿದೆ. ಹಾಗಾಗಿ ಸಂಬಂಧಿತ ಅಧಿಕಾರಿಗಳು ಸರ್ಕಾರದ ಗಮನ ಸೆಳೆದು ಕೂಡಲೇ ಮಹಿಳಾ ಹೆರಿಗೆ ವೈದ್ಯರನ್ನು ನೇಮಿಸಬೇಕೆಂದು ಒತ್ತಾಯಿಸಿದರು.

ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಗಿರೀಶ್ ಅವರಿಗೆ ಬೇಡಿ–ಕೆಯ ಮನವಿ ಸಲ್ಲಿಸಿದರು. ಈ ಪ್ರತಿಭಟನೆಯಲ್ಲಿ ಬಹುಜನ ಒಕ್ಕೂಟದ ಎಸ್.ಪರಮೇಶ್, ಗ್ರಾ.ಪಂ.ನ ಸದಸ್ಯ ಪಾಲಯ್ಯ, ಪ್ರತಿಭಟನಾಕಾರರಾದ ಶಿವು, ದುರುಗಮ್ಮ, ರೂಪಕ್ಕ, ಮಾರಕ್ಕ, ಕಮಲಮ್ಮ, ಮೀನಾಕ್ಷಿ, ರಾಧಮ್ಮ, ಸವಿತ, ಕೆ.ಲಕ್ಷ್ಮಿ, ತಿಪ್ಪಕ್ಕ, ಹೊನ್ನೂರಮ್ಮ, ತಿಪ್ಪಮ್ಮ ಹಾಗೂ ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು

## ಅಂತರ ಬೆಳೆಯಿಂದ ಅಡಿಕೆ, ತೆಂಗು ಮತ್ತು ಬಾಳೆ ಸುಸ್ಥಿರ ಇಳುವರಿ: ರಜನಿಕಾಂತ್

**ಚಿತ್ರದುರ್ಗ :** ಸುಧಾರಿತ ತಾಂತ್ರಿಕತೆ ಹಾಗೂ ಅಂತರ ಬೆಳೆ ಅಳವಡಿಕೆಯಿಂದ ಅಡಿಕೆ ತೆಂಗು ಮತ್ತು ಬಾಳೆ ಬೆಳೆಯಲ್ಲಿ ಸುಸ್ಥಿರ ಇಳುವರಿ ಪಡೆಯಲು ಸಾಧ್ಯ ಎಂದು ಜಿಲ್ಲಾ ಕೃಷಿ ತರಬೇತಿ ಮುಖ್ಯಸ್ಥ ರಜನೀಕಾಂತ ಹೇಳಿದರು.

ಇತ್ತೀಚಿಗೆ ಹಿರಿಯೂರು ತಾಲ್ಲೂಕು ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ, ಜಿಲ್ಲೆಯ ರೈತರಿಗೆ ಅಡಿಕೆ, ತೆಂಗು ಮತ್ತು ಬಾಳೆ ಬೆಳೆಗಳಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳ ಕುರಿತು 3 ದಿನಗಳ ತರಬೇತಿ ಕಾರ್ಯಾಗಾರದ ಉದ್ಘಾಟನೆ ಕಾರ್ಯಕ್ರಮದಲ್ಲಿ ಪ್ರಸ್ತಾವಿಕವಾಗಿ ಅವರು ಮಾತನಾಡಿದರು.

ಇತ್ತಿಚಿನ ದಿನದಲ್ಲಿ ರೈತರು ಹೆಚ್ಚಿನದಾಗಿ ಅಡಿಕೆ, ತೆಂಗು ಮತ್ತು ಬಾಳೆ ಬೆಳೆಯಲು ಆಸಕ್ತಿ ತೋರುತ್ತಿದ್ದಾ–ರೆ. ಈ ಮೂರು ದಿನಗಳ ತರಬೇತಿಯಲ್ಲಿ ನೀಡುವ ತಾಂತ್ರಿಕ ಮಾಹಿತಿ ಮತ್ತು ಯಶಸ್ವಿ ಪ್ರಗತಿಪರ ರೈತರ ಅನುಭವ ಹಾಗೂ ವಿವಿಧ ಅಂತರ ಬೆಳೆಗಳನ್ನು ಕುರಿತ ಮಾಹಿತಿಯನ್ನು ರೈತರು ಸದುಪಯೋಗ ಪಡೆದುಕೊಂಡು ತಮ್ಮ ತಾಕಿನಲ್ಲಿ ಅಳವಡಿಸಿಕೊಳ್ಳುವುದರಿಂದ ಸುಸ್ಥಿರ ಇಳುವರಿ ಪಡೆಯಲು ಸಾಧ್ಯವಾಗುತ್ತದೆ ಎಂದರು.

ತುಮಕೂರು ತಾಲ್ಲೂಕಿನ ಬೆಳ್ಳಾವಿ ಕ್ರಾಸ್ ಹತ್ತಿರವಿರುವ ಕುರಿಕೆಂಪನಹಳ್ಳಿ ಗ್ರಾಮದ ಪ್ರಗತಿಪರ ರೈತ ಹಫೀಜ್ ಉಲ್ಲಾ ಖಾನ್ ಮಾತನಾಡಿ ಮುಂದಿನ ಪೀಳಿಗೆಗೆ ಫಲವತ್ತಾದ ಭೂಮಿ ಮತ್ತು ವಿಶಮುಕ್ತ ಪರಿಸರ ಉಳಿಸಲು ರೈತರು ಸಾವಯವ ಅಥವಾ ನೈಸರ್ಗಿಕ ಕೃಷಿಗೆ ಒತ್ತು ನೀಡುವುದು ಅತ್ಯವಶ್ಯಕವಾಗಿದೆ. ಕೃಷಿ ಸ್ವತಃ ನಾಟಿ ಹಸುಗಳನ್ನು ಸಾಕಿ ಅವುಗಳ ಸಗಣಿ ಮತ್ತು ಗಂಜಲಿನಿಂದ ಜೀವಾಮೃತ ಮಾಡಿ ಬಳಸುತ್ತಿದ್ದು, ಅಡಿಕೆಯಲ್ಲಿ ಅಂತರ ಬೆಳೆಯಾಗಿ ಜಾಕಾಯಿ, ಏಲಕ್ಕಿ ಮತ್ತು ಮೆಣಸು ಬೆಳೆಯುವುದು ಸೂಕ್ತವೆಂದರು. ಕಳೆ ನಾಶಕ ಬಳಕೆ ಮಾಡದೆ ಅವಶ್ಯವಿದ್ದಾಗ ಕಳೆಗಳನ್ನು ಕಳೆ ಕಟಾವು ಯಂತ್ರದ ಮೂಲಕ ಕಟಾವು ಮಾಡಿ ಅಲ್ಲೆ ಭೂಹೊದಿಕೆಯಾಗಿ ಬಿಡುವುದು ಉತ್ತಮ ಎಂದರು.

ಮಸಣಾಪುರದ ಪ್ರಗತಿಪರ ರೈತ ಮೃತ್ಯುಂಜಯಪ್ಪನವರು ಮಾತನಾಡಿ ತೆಂಗು ಮತ್ತು ಅಡಿಕೆಯ ತಾಕಿನಲ್ಲಿ 100 ಕ್ಕೂ ಹೆಚ್ಚಿನ ವಿವಿಧ ಜಾತಿಯ ಹಣ್ಣು ಮತ್ತು ಸಂಬಾರು ಬೆಳೆಗಳನ್ನು ಮಿಶ್ರ ಹಾಗೂ ಬಹು ಮಹಡಿ ಪದ್ಧತಿಯಲ್ಲಿ ಬೆಳೆಯುತ್ತಿದ್ದು, ಎರೆಹುಳು ಗೊಬ್ಬರ ತಯಾರಿಕೆ, ಜೀವಾಮೃತ, ಗಂಜಲು, ಹುಳಿಮಜ್ಜಿಗೆಯ ಬಳಕೆ ಮತ್ತು ವೆಲವೆಟ್ ಬಿನ್ಸ್, ಅಲಸಂಧೆ, ಹುರಳಿ ಹಾಗೂ ಅಡಿಕೆ ಮತ್ತು ತೆಂಗಿನ ತ್ಯಾಜ್ಯವನ್ನು ಭೂಹೊದಿಕೆಯಾಗಿ ಬಳಕೆ ಮಾಡುತ್ತಿರುವುದರಿಂದ ಮಣ್ಣಿನ ತೇವಾಂಶ ಮತ್ತು ಫಲವತ್ತತೆ ಕಾಪಾಡಲು ಸಹಕಾರಿಯಗಿದೆಯಲ್ಲದೆ ಕಡಿಮೆ ವೆಚ್ಚದಲ್ಲಿ ಉತ್ತಮ ಇಳುವರಿ ಪಡೆಯಲು ಸಾಧ್ಯವಾಗಿದೆಂದರು.

ಚಳ್ಳಕೆರೆ ತಾಲ್ಲೂಕಿನ ಪಿಲ್ಲಹಳ್ಳಿಯ ಚಿತ್ರಲಿಂಗಪ್ಪ



ಮಾತನಾಡಿ, ಕೃಷಿಯಲ್ಲಿ ಆಸಕ್ತಿ ಹಾಗೂ ತಾಳ್ಮೆಯಿಂದ ರೈತರು ಬೇಸಾಯ ಮಾಡಿದರೆ ಉತ್ತಮ ಕೃಷಿಕರಾಗಬಹುದು. ಪ್ರಗತಿಪರ ಕೃಷಿಕರ ತಾಕುಗಳಿಗೆ ಭೇಟಿ ನೀಡಿ ಸದರಿ ರೈತರ ಅನುಭವನ್ನು ತೆಗೆದುಕೊಂಡು ಮತ್ತು ವಿವಿಧ ತಾಂತ್ರಿಕ ತರಬೇತಿಗಳಿಂದ ಪಡೆದ ಮಾಹಿತಿಯನ್ನು ತಮ್ಮ ತಾಕಿನಲ್ಲಿ ಸುಲಭವಾಗಿ ಅಳವಡಿಸಿಕೊಳ್ಳಬಹುದಾಗಿದೆ. ರೈತರು ತಾವು ಬೆಳೆದ ಉತ್ತನ್ನಗಳನ್ನು ತಾವೇ ಮಾರಾಟ ಮಾಡುವ ಕಲೆ ಕಲಿತರೆ ಉತ್ತಮ ಬೆಲೆ ದೊರೆಯತ್ತದೆ. ಕೃಷಿಯನ್ನು ಶ್ರದ್ದೆಯಿಂದ ಮಾಡಿದರೆ ಋಷಿತ್ವ ಕಾಣಬಹುದು ಹಾಗೂ ಉತ್ತಮ ಮೌಲ್ಯಗಳನ್ನು ಬೆಳೆಸಿಕೊಳ್ಳಬಹುದಾಗಿದೆ ಎಂದರು.

ಹಿರಿಯೂರು ತಾಲ್ಲೂಕಿನ ಹೇಮದಳದ ಪ್ರಗತಿಪರ ರೈತ ಸಿದ್ದಪ್ಪ ಮಾತನಾಡಿ ಸಮಗ್ರ ಕೃಷಿ ಪದ್ದತಿ ಅಳವಡಿಕೆಯಿಂದ ಸುಸ್ಥಿರ ಇಳುವರಿ ಪಡೆಯಲು ಸಾಧ್ಯವಿದ್ದು, ಸ್ವಾವಲಂಬನೆಯ ಜೀವನಕ್ಕೆ ಒಂದು ನಾಟಿ ಹಸುವಿರಬೇಕು ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಗಿಡ ಮರಗಳನ್ನು ನೆಡಬೇಕು. ರೈತರು ಸಮರ್ಥ ನೀರಿನ ನಿರ್ವಹಣೆ ಹಾಗೂ ಅದರ ಮಿತ ಬಳಕೆಗೆ ಹೆಚ್ಚಿನ ಆದ್ಯತೆ ನೀಡಬೇಕೆಂದರು.

ದೇವರಮರಿಕುಂಟೆ ಗ್ರಾಮದ ಡಾ.ಆರ್.ಎ.ದಯಾನಂದ ಮೂರ್ತಿ ಮಾತನಾಡಿ, ಸಾಧನೆ ಎಂಬುದು ಸಾಧಕರ ಸೊತ್ತು, ಕಡಿಮೆ ನೀರಿನಲ್ಲಿ ಹನಿನೀರಾವರಿ ಪದ್ದತಿ ಬಳಸಿ ಅಡಿಕೆ ಮತ್ತು ತೆಂಗಿನಲ್ಲಿ ಅಂತರ ಮತ್ತು ಮಿಶ್ರ ಬೆಳೆಪದ್ದತಿ ಅಳವಡಿಸಿ ಸಮಗ್ರ ಕೃಷಿ ಪದ್ದತಿಯಲ್ಲಿ ಸ್ವಾವಲಂಬನೆಯಿಂದ ಆರ್ಥಿವಾಗಿ ಮುನ್ನೆಡಯಲು ಸಾಧ್ಯವಿದೆ ಎಂದರು.

ಹಾಲಗೊಂಡನಹಳ್ಳಿಯ ರುದ್ರಮುನಿಯಪ್ಪ ಮಾತನಾಡಿ, ಸ್ಥಳೀಯ ಸಂಪನ್ಮೂಲಗಳನ್ನು ಸರಿಯಾಗಿ ಸದ್ಬಳಕೆ ಮಾಡಿಕೊಂಡು ಅಡಿಕೆ ಮತ್ತು ತೆಂಗಿನಲ್ಲಿ ಹುರಳಿ, ಅಲಸಂಧೆ, ಡಯಾಂಚ, ಸೆಣಬು, ವೆಲ್ವೆಟ್ ಬೀನ್ಸ್ ನಂತಹ ಜೀವಂತ ಹೊದಿಕೆ ಅಥವಾ ಇತರೆ ಕೃಷಿ ತ್ಯಾಜ್ಯಗಳನ್ನು ಹರಡುವುದರಿಂದ ಭೂಮಿಯಲ್ಲಿ ಜೈವಿಕ ಕ್ರಿಯೆಗಳು ಹೆಚ್ಚಾಗಿ ಉಪಕಾರಿ ಸೂಕ್ಷ್ಮಾಣು ಜೀವಿಗಳು ವೃದ್ದಿಯಾಗಿ ಮಣ್ಣಿನ ಫಲವತ್ತತೆ ಹೆಚ್ಚಾಗುತ್ತದೆ. ಇದರೊಂದಿಗೆ ಸಾವಯವ ಇಂಗಾಲ ಅಂಶ ಹೆಚ್ಚಾಗುತ್ತದೆ. ರೈತರು 2–3 ಜೇನು ಕುಟುಂಬಗಳನ್ನು ಇಟ್ಟುಕೊಳ್ಳುವುದರಿಂದ ಉತ್ತಮ ಪರಾಗ ಸ್ಪರ್ಶದಿಂದ ಶೇ 10 ರಿಂದ 15 ರಷ್ಟು ಹೆಚ್ಚಿನ ಇಳುವರಿ ಪಡೆಯಬಹುದೆಂದರು.

ಕಾರ್ಯಗಾರದಲ್ಲಿ ಹಿರಿಯೂರು ತೋಟಗಾರಿ–ಕೆ ಕಾಲೇಜು ಡೀನ್ ಹಾಗೂ ಸಸ್ಯ ರೋಗಶಾಸ್ತ್ರಜ್ಞ ಡಾ.ಸುರೇಶ್ ಏಕಬೋಟೆ, ಕೀಟಶಾಸ್ತ್ರಜ್ಞ ಡಾ.ಎಸ್. ಓಂಕಾರಪ್ಪ, ಅಡಿಕೆ, ತೆಂಗು ಮತ್ತು ಬಾಳೆ ಬೆಳೆಗಳಲ್ಲಿ ಬರುವ ಪ್ರಮುಖ ರೋಗಗಳ ಹಾಗೂ ಕೀಟ ನಿರ್ವಹಣೆ ಕುರಿತು ತರಬೇತಿ ನೀಡಿದರು.

ತೋಟಗಾರಿಕೆ ವಿಜ್ಞಾನಿ ಡಾ. ಮಹಾಂತೇಶ್ ಸದರಿ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳು, ಅಂತರ ಬೆಳೆ ಮತ್ತು ಅನುಸರಿಸಬಹುದಾದ ಸಾವಯವ ಪದ್ಧತಿಗಳ ಕುರಿತು ರೈತರಿಗೆ ಮನವರಿಕೆ ಮಾಡಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**